**ಸಂಪುಟ:** 05 **ಸಂಚಿಕೆ:** 230 **ಪುಟಗಳು:** 08 ಮಂಗಳವಾರ 04 ನವೆಂಬರ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಯಾರಿಗೆ ತನ್ನಲ್ಲಿ ತನಗೆ ನಂಬಿಕೆಯಿಲ್ಲವೋ ಅವನು ನಾಸ್ತಿಕ. ಹಳೆಯ ಧರ್ಮಗಳು ಹೇಳಿದವು. ದೇವರನ್ನು ನಂಬದವನು ನಾಸ್ತಿಕ ಎಂದು. ಹೊಸ ಧರ್ಮವು ಹೇಳುತ್ತದೆ. ಯಾರಿಗೆ ತನ್ನಲ್ಲಿ ನಂಬಿಕೆಯಿಲ್ಲವೋ ಅವನು ನಾಸ್ತಿಕ ಎಂದು.

## ನ.15ಕ್ಕೆ ದೆಹಲಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಯಾಣ

# ಸಚಿವ ಸಂಪುಟ ಪುನಾರಚನೆ ಫಿಕ್ಸ್!

• **ಉದಯವಾಹಿನಿ, ಬೆಂಗಳೂರು**

ಸಂಪುಟ ಪುನಾರಚನೆ ಬಗ್ಗೆ ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಅವರ ಜೊತೆ ಚರ್ಚೆ ಮಾಡುತ್ತೇನೆ. ಇದಕ್ಕಾಗಿಯೇ ನವಂಬರ್ 15ಕ್ಕೆ ದೆಹಲಿಗೆ ಹೋಗುತ್ತಿದ್ದೇನೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಿ.ಕೆ ಶಿವಕುಮಾರ್ ಮುಖ್ಯಮಂತ್ರಿಯಾಗಲಿ ಎಂಬ ಬಿಹಾರ ಮುಖಂಡರ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿದರು. ಪ್ರಶ್ನೆ ಕೇಳ್ತಿದ್ದಂತೆ ಮಾಧ್ಯಮಗಳ ವಿರುದ್ಧ ಗರಂ ಆದರು. ಯಾರು ಏನೇ ಹೇಳಿದ್ರೂ



ಅದು ಮುಖ್ಯವಲ್ಲ. ಕಾಂಗ್ರೆಸ್ ಹೈಕಮಾಂಡ್ ಹೇಳುವುದಷ್ಟೇ ಮುಖ್ಯ. ಕಾಂಗ್ರೆಸ್ ಹೈಕಮಾಂಡ್ ಏನಾದ್ರೂ ಹೇಳಿದ್ಯಾ ಈ ಬಗ್ಗೆ ಯಾಕೆ ಪದೆ ಪದೆ ಅದನ್ನೇ ಮಾತನಾಡ್ತೀರಾ. ಜನ ಮಾತನಾಡುತ್ತಿಲ್ಲ, ಮಾಧ್ಯಮದವರೇ ಪದೇ ಪದೇ ಮಾತನಾಡುತ್ತಿದ್ದಾರೆ ಅಂತ ಗರಂ ಆದರು. ಕಾಂಗ್ರೆಸ್‌ಗೆ ಹೈಕಮಾಂಡ್ ಇದೆ. ಹೈಕಮಾಂಡ್ ಹೇಳುವುದು ಮಾತ್ರವೇ ಮುಖ್ಯ, ಅದೇ ಅಂತಿಮ. ನಾನು ಬಿಹಾರ

**ಕರ್ನಾಟಕದಲ್ಲಿ ಬಿಹಾರದ ಮತದಾರರು ಇದ್ದಾರೆ**

ಚುನಾವಣೆ ಬಳಿಕ ರಾಹುಲ್ ಗಾಂಧಿ ಅವರನ್ನ ಭೇಟಿ ಮಾಡುತ್ತೇನೆ. ಸಂಪುಟ ಪುನಾರಚನೆ ಬಗ್ಗೆ ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಅವರೊಟ್ಟಿಗೆ ಚರ್ಚೆ ಮಾಡುತ್ತೇನೆ. ಇದಕ್ಕಾಗಿಯೇ ನವಂಬರ್ 15ಕ್ಕೆ ದೆಹಲಿಗೆ ಹೋಗುತ್ತಿದ್ದೇನೆ. ಪುನಾರಚನೆ ಬಗ್ಗೆ ಹೈಕಮಾಂಡ್ ಏನು ಹೇಳುತ್ತೋ ಆ ರೀತಿ ನಡೆದುಕೊಳ್ಳುತ್ತೇನೆ ಎಂದು ಹೇಳಿದ್ದಾರೆ ಸಿಎಂ. ನಿತೀಶ್ ಕುಮಾರ್‌ಗೆ ಸಿದ್ಧಾಂತ ಇಲ್ಲ ಇನ್ನೂ ಬಿಹಾರ ಚುನಾವಣಾ ಪ್ರಚಾರಕ್ಕೆ ಸಂಬಂಧಿಸಿದಂತೆ ಮಾತನಾಡಿ, ಪ್ರಚಾರಕ್ಕೆ ಇಲ್ಲಿಯವರೆಗೆ ನನ್ನನ್ನ ಕರೆದಿಲ್ಲ, ಕರೆದರೆ ಹೋಗುತ್ತೇನೆ.

ಬಿಹಾರದಲ್ಲಿ ಈ ಬಾರಿ ಇಂಡಿ ಒಕ್ಕೂಟ ಅಧಿಕಾರಕ್ಕೆ ಬರುತ್ತೆ. ನಿತೀಶ್ ಕುಮಾರ್ ಬಗ್ಗೆ ಜನಕ್ಕೆ ಬೇಸರ ಬಂದಿದೆ. ಏಕೆಂದ್ರೆ ಅವರಿಗೆ ಯಾವುದೇ ಸಿದ್ಧಾಂತ ಇಲ್ಲ. ಅವರು ಎಲ್ಲಾ ಪಕ್ಷಗಳನ್ನ ಬದಲಾಯಿಸಿದ್ದಾರೆ. ಈ ಕಾರಣ ಜನ ಇಂಡಿ ಒಕ್ಕೂಟದ ಪರ ಮತ ಹಾಕುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ನಮ್ಮ ಗ್ಯಾರೆಂಟಿಗಳನ್ನೇ ನಿತೀಶ್ ಕುಮಾರ್ ಅಲ್ಲಿ ಘೋಷಣೆ ಮಾಡಿದ್ದಾರೆ. ಆದರು ಅಲ್ಲಿಯ ಜನ ಅವರನ್ನ ಕೈ ಹಿಡಿಯುವುದಿಲ್ಲ. ಕರ್ನಾಟಕದಲ್ಲಿ ಬಿಹಾರದ ಮತದಾರರು ಇದ್ದಾರೆ. ಅವರಿಗೂ ನಮ್ಮ ಒಕ್ಕೂಟಕ್ಕೆ ಮತ ಹಾಕಿ ಎಂದು ಕೇಳುತ್ತೇವೆ ಎಂದು ತಿಳಿಸಿದರು.

## ಬಿಹಾರ ಸಂಘಕ್ಕೆ ಬೆಂಗಳೂರಲ್ಲಿ ಜಾಗ: ಡಿಸಿಎಂ ಹೇಳಿಕೆಗೆ ಕೆಂಡ

• **ಉದಯವಾಹಿನಿ, ಬೆಂಗಳೂರು**

ಬಿಹಾರ ಸಂಘಕ್ಕೆ ಬೆಂಗಳೂರಲ್ಲಿ ನಿವೇಶನ ನೀಡಲಾಗುವುದು ಎಂಬ ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿಕೆಗೆ ಜಾತ್ಯಾತೀತ ಜನತಾದಳ ಕಿಡಿ ಕಾರಿದೆ. ಈ ಬಗ್ಗೆ ತನ್ನ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಜೆಡಿಎಸ್, ನಮ್ಮ ತೆರಿಗೆ, ನಮ್ಮ ಹಕ್ಕು ಎಂದು ಗಂಟಲು ಹರಿದುಕೊಳ್ಳುವ ಕಾಂಗ್ರೆಸ್ಸಿಗರೇ ನಿಮ್ಮ ಡೋಂಗಿತನಕ್ಕೆ ಏನೆನ್ನಬೇಕು ಮತಕ್ಕೋಸ್ಕರ ಕನ್ನಡಿಗರ ಭೂಮಿಯನ್ನು ವಲಸಿಗರಿಗೆ ನೀಡಲು ಹೊರಟಿರುವ ನಿಮಗೆ ಧಿಕ್ಕಾರ ಎಂದು ಕಿಡಿ ಕಾರಿದೆ.

ಕನ್ನಡಿಗರ ಹಿತವನ್ನು ಕಾಪಾಡುವ ಬದಲು ಹೈಕಮಾಂಡ್ ಗುಲಾಮಗಿರಿಗಾಗಿ ಪರಭಾಷಿಕರನ್ನು ಮತಕ್ಕಾಗಿ ಓಲೈಕೆ ರಾಜಕಾರಣದಲ್ಲಿ ತೊಡಗಿದ್ದೀರಿ. ನಮ್ಮ ರಾಜ್ಯದ ಹೆಚ್ಚು ಪಾಲು ಬಿಹಾರಕ್ಕೆ ಹೋಗುತ್ತೆ, ಅಲ್ಲಿ ಉದ್ಯೋಗ ಸೃಷ್ಟಿಯಾಗದ ಕಾರಣ ಬಿಹಾರಿಗಳು ಕರ್ನಾಟಕಕ್ಕೆ ಬಂದು ಕನ್ನಡಿಗರ ಮಕ್ಕಳ ಉದ್ಯೋಗ ಕಸಿದುಕೊಳ್ಳುತ್ತಿದ್ದಾರೆ ಎಂದು ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಅವರು ಆರೋಪಿಸಿದ್ದರು.

ಆದರೆ ಬಿಹಾರ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸಲು ರಾಜ್ಯದಲ್ಲಿರುವ ಬಿಹಾರಿ ಮತದಾರರಿಗೆ ಬೆಂಗಳೂರಿನಲ್ಲಿ ನಿವೇಶನ, ಸೈಟು ಕೊಡುವುದಾಗಿ ಆಮಿಷ ಒಡ್ಡಲಾಗಿದೆ. ಇದು ಕಾಂಗ್ರೆಸ್‌ನ ಓಲೈಕೆ ರಾಜಕಾರಣ ಎಂದರು.

## ಕುರ್ಚಿ ಕಿತ್ತಾಟದಲ್ಲಿ ರೈತರನ್ನು ಮರೆತ ಸರ್ಕಾರ : ಆರ್.ಅಶೋಕ್

• **ಉದಯವಾಹಿನಿ, ಬೆಂಗಳೂರು**

ಕುರ್ಚಿ ಕಿತ್ತಾಟದಲ್ಲಿ ರೈತರನ್ನು ಸಂಪೂರ್ಣವಾಗಿ ಮರೆತಿರುವ ಸರ್ಕಾರ, ಬೆಳಗಾವಿ, ಬಾಗಲಕೋಟೆ, ಉತ್ತರಕನ್ನಡ ಜಿಲ್ಲೆಗಳ ಕಬ್ಬು ಬೆಳೆಗಾರರು ಬೀದಿಗಿಳಿದು ಪ್ರತಿಭಟನೆ ಮಾಡುತ್ತಿದ್ದರೂ ಕ್ಯಾರೆ ಎನ್ನುತ್ತಿಲ್ಲ. ಅನ್ನದಾತರ ಸಂಕಷ್ಟಕ್ಕೆ ಸ್ಪಂದಿಸದ ಈ ರೈತವಿರೋಧಿ ಕಾಂಗ್ರೆಸ್ ಸರ್ಕಾರ ಇದ್ದರೆಷ್ಟು, ಹೋದರೆಷ್ಟು. ರಾಜೀನಾಮೆ ಕೊಟ್ಟು ಕರ್ನಾಟಕವನ್ನು ಉಳಿಸಿ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಆಗ್ರಹಿಸಿದ್ದಾರೆ. ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಇನ್ನು ರೈತರು ತಮ ಸಂಕಷ್ಟವನ್ನು ಯಾರ ಬಳಿ ಹೇಳಿಕೊಳ್ಳಬೇಕು ಸ್ವಾಮಿ ಇನ್ನೆಷ್ಟು ದಿನ ಈ ಭಂಡ ಬಾಳು ನಿಮದು ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಒಂದೆಡೆ ಸೂರ್ಯಕಾಂತಿ, ಉದ್ದಿನಕಾಳು, ಸೋಯಾಬೀನ್ ಹೆಸರುಕಾಳು ಬೆಳೆದ ರೈತರು ತಮ ಫಸಲು ಮಾರಲಾಗದೆ ಸಂಕಷ್ಟದಲ್ಲಿದ್ದರೆ, ಮತ್ತೊಂದೆಡೆ ಕಬ್ಬು ಬೆಳೆಗಾರರು ಬೆಲೆ ಕುಸಿತದಿಂದ ಕಂಗಾಲಾಗಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಅಲಗಾಡುತ್ತಿರುವ ಕುರ್ಚಿಯಿಂದ ಹತಾಶರಾಗಿದ್ದು, ತಾಳ್ಮೆ ಕಳೆದುಕೊಂಡು ಎಲ್ಲರ ಮೇಲೂ ಸಿಡಿಮಿಡಿ ಎನ್ನುತ್ತಿದ್ದೀರಿ. ನಾಯಕತ್ವ ಬದಲಾವಣೆ ಗೊಂದಲದಿಂದ ಸಚಿವರು, ಶಾಸಕರು ದಿಕ್ಕು ತೋಚದೆ ಹೈರಾಣಾಗಿ ಮನೆಯಿಂದ ಆಚೆ ಬರುತ್ತಿಲ್ಲ ಎಂದು ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ.

## ಡಿ.15ರೊಳಗೆ ಪೂರ್ಣಗೊಳಿಸುವಂತೆ ಸುಪ್ರೀಂಕೋರ್ಟ್ ಸೂಚನೆ

• **ಉದಯವಾಹಿನಿ, ಬೆಂಗಳೂರು**

ಬಹುನಿರೀಕ್ಷಿತ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಚುನಾವಣೆ ಅರ್ಜಿ ವಿಚಾರಣೆ ಯನ್ನು ಸುಪ್ರೀಂಕೋರ್ಟ್ ಡಿ.15ಕ್ಕೆ ಮುಂದೂಡಿದೆ. ಈ ಹಿಂದಿನ ಬಿಬಿಎಂಪಿಗೆ ಚುನಾವಣೆ ನಡೆಸಬೇಕೆಂದು ಸಲ್ಲಿಸಿರುವ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸೂರ್ಯಕಾಂತ್ ಅವರ ವಿಭಾಗೀಯ ಪೀಠದ ಮುಂದೆ ರಾಜ್ಯ ಸರ್ಕಾರ, ಕಾಲಾವಕಾಶ ಕೋರಿದ ಮನವಿಯನ್ನು ಪುಸ್ಕರಿಸಿ ವಾರ್ಡ್ ಪುನರ್ ವಿಂಗಡಣೆ ಮತ್ತು ಮೀಸಲಾತಿಪಟ್ಟಿ ಪೂರ್ಣಗೊಳಿಸಲು ಡಿ.15ರವರೆಗೆ ಕಾಲಾವಕಾಶ ನೀಡಿದೆ.

ಸೋಮವಾರ ನ್ಯಾಯಾಲಯದ ಮುಂದೆ ಹಾಜರಾದ ಸರ್ಕಾರದ ಪರ ವಕೀಲರು, ವಾರ್ಡ್ ವಿಂಗಡಣೆ ಮತ್ತು ಬಗ್ಗೆ 4,500ಕ್ಕೂ ಹೆಚ್ಚು ಅರ್ಜಿಗಳು ಬಂದಿವೆ. ರಾಜ್ಯಸರ್ಕಾರದ ವತಿಯಿಂದ ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಸಕಾಲಕ್ಕೆ ಅರ್ಜಿ ವಿಲೇವಾರಿ ಮಾಡಲು ಸಾಧ್ಯವಾಗಿಲ್ಲ.

## ಪ್ರಿಯಾಂಕ್ ಆರೋಪ ಮತ್ತು ಸವಾಲಿಗೆ ಪ್ರತಿಕ್ರಿಯಿಸಲು ಅಶೋಕ್ ನಕಾರ



**ಆರ್‌ಎಸ್‌ಎಸ್ ನೋಂದಾಯಿತ ಸಂಸ್ಥೆ ಅಲ್ಲ ಎಂದ ಪ್ರಿಯಾಂಕ್**

# ಪಥಸಂಚಲನಕ್ಕೆ ಸಮ್ಮತಿ ಆರ್‌ಎಸ್‌ಎಸ್ ಅಧಿಪತಿ



**ಆರ್‌ಎಸ್‌ಎಸ್ ಬಗ್ಗೆ ದಾಖಲೆ ಬಿಡುಗಡೆ ಮಾಡಿದ ಪ್ರಿಯಾಂಕ್**

• **ಉದಯವಾಹಿನಿ, ಕಲಬುರಗಿ**

ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ಕೆಂಭಾವಿ ಪಟ್ಟಣದಲ್ಲಿ ಮಂಗಳವಾರ ನಡೆಯಲಿರುವ ರಾಷ್ಟ್ರೀಯ ಸ್ವಯಂಸೇವಕ ಸಂಘ ಪಥಸಂಚಲನಕ್ಕೆ ಜಿಲ್ಲಾಡಳಿತ ಷರತ್ತುಬದ್ಧ ಅನುಮತಿ ನೀಡಿದೆ. ಈ ನಿರ್ಧಾರವು ಸ್ಥಳೀಯ ಶಾಂತಿ ಸಭೆಯ ವರದಿಯನ್ನು ಪರಿಶೀಲಿಸಿದ ನಂತರ ತೆಗೆದುಕೊಳ್ಳಲಾಗಿದ್ದು, ಜಿಲ್ಲಾಧಿಕಾರಿ ಹರ್ಷಲ್ ಬೋಯರ್ ಅವರು ಸಹಿ ಹಾಕಿದ್ದಾರೆ.

ಕೆಂಭಾವಿ ಪಟ್ಟಣದ ಪುರಸಭೆ ಮುಂಭಾಗದಿಂದ ಆರಂಭವಾಗಿ, ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸುವ ಈ ಪಥಸಂಚಲನವು ಆರ್‌ಎಸ್‌ಎಸ್‌ನ ಶತಮಾನೋತ್ಸವ ಸಂದರ್ಭದ ಭಾಗವಾಗಿದೆ. ಆದರೆ ಈ ಅನುಮತಿಯು ಕಾನೂನು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಷರತ್ತುಗಳೊಂದಿಗೆ ನೀಡಲಾಗಿದೆ.

ಯಾದಗಿರಿ ಜಿಲ್ಲೆಯಲ್ಲಿ ಆರ್‌ಎಸ್‌ಎಸ್ ಪಥಸಂಚಲನಕ್ಕೆ ಅನುಮತಿ ನೀಡಲಾಗಿದೆ. ಕಳೆದ ತಿಂಗಳುಗಳಲ್ಲಿ ರಾಜ್ಯದಾದ್ಯಂತ ಆರ್‌ಎಸ್‌ಎಸ್‌ನ ರೂಟ್ ಮಾರ್ಚ್‌ಗಳಿಗೆ ಸಂಬಂಧಿಸಿದಂತೆ ಹಲವು ವಿವಾದಗಳು ನಡೆದಿವೆ. ಉದಾಹರಣೆಗೆ, ಕಲಬುರಗಿ ಜಿಲ್ಲೆಯ ಚಿತ್ತಾಪೂರ್‌ನಲ್ಲಿ ಆರ್‌ಎಸ್‌ಎಸ್ ಪಥಸಂಚಲನಕ್ಕೆ ಆರ್ಥಿಕವಾಗಿ ಅನುಮತಿ ನಿರಾಕರಿಸಲಾಗಿತ್ತು.

ಇದೇ ರೀತಿ, ಯಾದಗಿರಿಯಲ್ಲಿ ಸಹ ಸ್ಥಳೀಯ ಸಂಘಟನೆಗಳು ಮತ್ತು ದಲಿತ ಸಂಘರ್ಷ ಸಮಿತಿ (ಡಿಎಸ್‌ಎಸ್) ಸೇರಿದಂತೆ ವಿರೋಧಿ ಗುಂಪುಗಳು ಅನುಮತಿ ವಿರುದ್ಧ ಪ್ರತಿಭಟನೆ ನಡೆಸಿದ್ದವು. ಆದರೂ, ಸುರಪುರ ತಾಲ್ಲೂಕಾಡಳಿತದ ಶಾಂತಿ ಸಭೆಯಲ್ಲಿ ಎಲ್ಲಾ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಭಾಗವಹಿಸಿ, ಕಾನೂನು ಸುವ್ಯವಸ್ಥೆ ಕಾಪಾಡುವುದು ಮುಖ್ಯ ಎಂದು ಒಪ್ಪಂದ ಮಾಡಿಕೊಂಡರು. ಈ ವರದಿಯನ್ನು ಪರಿಶೀಲಿಸಿದ ಜಿಲ್ಲಾಧಿಕಾರಿ ಬೋಯರ್ ಅವರು ಅನುಮತಿ ನೀಡಿದ್ದಾರೆ.

**ಕೆಂಭಾವಿ ಪುರಸಭೆ ಮುಂಭಾಗದಿಂದ ಪಥಸಂಚಲನ ಆರಂಭ!:** ಆರ್‌ಎಸ್‌ಎಸ್ ಪಥಸಂಚಲನ ಮಂಗಳವಾರ ಬೆಳಿಗ್ಗೆ 9:30ಕ್ಕೆ ಕೆಂಭಾವಿ ಪುರಸಭೆ ಮುಂಭಾಗದಿಂದ ಆರಂಭವಾಗಿ, ಪಟ್ಟಣದ ಮುಖ್ಯ ಬೀದಿಗಳಾದ ರೈಲ್ವೇ ಸ್ಟೇಷನ್ ರಸ್ತೆ, ಮಾರುಕಟ್ಟೆ ಬೀಡಿ ಮತ್ತು ಗ್ರಾಮ ಪಂಚಾಯಿತಿ ಬಳಿಯವರೆಗೆ ಸಂಚರಿಸುತ್ತದೆ. ಸುಮಾರು 500 ಸ್ವಯಂಸೇವಕರು ಭಾಗವಹಿಸಲಿದ್ದಾರೆ ಎಂದು ಆರ್‌ಎಸ್‌ಎಸ್ ಮೂಲಗಳು ತಿಳಿಸಿವೆ. ಇದು ಆರ್‌ಎಸ್‌ಎಸ್‌ನ ಶತಮಾನೋತ್ಸವ ಸಮಾರಂಭದ ಭಾಗ ಆಗಿದ್ದು, ರಾಜ್ಯದಾದ್ಯಂತ ಇಂತಹ ಕಾರ್ಯಕ್ರಮಗಳು ನಡೆಯುತ್ತಿವೆ. ಆದರೂ ಹಿಂದಿನ ಘಟನೆಗಳಲ್ಲಿ ಇಂತಹ ಮಾರ್ಚ್‌ಗಳು ವಿವಾದಕ್ಕೆ ಕಾರಣವಾಗಿವೆ, ಆದ್ದರಿಂದ ಜಿಲ್ಲಾಡಳಿತವು ಎಚ್ಚರಿಕೆಯಿಂದ ನಿರ್ಧರಿಸಿದೆ.

### ಪಥಸಂಚಲನದ ಸಂದರ್ಭದಲ್ಲಿ ಭಾರೀ ಸಿಬ್ಬಂದಿ ನಿಯೋಜನೆ!

ಪೊಲೀಸ್ ಇಲಾಖೆಯು ಪಥಸಂಚಲನದ ಸಂದರ್ಭದಲ್ಲಿ ದೊಡ್ಡ ಸಂಖ್ಯೆಯಲ್ಲಿ ಸಿಬ್ಬಂದಿಯನ್ನು ನಿಯೋಜಿಸಿದ್ದು, ಟ್ರಾಫಿಕ್ ನಿಯಂತ್ರಣ ಮತ್ತು ಭದ್ರತೆಗೆ ಆದ್ಯತೆ ನೀಡಲಿದೆ. ಸ್ಥಳೀಯ ರಾಜಕೀಯ ನಾಯಕರು ಈ ಕಾರ್ಯಕ್ರಮವನ್ನು ಶಾಂತಿಯುತವಾಗಿ ನಡೆಸುವಂತೆ ಸೂಚಿಸಿದ್ದಾರೆ. ಆರ್‌ಎಸ್‌ಎಸ್ ಮುಖಂಡರು, ಇದು ನಮ್ಮ ಸಂಘಟನೆಯ ಶತಮಾನೋತ್ಸವದ ಭಾಗ. ನಾವು ಎಲ್ಲಾ ಷರತ್ತುಗಳನ್ನು ಪಾಲಿಸುತ್ತೇವೆ ಎಂದು ಹೇಳಿದ್ದಾರೆ. ಆದರೆ ವಿರೋಧಿ ಗುಂಪುಗಳು ಇದನ್ನು ರಾಜಕೀಯ ಸ್ಪರ್ಧೆಯ ಭಾಗ ಎಂದು ಕರೆದು, ಶಾಂತಿ ಕಾಪಾಡುವಂತೆ ಎಚ್ಚರಿಕೆ ಈ ಅನುಮತಿ ಯಾದಗಿರಿ ಜಿಲ್ಲೆಯಲ್ಲಿ ರಾಜಕೀಯ ಸಾಮರಸ್ಯಕ್ಕೆ ಸಹಾಯ ಮಾಡಲಿದೆ. ರಾಜ್ಯದಲ್ಲಿ ಆರ್‌ಎಸ್‌ಎಸ್ ಕಾರ್ಯಕ್ರಮಗಳು ನಡೆಯುತ್ತಿರುವುದರಿಂದ, ಇಂತಹ ಘಟನೆಗಳು ಸಾಮಾನ್ಯವಾಗಿವೆ. ಆದರೆ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವುದು ಮುಖ್ಯ ಎಂಬುದು ಜಿಲ್ಲಾಡಳಿತದ ಸಂದೇಶ.

> ಆರ್‌ಎಸ್‌ಎಸ್ ಅನ್ನು ನೋಂದಾಯಿಸದಿದ್ದರೆ ಮತ್ತು ಹೊಣೆಗಾರಿಕೆ ಹೊಂದಿಲ್ಲದ್ದಾಗಿದ್ದರೆ, ದೇಶಕ್ಕೆ ಸೇವೆ ಸಲ್ಲಿಸುವುದಾಗಿ ಹೇಳಿಕೊಳ್ಳುತ್ತಾ ಪರಿಶೋಧನೆ ಹಾಗೂ ತೆರಿಗೆಗಳನ್ನು ವಂಚಿಸುತ್ತಿಲ್ಲವೇ ಇದು ಅವರನ್ನು ಹೇಗೆ ದೇಶ ಭಕ್ತರನ್ನಾಗಿಸುತ್ತದೆ
>
> **ಪ್ರಿಯಾಂಕ್ ಖರ್ಗೆ, ಸಚಿವ**

### ಆರ್ ಅಶೋಕ್ ತಿರುಗೇಟು



ಸಂಘದ ವಿರುದ್ಧ ಪ್ರಿಯಾಂಕ್ ಖರ್ಗೆ ಸವಾಲು ವಿಚಾರವಾಗಿ ಪ್ರತಿಪಕ್ಷದ ನಾಯಕ ಆರ್ ಅಶೋಕ್ ತಿರುಗೇಟು ನೀಡಿದ್ದಾರೆ. ''ಪ್ರಿಯಾಂಕ್ ಖರ್ಗೆ ನಮ್ಮನ್ನು ಪ್ರಶ್ನೆಗಳನ್ನು ಕೇಳೋ ಮುನ್ನ ಅವರ ಪಕ್ಷಕ್ಕೆ ಕೇಳಲಿ. ಅವರ ಯಾವುದೇ ಪ್ರಶ್ನೆಗಳಿಗೆ ನಾವು ಉತ್ತರ ಕೊಡಲ್ಲ. ಅವರ ತಟ್ಟೆಯಲ್ಲಿ ನೊಣ ಬಿದ್ದಿದೆ, ಅದರ ಕಡೆ ಮೊದಲು ನೋಡಲಿ. ಇನ್ನೊಬ್ಬರ ತಟ್ಟೆ ಮೇಲೆ ಯಾಕೆ ನೋಡ್ತಾರೆ ಅವ್ರು'' ಎಂದು ಪ್ರಶ್ನಿಸಿದರು.

### ಆರ್‌ಎಸ್‌ಎಸ್ ಪಥಸಂಚಲನಕ್ಕೆ ಷರತ್ತುಗಳು

- ಪಥಸಂಚಲನದಲ್ಲಿ ಯಾವುದೇ ಸಾರ್ವಜನಿಕ ಆಸ್ತಿಗೆ ಹಾನಿ ಉಂಟಾದರೆ, ಸಂಘಟನೆಯ ಮುಖಂಡರು ಸಂಪೂರ್ಣ ಖರ್ಚು ಭರಿಸಬೇಕು.
- ಪೊಲೀಸ್ ಇಲಾಖೆ ನಿಗದಿಪಡಿಸಿದ ಮಾರ್ಗದಲ್ಲಿಯೇ ಸಂಚಲನ ನಡೆಸಬೇಕು. ಸಂಘಟನೆಯವರು ಪೊಲೀಸ್ ಭದ್ರತೆಯನ್ನು ಸ್ವೀಕರಿಸಬೇಕು.
- ಯಾವುದೇ ಜಾತಿ, ಧರ್ಮ ಅಥವಾ ಸಮುದಾಯಕ್ಕೆ ನೋವುಂಟು ಮಾಡುವ ಘೋಷಣೆಗಳು ಅಥವಾ ಕೂಗುಗಳು ಇರಬಾರದು.
- ಕಾನೂನು ಸುವ್ಯವಸ್ಥೆಗೆ ಧಕ್ಕೆ ಬಂದರೆ, ಸಂಘಟನೆಯ ಮುಖಂಡರೇ ಸಂಪೂರ್ಣ ಜವಾಬ್ದಾರರಾಗುತ್ತಾರೆ.
- ಪಥಸಂಚಲನದ ಸಂದರ್ಭದಲ್ಲಿ ಯಾವುದೇ ಹಿಂಸಾಚಾರ ಸಂಭವಿಸಿದರೆ, ಸಂಘಟನೆಯೇ ಹೊಣೆ ಹೊರಬೇಕು.
- ಯಾವುದೇ ಮಾರಕಾಸ್ತ್ರಗಳು ಅಥವಾ ಆಯುಧಗಳನ್ನು ಹೊತ್ತು ಹೋಗುವುದು ನಿಷೇಧ. ಈ ಷರತ್ತುಗಳು ರಾಜ್ಯ ಸರ್ಕಾರದ ಮಾರ್ಗಸೂಚಿಗಳಂತೆ ರೂಪಿಸಲ್ಪಟ್ಟಿವೆ. ಇದರಿಂದ ಸಾಮಾನ್ಯ ಜನರಿಗೆ ತೊಂದರೆ ಉಂಟಾಗದಂತೆ ಎಚ್ಚರಿಕೆ ವಹಿಸಲಾಗಿದೆ.


# ಟ್ರಾಫಿಕ್ ಸಮಸ್ಯೆ ನಿವಾರಣೆಗೆ ಟನಲ್ ರಸ್ತೆ ಸಲಹೆ ನೀಡಿದ್ದೇ ನಿತಿನ್ ಗಡ್ಕರಿ!

■ ಕಾಂಗ್ರೆಸ್ ಸರ್ಕಾರ ಹಾಗೂ ಬೆಂಗಳೂರಿನ ಬಿಜೆಪಿ ನಾಯಕರ ಮಧ್ಯೆ ರಾಜಕೀಯ ಜಟಾಪಟಿಗೆ ಕಾರಣ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕದಲ್ಲಿ ಈಗ ಬೆಂಗಳೂರಿನ ಟ್ರಾಫಿಕ್ ಜಾಮ್ ಸಮಸ್ಯೆ ನಿವಾರಣೆಗೆ ಹೆಬ್ಬಾಳ ಜಂಕ್ಷನ್ ನಿಂದ ಸಿಲ್ಕ್ ಬೋರ್ಡ್ ಜಂಕ್ಷನ್ ವರೆಗೂ ಸುರಂಗ ಮಾರ್ಗದ ರಸ್ತೆ ನಿರ್ಮಾಣ ಮಾಡಬೇಕೇ ಬೇಡವೇ ಎಂಬುದು ಕಾಂಗ್ರೆಸ್ ಸರ್ಕಾರ ಹಾಗೂ ಬೆಂಗಳೂರಿನ ಬಿಜೆಪಿ ನಾಯಕರ ಮಧ್ಯೆ ರಾಜಕೀಯ ಜಟಾಪಟಿಗೆ ಕಾರಣವಾಗಿದೆ. ಬೆಂಗಳೂರಿನ ದಕ್ಷಿಣ ಲೋಕಸಭಾ ಸದಸ್ಯ ತೇಜಸ್ವಿ ಸೂರ್ಯ ಸುರಂಗ ಮಾರ್ಗದ ರಸ್ತೆ ನಿರ್ಮಾಣಕ್ಕೆ ತೀವ್ರ ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಕೂಡ ವಿರೋಧ ವ್ಯಕ್ತಪಡಿಸಿದ್ದಾರೆ. ನಿನ್ನೆ ಬೆಂಗಳೂರಿನ ಲಾಲ್‌ಬಾಗ್‌ನಲ್ಲಿ ಸುರಂಗ ರಸ್ತೆ ನಿರ್ಮಾಣದ ವಿರುದ್ಧ ಜನರ ಸಹಿ ಸಂಗ್ರಹ ಅಭಿಯಾನವನ್ನೇ ನಡೆಸಿದ್ದಾರೆ.

ಆದರೇ, ಬೆಂಗಳೂರಿನ ಟ್ರಾಫಿಕ್ ಜಾಮ್ ಸಮಸ್ಯೆ ನಿವಾರಣೆಗೆ ಸುರಂಗ ಮಾರ್ಗದ ರಸ್ತೆ ನಿರ್ಮಾಣದ ಐಡಿಯಾವನ್ನು ಸಿಎಂ ಸಿದ್ದರಾಮಯ್ಯ ಅವರಿಗೆ ಕೊಟ್ಟಿರೋದು ಬೇರಾರು ಅಲ್ಲ.





ಕೇಂದ್ರದ ಹೆದ್ದಾರಿ ಮತ್ತು ಭೂ ಸಾರಿಗೆ ಖಾತೆ ಸಚಿವ ನಿತಿನ್ ಗಡ್ಕರಿ. ಇದನ್ನು ಖುದ್ದಾಗಿ ನಿತಿನ್ ಗಡ್ಕರಿ ಅವರೇ ಹೇಳಿದ್ದಾರೆ. ನಿತಿನ್ ಗಡ್ಕರಿ ಅವರು ಬೆಂಗಳೂರಿನ ಟ್ರಾಫಿಕ್ ಜಾಮ್ ಸಮಸ್ಯೆ ನಿವಾರಣೆಗೆ ಸುರಂಗ ಮಾರ್ಗದ ರಸ್ತೆ ನಿರ್ಮಾಣ ಮಾಡಿ

### ಆರ್.ಅಶೋಕ್‌ಗೆ ಡಿಸಿಎಂ ಡಿಕೆಶಿ ಪ್ರತ್ಯುತ್ತರ

ಬೆಂಗಳೂರಿನ ಬಿಜೆಪಿ ನಾಯಕರಿಗೆ ಈಗಾಗಲೇ ಡಿಸಿಎಂ ಡಿ.ಕೆ.ಶಿವಕುಮಾರ್ ಬಿಜೆಪಿಯ ನಿತಿನ್ ಗಡ್ಕರಿ ಅವರೇ ಬೆಂಗಳೂರಿನಲ್ಲಿ ಸುರಂಗ ರಸ್ತೆ ನಿರ್ಮಿಸಲು ಸಲಹೆ ಕೊಟ್ಟಿದ್ದಾರೆ. ಬಿಜೆಪಿ ಆಳ್ವಿಕೆ ಇರುವ ಮಹಾರಾಷ್ಟ್ರದ ಮುಂಬೈನಲ್ಲಿ ಸುರಂಗ ರಸ್ತೆ ನಿರ್ಮಿಸಲಾಗಿದೆ ಎಂದು ತೇಜಸ್ವಿ ಸೂರ್ಯ, ಆರ್.ಅಶೋಕ್ ಗೆ ಡಿಸಿಎಂ ಡಿ.ಕೆ.ಶಿವಕುಮಾರ್ ಪ್ರತ್ಯುತ್ತರ ನೀಡಿದ್ದಾರೆ.

ಎಂದು ಸಿಎಂ ಸಿದ್ದರಾಮಯ್ಯಗೆ ಐಡಿಯಾ ನೀಡಿದ್ದೇನೆ ಎಂದು ವಿಡಿಯೋದಲ್ಲಿ ಹೇಳಿದ್ದಾರೆ. ಸುರಂಗ ರಸ್ತೆ ನಿರ್ಮಿಸುವಾಗ ಗ್ರಾನೈಟ್ ಕೂಡ ಸಿಗಬಹುದು. ಅದನ್ನು ಮಾರಾಟ ಮಾಡಬಹುದು. ಸುರಂಗ ಮಾರ್ಗದ ರಸ್ತೆ ನಿರ್ಮಾಣದಿಂದ ಬೆಂಗಳೂರಿನ ಟ್ರಾಫಿಕ್ ಜಾಮ್ ಸಮಸ್ಯೆ ನಿವಾರಣೆಯಾಗುತ್ತೆ. ಸುರಂಗ ರಸ್ತೆಯಲ್ಲಿ ಪ್ರಯಾಣಿಸುವ ವಾಹನಗಳಿಂದ ಟೋಲ್ ಕೂಡ ಸಂಗ್ರಹಿಸಿ ಎಂದು ನಿತಿನ್ ಗಡ್ಕರಿ ಹೇಳಿದ್ದಾರೆ.

ಈ ವಿಡಿಯೋವನ್ನು ಈಗ ಬೆಂಗಳೂರಿನ ಸುರಂಗ ರಸ್ತೆ ನಿರ್ಮಾಣವನ್ನು ವಿರೋಧಿಸುತ್ತಿರುವ ಬಿಜೆಪಿ ನಾಯಕರಿಗೆ ಪ್ರತ್ಯುತ್ತರ ನೀಡಲು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ತಮ್ಮ ಟ್ವೀಟರ್ ಖಾತೆಯಿಂದ ಟ್ವೀಟ್ ಮಾಡಿದ್ದಾರೆ. ಬೆಂಗಳೂರು ಫಸ್ಟ್, ಪಾಲಿಟಿಕ್ಸ್ ನೆಕ್ಸ್ಟ್ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಶೀರ್ಷಿಕೆ ನೀಡಿ ವಿಡಿಯೋ ಟ್ವೀಟ್ ಮಾಡಿದ್ದಾರೆ. ನಿತಿನ್ ಗಡ್ಕರಿ ಅವರ ಹೇಳಿಕೆಯ ವಿಡಿಯೋವನ್ನು ಡಿಸಿಎಂ ಡಿಕೆಶಿ ಟ್ವೀಟ್ ಮಾಡಿರುವುದರ ಲಿಂಕ್ ಅನ್ನು ಇಲ್ಲಿ ನೀಡಿದ್ದೇವೆ. ತಾವು ನೋಡಬಹುದು.

ಈಗ ನಿತಿನ್ ಗಡ್ಕರಿ ಅವರೇ ಬೆಂಗಳೂರಿನಲ್ಲಿ ಸುರಂಗ ರಸ್ತೆ ನಿರ್ಮಿಸಲು ಸಿಎಂ ಸಿದ್ದರಾಮಯ್ಯಗೆ ಹೇಳಿದ್ದೇನೆ ಎಂದಿರುವ ವಿಡಿಯೋವನ್ನು ಟ್ವೀಟ್ ಮಾಡುವ ಮೂಲಕ ತೇಜಸ್ವಿ ಸೂರ್ಯ, ಆರ್. ಅಶೋಕ್‌ಗೆ ತಿರುಗೇಟು ನೀಡಿದ್ದಾರೆ.

ಆದರೇ, ನಿತಿನ್ ಗಡ್ಕರಿ ಅವರ ಹೇಳಿಕೆಯ ಪೂರ್ತಿ ವಿಡಿಯೋವನ್ನು ಹಾಕದೇ, ಕಟ್ ಅಂಡ್ ಪೇಸ್ಟ್ ವಿಡಿಯೋ ಹಾಕಿದ್ದಾರೆ ಎಂದು ತೇಜಸ್ವಿ ಸೂರ್ಯ ಹೇಳಿದ್ದಾರೆ.

## ಬಿಎಸ್‌ಎನ್‌ಎಲ್‌ಗೆ ರೂ.44.18 ಕೋಟಿ ಬಾಕಿ: ಕ್ರಮಕ್ಕೆ ಸೂಚನೆ

• **ಉದಯವಾಹಿನಿ, ಬೆಂಗಳೂರು**

ರಾಜ್ಯ ಸರ್ಕಾರದ ವಿವಿಧ ಇಲಾಖೆಗಳು ಕೇಂದ್ರ ಸರ್ಕಾರ ಸ್ವಾಮ್ಯದ ಭಾರತ್ ಸಂಚಾರ್ ನಿಗಮಕ್ಕೆ (ಬಿಎಸ್‌ಎನ್‌ಎಲ್) ಒಟ್ಟು 44.18 ಕೋಟಿ ಮೊತ್ತದ ಬಿಲ್ ಪಾವತಿಸಲು ಉಳಿಸಿಕೊಂಡಿವೆ.

ಈ ಪೈಕಿ, ಗೃಹ ಇಲಾಖೆಯು ಅತೀ ಹೆಚ್ಚು ಅಂದರೆ, 15.89 ಕೋಟಿ ಪಾವತಿಸಲು ಬಾಕಿ ಇದೆ. ಉಳಿದಂತೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸೆಂಟರ್ ಫಾರ್ ಇ-ಗರ್ವನೆರನ್ಸ್ 4.25 ಕೋಟಿ, ಗ್ರಾಮೀಣಾಭಿವೃದ್ಧಿ ಇಲಾಖೆ 3.50 ಕೋಟಿ, ಕಿಯೋನಿಕ್ಸ್ 2 ಕೋಟಿ ಪಾವತಿಸಬೇಕಿದೆ. ಬಿಲ್ ಬಾಕಿ ಮೊತ್ತವನ್ನು ತಕ್ಷಣ ಪಾವತಿಸುವಂತೆ ಸಂಬಂಧಿಸಿದ ಇಲಾಖೆಗಳಿಗೆ ಸೂಕ್ತ ನಿರ್ದೇಶನ ನೀಡಬೇಕು ಎಂದು ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಕೇಂದ್ರ ಸರ್ಕಾರದ ದೂರ ಸಂಪರ್ಕ ಇಲಾಖೆಯ ಕಾರ್ಯದರ್ಶಿ ನೀರಜ್ ಮಿತ್ತಲ್ ಅವರು ಆಗಸ್ಟ್ 29ರಂದು ಎರಡನೇ ಬಾರಿಗೆ ಪತ್ರ ಬರೆದಿದ್ದಾರೆ. ಬಿಲ್ ಮೊತ್ತ ಬಾಕಿ ಉಳಿಸಿಕೊಂಡಿರುವ ಇಲಾಖೆಗಳ ಮುಖ್ಯಸ್ಥರು ಹಾಗೂ ವಿಧಾನಸೌಧ, ವಿಕಾಸಸೌಧ ಮತ್ತು ಬಹುಮಹಡಿ ಕಟ್ಟಡಗಳ ಕಾರ್ಯದರ್ಶಿಗಳಿಗೆ ಮಿತ್ತಲ್ ಅವರು ಬರೆದಿರುವ ಈ ಪತ್ರದ ಸಹಿತ ಸೂಚನೆ ನೀಡಿರುವ ಡಿಪಿಎಆರ್, ಬಾಕಿ ಬಿಲ್ ಪಾವತಿಸಲು ಕ್ರಮ ತೆಗೆದುಕೊಳ್ಳಬೇಕು ಎಂದು ಸೂಚಿಸಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹12,317/Gram24ct ₹11,290/Gram22ct | ಬೆಳ್ಳಿ: ₹154.00/Gram

ಅಂತರಾಳದಿಂದ...
EDITORIAL

# ಕಾನೂನು ವ್ಯವಸ್ಥೆಯಿಂದ ಅನ್ಯಾಯಕ್ಕೆ ಒಳಗಾದರೆ ಪರಿಹಾರ ನೀಡುವವರಾರು?

ಈ ವಿಚಾರಣೆಯನ್ನು ಕೈಗೆತ್ತಿಕೊಂಡಿರುವ ಸುಪ್ರೀಂಕೋರ್ಟ್, ಅಟಾರ್ನಿ ಜನರಲ್ ಮತ್ತು ಸಾಲಿಸಿಟರ್ ಜನರಲ್‌ನ ನೆರವನ್ನು ಕೋರಿದೆ. ಪೊಲೀಸರು ಯಾರ ಮೇಲಾದರೂ ಆರೋಪ ಪಟ್ಟಿಯನ್ನು ರೂಪಿಸಬಹುದು. ನಿರಪರಾಧಿ ಎನ್ನುವುದನ್ನು ಸಾಬೀತು ಪಡಿಸುವ ಹೊಣೆಗಾರಿಕೆ ಸಂತ್ರಸ್ತನದು ಎನ್ನುವ ವ್ಯವಸ್ಥೆಯೊಳಗೆ 'ನ್ಯಾಯ' ಸಿಕ್ಕಿ ಒದ್ದಾಡುತ್ತಿದೆ. ನ್ಯಾಯದಾನದಲ್ಲಿ ತಪ್ಪನ್ನು ಸರಿಪಡಿಸಲು ನಿರ್ದಿಷ್ಟ ಕಾನೂನು ನಿಬಂಧನೆಯನ್ನು ಜಾರಿಗೆ ತರುವಂತೆ ಕಾನೂನು ಆಯೋಗವು 2018ರಲ್ಲಿ ಶಿಫಾರಸು ಮಾಡಿದೆಯಾದರೂ, ಈ ಬಗ್ಗೆ ನಮ್ಮ ಕಾನೂನು ವ್ಯವಸ್ಥೆ ಗಂಭೀರವಾಗಿ ಚಿಂತಿಸಿಲ್ಲ. ಪೊಲೀಸರು ಸುಳ್ಳು ಸಾಕ್ಷಿಗಳನ್ನು ಸೃಷ್ಟಿಸಿರುವುದು ನ್ಯಾಯಾಲಯದಲ್ಲಿ ಬೆಳಕಿಗೆ ಬಂದು ಎಷ್ಟೋ ಪ್ರಕರಣಗಳಲ್ಲಿ ಆರೋಪಿಗಳು ದೋಷಮುಕ್ತರಾಗುತ್ತಾರೆ. ಆದರೆ ಅಷ್ಟರಲ್ಲಿ ಆರೋಪಿಗಳು ಹಲವು ವರ್ಷಗಳನ್ನು ಜೈಲಿನಲ್ಲಿ ಕಳೆದಿರುತ್ತಾರೆ. ಪೊಲೀಸರು ಮಾಡಿದ ತಪ್ಪಿಗಾಗಿ ಅಮಾಯಕರು ಜೈಲು ಪಾಲಾದರೆ ಒಂದೋ ಅಂತಹ ತಪ್ಪು ಎಸಗಿದ ಪೊಲೀಸರಿಗೆ ಶಿಕ್ಷೆಯಾಗಬೇಕು ಅಥವಾ ಕನಿಷ್ಠ ಜೈಲು ಶಿಕ್ಷೆ ಅನುಭವಿಸಿದ ಸಂತ್ರಸ್ತನಿಗೆ ಪರಿಹಾರವನ್ನಾದರೂ ನೀಡಬೇಕು. ಉತ್ತರ ಪ್ರದೇಶದ ರಾಮಪುರ ಸಿಆರ್‌ಪಿಎಫ್ ಶಿಬಿರದ ಮೇಲೆ 2007ರಲ್ಲಿ ದಾಳಿ ನಡೆಸಿ ಎಂಟು ಮಂದಿಯ ಸಾವಿಗೆ ಕಾರಣವಾದ ಪ್ರಕರಣದಲ್ಲಿ ನಾಲ್ವರನ್ನು ಬಂಧಿಸಲಾಗಿತ್ತು. ಸ್ಥಳೀಯ ನ್ಯಾಯಾಲಯದಲ್ಲಿ ಅವರ ಆರೋಪ ಸಾಬೀತಾಗಿ ಅವರಿಗೆ ಮರಣದಂಡನೆ ಶಿಕ್ಷೆಯನ್ನು ವಿಧಿಸಲಾಗಿತ್ತು.

> **ವ್ಯವಸ್ಥೆಯು ಆರೋಪಿಗಳನ್ನು ಬಲಿಪಶುಗಳನ್ನಾಗಿ ಮಾಡುವ ಮತ್ತು ಅವರ ವಿರುದ್ಧ ಸುಳ್ಳು ಸಾಕ್ಷಾಧಾರಗಳನ್ನು ಸೃಷ್ಟಿಸುವ ಪ್ರಕರಣಗಳು ಹೆಚ್ಚುತ್ತಿದ್ದು ಅಂತಿಮವಾಗಿ ಅವರು ಖುಲಾಸೆಗೊಂಡರೂ ಅದಕ್ಕೂ ಮುನ್ನ ವರ್ಷಗಳ ಕಾಲ ಜೈಲಿನಲ್ಲಿ ಕೊಳೆತಿರುತ್ತಾರೆ. ಹೀಗೆ ತಪ್ಪಾಗಿ ಬಂಧಿಸಲ್ಪಟ್ಟ ವಿಚಾರಣೆಗೊಳಗಾದ ಅಥವಾ ಶಿಕ್ಷೆಗೆ ಗುರಿಯಾದ ವ್ಯಕ್ತಿಗೆ ಪರಿಹಾರವನ್ನು ನೀಡುವ ಸಂಕೀರ್ಣ ವಿಷಯವನ್ನು ಪರಿಶೀಲಿಸಲು ಸುಪ್ರೀಂಕೋರ್ಟ್ ಮುಂದಾಗಿದೆ. ಅಪ್ರಾಪ್ತ ವಯಸ್ಸಿನ ಬಾಲಕಿಯೊಬ್ಬಳ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಆರೋಪದಲ್ಲಿ ಮರಣದಂಡನೆ ಶಿಕ್ಷೆ ಅನುಭವಿಸಿದ ಸಂತ್ರಸ್ತನೊಬ್ಬ ಸುಮಾರು 12 ವರ್ಷ ಜೈಲು ಶಿಕ್ಷೆ ಅನುಭವಿಸಿದ ಬಳಿಕ ನಿರಪರಾಧಿ ಎನ್ನುವುದು ಗೊತ್ತಾಗಿದೆ. ಪೊಲೀಸರು ಆತನ ವಿರುದ್ಧ ಕೃತಕ ಸಾಕ್ಷಿಯನ್ನು ಸೃಷ್ಟಿಸಿ ಶಿಕ್ಷೆ ಅನುಭವಿಸುವಂತೆ ಮಾಡಿದ್ದರು. ದೋಷಮುಕ್ತನಾಗಿರುವ ಆರೋಪಿಯು, ತನ್ನ ಮೂಲಭೂತ ಹಕ್ಕಿನ ಗಂಭೀರ ಉಲ್ಲಂಘನೆಗೆ ಸರಕಾರ ಹೊಣೆಯಾಗಿದ್ದು ಪರಿಹಾರ ನೀಡಬೇಕು ಎಂದು ಆಗ್ರಹಿಸಿದ್ದರು.**

ಆದರೆ ಈ ನಾಲ್ವರನ್ನು ಕಳೆದ ಅಕ್ಟೋಬರ್ 31ರಂದು ಅಲಹಾಬಾದ್ ಹೈಕೋರ್ಟ್ ದೋಷಮುಕ್ತಗೊಳಿಸಿದೆ. ಒಂದು ವೇಳೆ ಅವರು ಹೈಕೋರ್ಟ್ ಮೆಟ್ಟಿಲನ್ನು ತುಳಿಯದೇ ಇದ್ದಿದ್ದರೆ ತಾವು ಮಾಡದೇ ಇರುವ ತಪ್ಪಿಗಾಗಿ ಗಲ್ಲು ಶಿಕ್ಷೆಯನ್ನು ಅನುಭವಿಸಬೇಕಾಗಿತ್ತು. ಇವುಗಳ ನಡುವೆಯೂ ಪೊಲೀಸರ ತನಿಖೆಯ ವೈಫಲ್ಯದಿಂದ ಈವರೆಗೆ ಜೈಲಿನಲ್ಲಿ ಕೊಳೆಯಬೇಕಾಗಿ ಬಂದುದರ ನೈತಿಕ ಹೊಣೆಯನ್ನು ಯಾರು ಹೊರುತ್ತಾರೆ ಎನ್ನುವ ಪ್ರಶ್ನೆಗೆ ಉತ್ತರ ಕಂಡುಕೊಳ್ಳುವ ಪ್ರಯತ್ನ ನಡೆಯಬೇಕಾಗಿದೆ.

2006ರಂದು ಮುಂಬೈ ಲೋಕಲ್ ಟ್ರೈನ್‌ನಲ್ಲಿ ಸ್ಫೋಟ ನಡೆದು 180 ಜನರು ಮೃತಪಟ್ಟರು. ಮಾಧ್ಯಮಗಳ ಒತ್ತಡಕ್ಕೆ ಮಣಿದು ಪೊಲೀಸರು ಆತುರಾತುರವಾಗಿ ತನಿಖೆ ನಡೆಸಿ, 12 ಜನರನ್ನು ಪ್ರಮುಖ ಆರೋಪಿಗಳನ್ನಾಗಿ ಘೋಷಿಸಿದರು. 2015ರಲ್ಲಿ ಇವರಲ್ಲಿ ಐವರಿಗೆ ಮರಣದಂಡನೆ ಮತ್ತು ಏಳು ಜನರಿಗೆ ಜೀವಾವಧಿಯನ್ನು ನ್ಯಾಯಾಲಯ ಘೋಷಿಸಿತು. ಆದರೆ ಸುಮಾರು 19 ವರ್ಷಗಳ ಬಳಿಕ ಮುಂಬೈ ಹೈಕೋರ್ಟ್ ಎಲ್ಲಾ ಆರೋಪಿಗಳನ್ನು ನಿರಪರಾಧಿಗಳೆಂದು ಬಿಡುಗಡೆ ಮಾಡಿದೆ. ಆರೋಪಿಗಳು ಸ್ಫೋಟದಲ್ಲಿ ಭಾಗವಹಿಸಿದ್ದಾರೆ ಎನ್ನುವುದಕ್ಕೆ ಯಾವ ಸಾಕ್ಷ್ಯವೂ ಇಲ್ಲ ಎಂದು ನ್ಯಾಯಾಲಯ ಹೇಳಿತು.

ಆದರೆ ಅದಾಗಲೇ ಸಂತ್ರಸ್ತರು ತಾವು ಮಾಡದ ತಪ್ಪಿಗಾಗಿ 19 ವರ್ಷಗಳ ಕಾಲ ಜೈಲಿನಲ್ಲಿ ನರಕ ಯಾತನೆಗಳನ್ನು ಅನುಭವಿಸಿದ್ದರು. ಈ ಸಂದರ್ಭದಲ್ಲಿ ಪೊಲೀಸ್ ಅಧಿಕಾರಿಗಳು ಅವರಿಗೆ ದೈಹಿಕವಾಗಿ ಬರ್ಬರ ಚಿತ್ರಹಿಂಸೆ ನೀಡಿರುವುದಕ್ಕೆ ನ್ಯಾಯಾಲಯವೇ ಆಕ್ಷೇಪ ವ್ಯಕ್ತಪಡಿಸಿದೆ. ಎಲ್ಲಕ್ಕಿಂತ ಮುಖ್ಯವಾಗಿ ಆರೋಪಿಗಳ ಹಣೆಯ ಮೇಲೆ ಪೊಲೀಸರು ಛಾಪಿಸಿದ ಭಯೋತ್ಪಾದನೆ'ಯ ಕಳಂಕವನ್ನು ಅಳಿಸುವುದು ಸುಲಭವಿಲ್ಲ.

ಈ ಆರೋಪಿಗಳ ಕುಟುಂಬಸ್ಥರು ಸಮಾಜದಲ್ಲಿ ಅಸ್ಪೃಶ್ಯರಂತೆ ಬಾಳಬೇಕಾಯಿತು. ಪೊಲೀಸರ ಬೇಜವಾಬ್ದಾರಿಯಿಂದ ಒಂದೆಡೆ ಅಮಾಯಕರು ಆರೋಪಿಗಳಾಗಿ ಗುರುತಿಸಿ ಜೈಲು ಶಿಕ್ಷೆ ಅನುಭವಿಸಿದರೆ, ಅತ್ತ ಸ್ಫೋಟ ನಡೆಸಿದ ನಿಜವಾದ ಭಯೋತ್ಪಾದಕರು ಶಿಕ್ಷೆಯಿಂದ ತಪ್ಪಿಸಿಕೊಂಡರು. ದೋಷಮುಕ್ತರಾದ ಅಷ್ಟೂ ಆರೋಪಿಗಳು ಬಳಿಕ ಸಮಾಜದಲ್ಲಿ ಬದುಕನ್ನು ಹೊಸದಾಗಿ ಕಟ್ಟಿಕೊಳ್ಳಬೇಕಾಗುತ್ತದೆ. ಅದು ಎಷ್ಟರಮಟ್ಟಿಗೆ ಸಾಧ್ಯ? ದೋಷಮುಕ್ತರೆಂದು ಘೋಷಿಸಿದಾಕ್ಷಣ ನ್ಯಾಯಾಲಯದ ಕೆಲಸ ಮುಗಿದು ಹೋಯಿತೆ? ಅವರನ್ನು ಅನ್ಯಾಯವಾಗಿ ಜೈಲಿನಲ್ಲಿ ಕೊಳೆಯುವಂತೆ ಮಾಡಿದ ಪೊಲೀಸರಿಗೆ ಶಿಕ್ಷೆಯಾಗಬೇಡವೆ? ಇದೇ ಸಂದರ್ಭದಲ್ಲಿ ಅನ್ಯಾಯವಾಗಿ ಜೈಲುಪಾಲಾಗುವಂತೆ ಮಾಡಿದ ಕಾನೂನು ವ್ಯವಸ್ಥೆಯ ತಪ್ಪಿನ ಹೊಣೆಗಾರಿಕೆಯನ್ನು ಸರಕಾರ ಹೊತ್ತುಕೊಂಡು ಸಂತ್ರಸ್ತರಿಗೆ ಪರಿಹಾರ ನೀಡಬೇಡವೆ? ಬಹುತೇಕ ಭಯೋತ್ಪಾದನೆ ಸಂಬಂಧಿ ಪ್ರಕರಣಗಳಲ್ಲಿ ಪೊಲೀಸರು ತನಿಖೆಗೆ ಮುನ್ನವೇ ಆರೋಪಿಗಳನ್ನು ಘೋಷಿಸಿ ಬಿಟ್ಟಿರುತ್ತಾರೆ. ಸಾಕ್ಷ್ಯಗಳನ್ನು ಕೃತಕವಾಗಿ ಸೃಷ್ಟಿಸುವುದನ್ನೇ ತನಿಖೆ ಎಂದು ಕರೆಯಲಾಗುತ್ತದೆ. ಇಂತಹ ಪೂರ್ವಾಗ್ರಹ ಪೀಡಿತ ತನಿಖೆಗೆ ಈಗಾಗಲೇ ನೂರಾರು ಜನರು ಬಲಿಯಾಗಿದ್ದಾರೆ. ಇದೇ ಸಂದರ್ಭದಲ್ಲಿ ಯುಎಪಿಎ ಕಾಯ್ದೆಯನ್ನು ದುರ್ಬಳಕೆ ಮಾಡಿಕೊಂಡು ರಾಜಕೀಯ ದ್ವೇಷ ಸಾಧಿಸುತ್ತಿರುವುದು ವ್ಯವಸ್ಥಿತವಾಗಿ ನಡೆಯುತ್ತಿದೆ.

# ರಾಮಾಯಣ



## ರಾವಣನ ಅತ್ಮಶ್ಲಾಘನೆ

• ಹಿಂದಿನ ಸಂಚಿಕೆಯಿಂದ

120 ನೆಯ ಅಧ್ಯಾಯ

ನಿನಗೆ ನಾನು ಹಿಂದಿಗೂ ದಕ್ಕಲಾರೆ ಎಂದು ಕೋಪದಿಂದ ಹೇಳಿ ಬಿರುಗಾಳಿಗೆ ಸಿಕ್ಕಿದ ಬಾಳೆಯ ಗಿಡದಂತೆ ಭಯಶೋಕಗಳಿಂದ ಸೀತೆಯು ನಡುಗುತ್ತಿದ್ದಳು.

**ರಾವಣನ ಅತ್ಮಶ್ಲಾಘನೆ:** ಅನಂತರ ರಾವಣನು ಹುಬ್ಬನ್ನು ಗಂಟುಹಾಕಿಕೊಂಡು ಆ ದೇವಿಯನ್ನು ಕುರಿತು ಹೀಗೆ ಕಠೋರವಾದ ಮಾತುಗಳನ್ನಾಡಿದನು ಎಲೇ ಸ್ತ್ರೀಯೆ. ನಾನು ಕುಬೇರನ ಒಡಹುಟ್ಟಿದವನು. ಆತನು ನನ್ನ ಬಲತಾಯಿಯ ಮಗನು. ನನ್ನ ಹೆಸರು ರಾವಣ, ನನಗೆ ಹತ್ತು ತಿರಸ್ಸುಗಳುಂಟು. ನಾನು ಮಹಾಪ್ರತಾಪಶಾಲಿ, ದೇವತೆಗಳೂ ಗಂಧರ್ವರೂ ಪಿಶಾಚರೂ ದೇವರ್ಷಿಗಳೂ ಗರುಡ ಗಂಧರ್ವರೂ ಮಹಾಶೇಷನೇ ಮೊದಲಾದ ನಾಗರೂ ನನ್ನನ್ನು ಕಂಡಮಾತ್ರದಲ್ಲಿ ಮೃತ್ಯುವನ್ನು ಕಂಡಂತೆ ಓಡುವರು. ನನ್ನ ಬಲತಾಯಿಯ ಮಗನಾದ ಕುಬೇರನೊಡನೆ ಒಂದು ಕಾರಣದಿಂದ ಯುದ್ಧವನ್ನು ಮಾಡಿ ಆತನನ್ನು ಜಯಿಸಿದೆನು. ಆತನು ಅಂಜಿಕೊಂಡು ತಾನಿದ್ದ ಅಲಕಾಪುರವನ್ನು ಬಿಟ್ಟು ಕೈಲಾಸಪರ್ವತಕ್ಕೆ ಹೋಗಲು ಆತನ ಪುಷ್ಪಕವೆಂಬ ವಿಮಾನವನ್ನು ಅಪಹರಿಸಿಕೊಂಡು ಬಂದೆನು. ಯಾವ ಸ್ಥಳಕ್ಕೆ ಹೋಗಬೇಕೆಂದೆಣಿಸಿದರೂ ಆ ಸ್ಥಳಕ್ಕೆ ಆ ವಿಮಾನವು ತೆಗೆದುಕೊಂಡು ಹೋಗುವುದು. ಸೀತಾದೇವಿ, ನಾನು ಕೋಪಯುಕ್ತನಾಗಿ ಹುಬ್ಬನ್ನು ಗಂಟಿಕ್ಕಿಕೊಂಡು ನಿಂತೆನಾದರೆ ನನ್ನ ಮುಖವನ್ನು ಕಂಡು ಇಂದ್ರಾದಿ ದೇವತೆಗಳೂ ಕಂಗೆಟ್ಟು ನಾನಾ ದಿಕ್ಕುಗಳಿಗೆ ಓಡುವರು. ನಾನಿರುವ ಸ್ಥಳದಲ್ಲಿ ವಾಯುದೇವನು ಭೀತಿಯಿಂದ ಬಲವಾಗಿ ಬೀಸುವುದಿಲ್ಲ. ಸೂರ್ಯನು ಉಷ್ಣಕಿರಣಗಳನ್ನು ಬಿಡನು. ವೃಕ್ಷಗಳ ಎಲೆಗಳು ಅಲ್ಲಾಡದಿರುವುವು. ನದಿಗಳು ಶೀಘ್ರಗತಿಯಿಂದ ಪ್ರವಹಿಸುವುದಿಲ್ಲ. ಸಮುದ್ರ ಮಧ್ಯದಲ್ಲಿರುವ ಲಂಕಾಪಟ್ಟಣವು ಯಾವಾಗಲೂ ರಾಕ್ಷಸರಿಂದ ಪರಿಪೂರ್ಣವಾಗಿ ದೇವೇಂದ್ರನ ಅಮರಾವತಿಯಂತೆ ರಮಣೀಯವಾಗಿರುವುದು. ಬೇಡಿದ ಫಲಗಳನ್ನು ಕೊಡುವ ವೃಕ್ಷಗಳುಳ್ಳದ್ದು. ಪಾಂಡುವರ್ಣದ ಹೊರಕೋಟೆಯಿಂದವೈಡೂರ್ಯ ಮನೋಹರವಾಗಿದೆ. ಸುವರ್ಣಮಯವಾದ ಒಳಕೋಟೆಗಳಿಂದ ಕೂಡಿದೆ. ರತ್ನಮಯವಾದ ತೋರಣಗಳಿವೆ. ರಥ ಗಜ ತುರಗ ಪದಾತಿಗಳಿಂದ ಇಟ್ಟಣಿಸಿದೆ.

ಯಾವಾಗಲೂ ತಾಳ ಮದ್ದಳ ಧ್ವನಿಗಳಿಂದ ರಮಣೀಯವಾಗಿದೆ. ಮಹಾಮನೋಹರವಾದ ಉದ್ಯಾನವನಗಳಿಂದ ಒಪ್ಪುತ್ತಿದೆ. ಅಂಥ ಸ್ಥಳದಲ್ಲಿ ನೀನು ನನ್ನೊಡನೆ ಕೂಡಿದ್ದರೆ ದಿವ್ಯಭೋಗಗಳನ್ನನುಭವಿಸಿಕೊಂಡು ಮನುಷ್ಯಭೋಗಗಳನ್ನು ಸ್ಮರಣೆಮಾಡದೆ ಸುಖವಾಗಿರುವೆ. ಅಲ್ಪಾಯುಸ್ಸುಳ್ಳ, ಮನುಷ್ಯನಾದ ರಾಮನನ್ನು ಮನಸ್ಸಿನಲ್ಲಿ ನೆನೆಯದಿರುವೆ. ನಿನ್ನ ಪತಿಯಾದ ರಾಮನನ್ನು ದಶರಥರಾಯನು ಅರಿಯದೆ ಹೊರಡಿಸಿದನೆ ? ರಾಮನು ರಣರಂಗದಲ್ಲಿ ಹೇಡಿ. ಅಂಥವನಿಂದ ನಿನಗೆ ಆಗುವ ಪ್ರಯೋಜನವೇನು ? ಇದಲ್ಲದೆ ಆತನು ಸರ್ವಸಂಗಪರಿತ್ಯಾಗವನ್ನು ಮಾಡಿ ರಾಜಭೋಗವನ್ನು ಬಿಟ್ಟು ತಪಸ್ವಿಯಾಗಿ ವನದಲ್ಲಿ ಸಂಚರಿಸಿಕೊಂಡಿದ್ದಾನೆ.

ಮುಂದುವರಿಯುವುದು...

# ಸೀಬೆಹಣ್ಣಿನಲ್ಲಿ ಮೆಡಿಸಿನ್ ಪವರ್



ಹೃದಯದ ಆರೋಗ್ಯಕ್ಕೆ ಬಹಳ ಒಳ್ಳೆಯದು

ಚಳಿಗಾಲದಲ್ಲಿ ಹೆಚ್ಚಾಗಿ ಕಂಡುಬರುವ ಸೀಬೆಹಣ್ಣಿನಲ್ಲಿ ವಿಟಮಿನ್ ಸಿ, ಪ್ರಬಲ ಆಂಟಿ ಆಕ್ಸಿಡೆಂಟ್ ಅಂಶಗಳು ಹೆಚ್ಚಾಗಿ ಕಂಡು ಬರುವ ಕಾರಣ, ಈ ಮಿತವಾಗಿ ಸೇವನೆ ಮಾಡುತ್ತಾ ಬಂದರೆ ಹೃದಯದ ಆರೋಗ್ಯ ಸಮಸ್ಯೆಗಳಿಂದ ದೂರವಿರಬಹುದು. ತನ್ನಲ್ಲಿ ಅಧಿಕ ಪೌಷ್ಟಿಕಾಂಶಗಳನ್ನು ಒಳಗೊಂಡಿರುವ ಹಣ್ಣುಗಳಲ್ಲಿ ಪೇರಳೆ ಹಣ್ಣು ಅಥವಾ ಸೀಬೆ ಹಣ್ಣುಗಳು ಕೂಡ ಒಂದು. ಆಯುರ್ವೇದ ಶಾಸ್ತ್ರದಲ್ಲಿ ಇದನ್ನು ಅಮೃತಫಲ ಎಂದು ಕೂಡಕರೆಯಲಾಗುತ್ತದೆ. ಬೆಲೆಯಲ್ಲಿ ಅಗ್ಗ ಎನ್ನುವ ಬಿರುದು ಪಡೆದಿದ್ದ ಈ ಹಣ್ಣುಗಳು ಇತ್ತೀಚಿನ ದಿನಗಳಲ್ಲಿ ಈ ಹಣ್ಣಿನ ಬೆಲೆಯಲ್ಲಿ ಏರಿಕೆಯನ್ನು ಖಂಡಿದೆ ಇದೊಂದು ಬಿಟ್ಟರೆ, ಈ ಹಣ್ಣಿನಲ್ಲಿ ಕಂಡುಬರುವ ವಿವಿಧ ಬಗೆಯ ವಿಟಮಿನ್ಸ್ ಅಂಶಗಳು, ನಾರಿನಾಂಶಗಳು ಹಾಗೂ ಇತರ ಬಗೆಯ ಖನಿಜಾಂಶಗಳು ನಮ್ಮ ಆರೋಗ್ಯಕ್ಕೆ ತುಂಬಾ ಲಾಭಕಾರಿ ಎಂದು ವೈದ್ಯರು ಕೂಡ ಸಲಹೆ ನೀಡುತ್ತಾರೆ. ಅದರಲ್ಲೂ ಚೆನ್ನಾಗಿ ಮಾಗಿರುವ ಅಂದರೆ ಹಣ್ಣಾಗಿರುವ ಸೀಬೆ ಹಣ್ಣನ್ನು ತಿನ್ನುವುದರಿಂದ ಆರೋಗ್ಯಕ್ಕೆ ಸಾಕಷ್ಟು ಲಾಭಗಳಿವೆ

**ಹೃದಯದ ಆರೋಗ್ಯಕ್ಕೆ ಸೀಬೆಹಣ್ಣು ಬಹಳ ಒಳ್ಳೆಯದು :** ಇನ್ನು ಈ ಹಣ್ಣಿನ ಬಗ್ಗೆ ತಜ್ಞರು ಹೇಳುವ ಪ್ರಕಾರ, ಸೀಬೆ ಹಣ್ಣಿನಲ್ಲಿ ಕಿತ್ತಳೆ ಹಣ್ಣಿಗಿಂತಲೂ ಹೆಚ್ಚಿನ ವಿಟಮಿನ್ ಸಿ ಇದೆಯಂತೆ

ಅಲ್ಲದೆ ಈ ಹಣ್ಣಿನಲ್ಲಿ ಕಂಡುಬರುವ ಅಧಿಕ ಪ್ರಮಾಣದ ನಾರಿನಾಂಶ, ಪೊಟ್ಯಾಸಿಯಮ್ ಮತ್ತು ಪ್ರಬಲ ಆಂಟಿ ಆಕ್ಸಿಡೆಂಟ್ ಅಂಶಗಳು, ಹೃದಯದ ಆರೋಗ್ಯಕ್ಕೆ ಅತ್ಯಂತ ಪ್ರಯೋಜನಕಾರಿಯಾಗಿದೆ. ಪ್ರಸ್ತುತ ಈ ಲೇಖನದಲ್ಲಿ ಹೃದಯದ ಆರೋಗ್ಯ ಕಾಪಾಡಲು ಸೀಬೆ ಹಣ್ಣು ಹೇಗೆಲ್ಲಾ ನೆರವಿಗೆ ಬರುತ್ತದೆ ಎನ್ನುವುದರ ಬಗ್ಗೆ ನೋಡೋಣ ಬನ್ನಿ

**ಕೊಲೆಸ್ಟ್ರಾಲ್ ನಿಯಂತ್ರಿಸುತ್ತದೆ :** ಸೀಬೆಹಣ್ಣಿನಲ್ಲಿ ಕಂಡು ಬರುವ ಕರಗುವ ನಾರಿನಾಂಶ ದೇಹದಲ್ಲಿನ ಕೆಟ್ಟ ಕೊಲೆಸ್ಟ್ರಾಲ್ ಮಟ್ಟವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಈ ನಾರು ಜೀರ್ಣಾಂಗದಲ್ಲಿ ಕೊಲೆಸ್ಟ್ರಾಲ್ ಹೀರಿಕೊಳ್ಳುವುದನ್ನು ತಡೆಯುತ್ತದೆ ಅಪಧಮನಿಗಳಲ್ಲಿ ಪ್ಲೇಕ್ ನಿರ್ಮಾಣದ ಅಪಾಯವನ್ನು ಕಡಿಮೆ ಮಾಡುತ್ತದೆ. ಇದಲ್ಲದೆ, ಈ ಹಣ್ಣಿನಲ್ಲಿ ಕಂಡು ಬರುವ ಪೆಕ್ಟಿನ್ ಕೊಲೆಸ್ಟ್ರಾಲ್ ನಿಯಂತ್ರಣದಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ.

**ರಕ್ತದೊತ್ತಡವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ:** ಪೊಟ್ಯಾಸಿಯಮ್‌ನಿಂದ ಸಮೃದ್ಧವಾಗಿರುವ ಸೀಬೆಹಣ್ಣು ರಕ್ತದೊತ್ತಡವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಪೊಟ್ಯಾಸಿಯಮ್ ದೇಹದಲ್ಲಿ ಸೋಡಿಯಂನ ಪರಿಣಾಮಗಳನ್ನು ಸಮತೋಲನಗೊಳಿಸುತ್ತದೆ ಮತ್ತು ರಕ್ತನಾಳಗಳನ್ನು ಸಡಿಲಗೊಳಿಸುತ್ತದೆ, ರಕ್ತದ ಹರಿವನ್ನು ಸುಧಾರಿಸುತ್ತದೆ ಮತ್ತು ಹೃದಯದ ಮೇಲಿನ ಹೆಚ್ಚುವರಿ ಒತ್ತಡವನ್ನು ಕಡಿಮೆ ಮಾಡುತ್ತದೆ. ಪೇರಳೆಯನ್ನು ನಿಯಮಿತವಾಗಿ ತಿನ್ನುವುದು ಅಧಿಕ ರಕ್ತದೊತ್ತಡವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ.

**ಅಧಿಕ ಪ್ರಮಾಣದಲ್ಲಿ ಆಂಟಿ ಆಕ್ಸಿಡೆಂಟ್ ಅಂಶಗಳು ಕಂಡು ಬರುತ್ತದೆ**

ಸೀಬೆಹಣ್ಣುಗಳಲ್ಲಿ ವಿಟಮಿನ್ ಸಿ ಮತ್ತು ಲೈಕೋಪೀನ್‌ನಂತಹ ಶಕ್ತಿಶಾಲಿ ಉತ್ಕರ್ಷಣ ನಿರೋಧಕಗಳನ್ನು ಆಂಟಿ ಆಕ್ಸಿಡೆಂಟ್ ಅಂಶಗಳು ಕಂಡು ಬರುತ್ತದೆ. ಈ ಉತ್ಕರ್ಷಣ ನಿರೋಧಕಗಳು ದೇಹದಲ್ಲಿನ ಫ್ರೀ ರಾಡಿಕಲ್‌ಗಳ ವಿರುದ್ಧ ಹೋರಾಡುತ್ತವೆ, ಇದು ಜೀವಕೋಶಗಳನ್ನು ಹಾನಿಗೊಳಿಸುತ್ತದೆ ಮತ್ತು ಹೃದಯ ಕಾಯಿಲೆಗೆ ಕಾರಣವಾಗಬಹುದು. ವಿಟಮಿನ್ ಸಿ ಅಪಧಮನಿಯ ಗೋಡೆಗಳನ್ನು ಬಲಪಡಿಸಲು ಮತ್ತು ಉರಿಯೂತವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

**ಮಧುಮೇಹ ಕಾಯಿಲೆಯನ್ನು ನಿಯಂತ್ರಿಸುತ್ತದೆ**

ಸೀಬೆಹಣ್ಣುಗಳಲ್ಲಿ ಕಡಿಮೆ ಗ್ಲೈಸೆಮಿಕ್ ಸೂಚಿಯನ್ನು ಹೊಂದಿದ್ದು, ಇದು ರಕ್ತದಲ್ಲಿನ ಸಕ್ಕರೆ ಮಟ್ಟವು ಹಠಾತ್ತನೆ ಏರುವುದನ್ನು ತಡೆಯುತ್ತದೆ. ಮಧುಮೇಹ ಮತ್ತು ಹೃದ್ರೋಗಗಳು ನಿಕಟ ಸಂಬಂಧ ಹೊಂದಿವೆ, ಆದ್ದರಿಂದ ರಕ್ತದಲ್ಲಿನ ಸಕ್ಕರೆಯನ್ನು ನಿಯಂತ್ರಿಸುವುದು ಹೃದಯದ ಆರೋಗ್ಯಕ್ಕೆ ನಿರ್ಣಾಯಕವಾಗಿದೆ.

# ಬುದ್ಧನಾಗು, ಬಸವನಾಗು, ಅಂಬೇಡ್ಕರನಾಗು




ಸಾಮಾಜಿಕ ಕಳಕಳಿ
**ಹೆಚ್.ಎಸ್. ಪ್ರತಿಮಾ**
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ ಶಿಕ್ಷಕಿ, ಹಾಸನ

ಬನದ ನಡುವೆಯೂ ಉತ್ತಮ ಕಾರ್ಯವಿರಲಿ
ಪ್ರತಿಯೊಂದು ಸೇವೆಯಲಿ ನಿಷ್ಕಲ್ಮಶತೆಯಿರಲಿ
ಮಾನವನ ಕುಲಕ್ಕೆ ಎಂದೆಂದೂ ದಾರಿದೀಪವಾಗಲಿ
ಸತ್ಯ - ಮಿಥ್ಯದ ನಡುವಿನ ಅಂತರದ ಅರಿವಿರಲಿ.....
ಬುದ್ಧನಾಗು, ಬಸವನಾಗು, ಅಂಬೇಡ್ಕರನಾಗು
ದೇಶಪ್ರೇಮದೊಲವಿನಲಿ ಸಾಗುವಂತವನಾಗು
ಕಷ್ಟಸುಖ ಆಲಿಸುವ ಉತ್ತಮ ಪ್ರಜೆಯಾಗು
ನಿನ್ನ ನೋಡಿ ಎಲ್ಲರೂ ಕಲಿಸುವಂತ ಮಾದರಿಯಾಗು
ಜ್ಞಾನವೇ ದೇವರು ಎಂಬುದನ್ನು ಅರಿತು ಬುದ್ಧನಾಗು
ಕಾಯಕವೇ ಕೈಲಾಸ ಎಂಬುದ ಮರೆಯದಂತವನಾಗು
ಸಂವಿಧಾನದ ರಚನೆಕಾರರ ತತ್ವವ ಪಾಲಿಸುವಂಥವನಾಗು
ಎಲ್ಲಾ ಅಂಶವ ಒಳಗೊಂಡ ಒಳ್ಳೆಯ ದೇಶಪ್ರೇಮಿಯಾಗು......
ಮೌಢ್ಯತೆ, ಅಸ್ಪೃಶ್ಯತೆಯು ನಾಶವಾಗುವಂತಾಗಲಿ
ಕರುಣೆ, ಪ್ರೀತಿ, ಶಾಂತಿ, ಮಮತೆ ಬೀರುವಂತಾಗಲಿ
ಹಿರಿಯ- ಕಿರಿಯರ ಬೆಲೆ ತಿಳಿಯುವಂತಾಗಲಿ
ಮಾನವೀಯತೆಯು ಎಲ್ಲೆಡೆ
ರಾರಾಜಿಸುವಂತಾಗಲಿ.....
ಹಿಂದೆ ಇದ್ದ ಕಷ್ಟಗಳು ಇಂದಿನ
ದಿನವಿಲ್ಲ ಎಲ್ಲದಕ್ಕೂ
ಮಹನೀಯರು ಪರಿಹಾರ
ನೀಡಿದರಲ್ಲ ಅರಿತು ಬಾಳಿದರೆ
ಬದುಕು ಬಂಗಾರವಾಗುವುದಲ್ಲ
ಪ್ರಪಂಚದ ಸರ್ವ ಕಷ್ಟಗಳೆಲ್ಲ
ಕಳೆದುಹೋಗುವುದಲ್ಲ.....



# ಹಿಮೋಗ್ಲೋಬಿನ್ ಕಡಿಮೆ ಇದ್ಯಾ ?



ನಮ್ಮ ದೇಹದಲ್ಲಿ ಹಿಮೋಗ್ಲೋಬಿನ್ ಮಟ್ಟ ಕಡಿಮೆಯಾದಾಗ ನಾನಾ ರೀತಿಯ ಕಾಯಿಲೆಗಳು ಕಾಡಲಾರಂಭಿಸುತ್ತದೆ. ಇದನ್ನು ನಿವಾರಿಸಲು ಈ ಕೆಲವು ಆಹಾರಗಳನ್ನು ಸೇವಿಸುವುದು ಉತ್ತಮ. ಇವು ಹಿಮೋಗ್ಲೋಬಿನ್ ಮಟ್ಟವನ್ನು ಹೆಚ್ಚಿಸುತ್ತದೆ. ಹಿಮೋಗ್ಲೋಬಿನ್ ಕೆಂಪು ರಕ್ತ ಕಣಗಳಲ್ಲಿ ಕಂಡು ಬರುವ ಒಂದು ಪ್ರಮುಖ ಪ್ರೋಟೀನ್ ಆಗಿದ್ದು, ದೇಹವನ್ನು ಆರೋಗ್ಯಕರವಾಗಿ ಶಕ್ತಿಯುತವಾಗಿಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ದೇಹದಲ್ಲಿ ಹಿಮೋಗ್ಲೋಬಿನ್ ಕಡಿಮೆಯಾದರೆ ರಕ್ತಹೀನತೆ ಕಾಡಲಾರಂಭಿಸುತ್ತದೆ. ಇದರ ಮುಖ್ಯ ಕಾರ್ಯವೆಂದರೆ ಶ್ವಾಸಕೋಶದಿಂದ ಪ್ರತಿಯೊಂದು ಜೀವಕೋಶ, ಅಂಗಕ್ಕೆ ಆಮ್ಲಜನಕವನ್ನು ಸಾಗಿಸುವುದು, ಅವು ಶಕ್ತಿಯನ್ನು ಉತ್ಪಾದಿಸಬಹುದು ಮತ್ತು ಸರಿಯಾಗಿ ಕಾರ್ಯನಿರ್ವಹಿಸಬಹುದು ಎಂದು ಖಚಿತಪಡಿಸಿಕೊಳ್ಳುವುದು.



**ಹಿಮೋಗ್ಲೋಬಿನ್ ಮಟ್ಟ ಸರಿಯಾಗಿರುವುದು ಯಾಕೆ ಮುಖ್ಯ:** ಇದು ತ್ಯಾಜ್ಯ ಉತ್ಪನ್ನವಾದ ಇಂಗಾಲದ ಡೈಆಕ್ಸೈಡ್ ಅನ್ನು ಶ್ವಾಸಕೋಶಕ್ಕೆ ಮತ್ತೆ ಉಸಿರಾಡಲು ಸಾಗಿಸಲು ಸಹಾಯ ಮಾಡುತ್ತದೆ. ಆದ್ದರಿಂದ, ಆಯಾಸ, ದೌರ್ಬಲ್ಯ ಮತ್ತು ತಲೆತಿರುಗುವಿಕೆಯನ್ನು ತಡೆಗಟ್ಟಲು ದೇಹದಲ್ಲಿ ಉತ್ತಮ ಪ್ರಮಾಣದ ಹಿಮೋಗ್ಲೋಬಿನ್ ಮಟ್ಟವನ್ನು ಹೊಂದಿರುವುದು ಮುಖ್ಯ. ಹಾರ್ವರ್ಡ್ ವೈದ್ಯಕೀಯ ಶಾಲೆಯ ಪ್ರಕಾರ, ವಯಸ್ಕ ಪುರುಷರಿಗೆ ಪ್ರಮಾಣಿತ ಹಿಮೋಗ್ಲೋಬಿನ್ ಮಟ್ಟಗಳು ಪ್ರತಿ ಡೆಸಿಲೀಟರ್‌ಗೆ 13.0 ರಿಂದ 18.0 ಗ್ರಾಂ, ಮಹಿಳೆಯರಿಗೆ ಇದು ದಿನಕ್ಕೆ 12.0 ರಿಂದ 16.0 ಗ್ರಾಂ ಆಗಿರಬೇಕು. ಈ ಮಾಹಿತಿಯು ಹಿಮೋಗ್ಲೋಬಿನ್ ಮಟ್ಟವನ್ನು ನೈಸರ್ಗಿಕವಾಗಿ ಹೆಚ್ಚಿಸಲು ಸಹಾಯ ಮಾಡುವ 5 ಸಸ್ಯಾಹಾರಿ ಆಹಾರಗಳ ಬಗ್ಗೆ ನಾವಿಲ್ಲಿ ತಿಳಿಯೋಣ.

**ಬೀಟ್ರೂಟ್:** ಕೆಂಪು ರಕ್ತ ಕಣಗಳ ಉತ್ಪಾದನೆಯನ್ನು ಉತ್ತೇಜಿಸಲು ಸಹಾಯ ಮಾಡುತ್ತದೆ, ರಕ್ತ ಪರಿಚಲನೆ ಸುಧಾರಿಸುತ್ತದೆ ಎಂದು ಹೇಳಲಾಗುತ್ತದೆ. ದಿನಕ್ಕೆ 2 ಬಾರಿ ಬೀಟ್ರೂಟ್ ರಸವನ್ನು ಸೇವಿಸಿದ 3 ವಾರಗಳ ನಂತರ ಹಿಮೋಗ್ಲೋಬಿನ್ ಮಟ್ಟದಲ್ಲಿ ಗಮನಾರ್ಹ ಹೆಚ್ಚಳವಾಗಿದೆ ಎಂದು ಅಧ್ಯಯನವು ತಿಳಿಸಿದೆ.

ಸರಾಸರಿ ಕಾರ್ಪಸ್ಕುಲರ್ ವಾಲ್ಯೂಮ್, ಸರಾಸರಿ ಕಾರ್ಪಸ್ಕುಲರ್ ಹಿಮೋಗ್ಲೋಬಿನ್, ಸರಾಸರಿ ಕಾರ್ಪಸ್ಕುಲರ್ ಹಿಮೋಗ್ಲೋಬಿನ್ ಸಾಂದ್ರತೆ ಇತರ ಹೆಮಟೊಲಾಜಿಕಲ್‌ನಿಯತಾಂಕಗಳು ಸಹ ಸೇವನೆಯ ಅವಧಿಯಲ್ಲಿ ಸ್ವಲ್ಪ ಸುಧಾರಣೆಯನ್ನು ತೋರಿಸಿವೆ, ಬೀಟ್ರೂಟ್ ರಸವು ಅಡ್ಡ ಪರಿಣಾಮಗಳಿಲ್ಲದೆ ಹಿಮೋಗ್ಲೋಬಿನ್ ಅನ್ನು ಪರಿಣಾಮಕಾರಿಯಾಗಿ ಹೆಚ್ಚಿಸುವ ಮೂಲಕ ರಕ್ತಹೀನತೆಗೆ ಚಿಕಿತ್ಸೆ ನೀಡುತ್ತದೆ.

**ಹೇಗೆ ಸೇವಿಸುವುದು:** ಜ್ಯೂಸ್, ಶೇಕ್, ಸ್ಮೂಥಿ, ಸಲಾಡ್, ಸೂಪ್ ರೂಪದಲ್ಲಿ ಸೇವಿಸಬಹುದು. ಚಿಪ್ಸ್ ಅಥವಾ ಫ್ರೈಸ್ ಮತ್ತು ಡಿಪ್ಸ್ ರೂಪದಲ್ಲಿ ತಿಂಡಿಗಳಾಗಿಯೂ ಅವು ಚೆನ್ನಾಗಿ ಹೊಂದಿಕೊಳ್ಳುತ್ತವೆ.

**ದ್ವಿದಳ ಧಾನ್ಯಗಳು:** ಮಸೂರ, ಕಡಲೆ, ಬೀನ್ಸ್‌ನಂತಹ ದ್ವಿದಳ ಧಾನ್ಯಗಳು ಕಬ್ಬಿಣ, ಪ್ರೋಟೀನ್ ಮತ್ತು ಫೋಲೇಟ್‌ನಲ್ಲಿ ಸಮೃದ್ಧವಾಗಿವೆ, ಇದು ಹಿಮೋಗ್ಲೋಬಿನ್ ಅನ್ನು ಸುಧಾರಿಸಲು ಅತ್ಯುತ್ತಮವಾಗಿದೆ.

2023ರ ಅಧ್ಯಯನವು ಬಲವರ್ಧಿತ ಮಸೂರಗಳ ಸೇವನೆಯು ಕಬ್ಬಿಣದ ಸ್ಥಿತಿಯನ್ನು ರಕ್ಷಿಸಲು ಸಹಾಯ ಮಾಡುತ್ತದೆ, ನಿಯಂತ್ರಣ ಗುಂಪುಗಳಿಗೆ ಹೋಲಿಸಿದರೆ ಹೆಚ್ಚಿನ ಹಿಮೋಗ್ಲೋಬಿನ್ ಮಟ್ಟವನ್ನು ಉಂಟುಮಾಡುತ್ತದೆ ಎಂದು ತೋರಿಸಿದೆ. ಮಸೂರವು ಕಬ್ಬಿಣ ಮತ್ತು ಜೈವಿಕ ಸಕ್ರಿಯ ಸಂಯುಕ್ತಗಳಲ್ಲಿ ಸಮೃದ್ಧವಾಗಿದೆ. ಇದು ಹಿಮೋಗ್ಲೋಬಿನ್ ಮತ್ತು ಕಬ್ಬಿಣದ ಸ್ಥಿತಿಯನ್ನು ಸುಧಾರಿಸುತ್ತದೆ.

**ಹೇಗೆ ಸೇವಿಸುವುದು:** ಒಬ್ಬರು ಅವರೊಂದಿಗೆ ಕರಿ ಅಥವಾ ಕಬಾಬ್‌ಗಳನ್ನು ತಯಾರಿಸಬಹುದು ಮತ್ತು ಅವುಗಳನ್ನು ತಿಂಡಿ ಅಥವಾ ಮುಖ್ಯ ಕೋರ್ಸ್ ಆಗಿ ಆನಂದಿಸಬಹುದು.

**ದಾಳಿಂಬೆ:** ಅವು ವಿಟಮಿನ್ ಸಿ, ಕಬ್ಬಿಣ ಮತ್ತು ಹಿಮೋಗ್ಲೋಬಿನ್ ಮಟ್ಟವನ್ನು ಹೆಚ್ಚಿಸುವ ಉತ್ಕರ್ಷಣ ನಿರೋಧಕಗಳಿಂದ ತುಂಬಿರುತ್ತವೆ. ಆರೋಗ್ಯವಂತ ವ್ಯಕ್ತಿಗಳಲ್ಲಿ 500 ಮಿಲಿ ದಾಳಿಂಬೆ ರಸವನ್ನು ಪ್ರತಿದಿನ 14 ದಿನಗಳವರೆಗೆ ಸೇವಿಸುವುದರಿಂದ ಕೆಂಪು ರಕ್ತ ಕಣಗಳ ಸಂಖ್ಯೆ, ಹಿಮೋಗ್ಲೋಬಿನ್ ಸಾಂದ್ರತೆ ಮತ್ತು ಹೆಮಟೋಕ್ರಿಟ್ ಮಟ್ಟವನ್ನು ಗಮನಾರ್ಹವಾಗಿ ಹೆಚ್ಚಿಸಬಹುದು ಎಂದು ಅಧ್ಯಯನದಲ್ಲಿ ಉಲ್ಲೇಖಿಸಲಾಗಿದೆ.

**ಹೇಗೆ ಸೇವಿಸಬೇಕು:** ಅವುಗಳನ್ನು ಹಣ್ಣಾಗಿ ಸೇವಿಸುವುದು ಉತ್ತಮ ಅಥವಾ ರಸದ ರೂಪದಲ್ಲೂ ಸೇವಿಸಬಹುದು.

# ಗಾರ್ಮೆಂಟ್ಸ್, ಕಾರ್ಖಾನೆಗಳ ಮಹಿಳಾ ಕಾರ್ಮಿಕರಿಗೆ ಬಿಸಿಯೂಟ ನೀಡಲು ಮನವಿ

• **ಉದಯವಾಹಿನಿ, ಬೆಂಗಳೂರು**

ಗಾರ್ಮೆಂಟ್ಸ್, ಕಾರ್ಖಾನೆಗಳಲ್ಲಿ ಕೆಲಸ ಮಾಡುವ ಮಹಿಳಾ ಕಾರ್ಮಿಕರಿಗೆ ಮಧ್ಯಾಹ್ನ ಮೊಟ್ಟೆ ಸಹಿತ ಪೌಷ್ಟಿಕ ಆಹಾರ ನೀಡಬೇಕು ಹಾಗೂ ವಸತಿ ಸೌಲಭ್ಯ ಕಲ್ಪಿಸಬೇಕು ಎಂದು ಮುನ್ನಡೆ ಸಾಮಾಜಿಕ ಸಂಸ್ಥೆ ಮತ್ತು ಸಿವಿಡೆಪ್ ಇಂಡಿಯಾ ಸಂಸ್ಥೆ ಸರ್ಕಾರಕ್ಕೆ ಮನವಿ ಮಾಡಿದೆ. ಈ ಸಂಬಂಧ ಹೇಳಿಕೆ ನೀಡಿರುವ ಮುನ್ನಡೆ ಸಾಮಾಜಿಕ ಸಂಸ್ಥೆ ಕಾರ್ಯನಿರ್ವಾಹಕ ನಿರ್ದೇಶಕಿ ಪಿ.ಎಚ್. ಯಶೋದಾ, ಕೆಲಸದ ಒತ್ತಡದಿಂದಾಗಿ ಮಹಿಳಾ ಕಾರ್ಮಿಕರಿಗೆ ಪೌಷ್ಟಿಕ ಆಹಾರ ದೊರೆಯುತ್ತಿಲ್ಲ. ಇದರಿಂದ ಅವರ ದೈಹಿಕ ಮತ್ತು ಮಾನಸಿಕ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿದೆ. ದೀರ್ಘಾವಧಿ ಕೆಲಸ, ಕಡಿಮೆ ವೇತನ ಹಾಗೂ ಕೈಗೆಟುಕುವ ದರದಲ್ಲಿ ಆರೋಗ್ಯಕರ ಆಹಾರ ಪದಾರ್ಥಗಳು ದೊರೆಯುತ್ತಿಲ್ಲ' ಎಂದು ತಿಳಿಸಿದ್ದಾರೆ.



ಕೆಲಸ ಸ್ಥಳದಲ್ಲಿ ಮೊಟ್ಟೆ ಸಹಿತ ಪೌಷ್ಟಿಕ ಆಹಾರ ನೀಡಬೇಕು. ಕ್ಯಾಂಟೀನ್ ಹಾಗೂ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ವಸತಿ ಸೌಕರ್ಯ ಹಾಗೂ ಪಡಿತರ ಚೀಟಿ ನೀಡಬೇಕು. ಅಲ್ಲದೇ ಕನಿಷ್ಠ ವೇತನವನ್ನು ಹೆಚ್ಚಳ ಮಾಡಬೇಕು' ಎಂದು ಆಗ್ರಹಿಸಿದರು. ಉಚಿತವಾಗಿ ಪ್ಯಾಡ್ ನೀಡುವುದರ ಜತೆಗೆ ಶೌಚಾಲಯ ಶುಚಿಯಾಗಿರುವಂತೆ ನೋಡಿಕೊಳ್ಳಬೇಕು. ಸರ್ಕಾರ ಮುಟ್ಟಿನ ರಜೆ ಘೋಷಿಸಿದ್ದು, ಅದು ಶೀಘ್ರ ಅನುಷ್ಠಾನಕ್ಕೆ ತರಬೇಕು ಎಂದು ಹೇಳಿದ್ದಾರೆ.

# ಚಳಿಗಾಲದಲ್ಲಿ ಮೂಗು ಡ್ರೈ ಆಗುವುದನ್ನು ತಡೆಯುವುದು ಹೇಗೆ, ಇಲ್ಲಿದೆ ವೈದ್ಯರ ಟಿಪ್ಸ್



**ಮೂಗಿನ ಒಣ ಸಮಸ್ಯೆ ಏಕೆ ಹೆಚ್ಚಾಗುತ್ತದೆ?**

**ಸಫ್ದರ್ಜಂಗ್ ಆಸ್ಪತ್ರೆಯ ನಿವಾಸಿ ವೈದ್ಯ ಅರುಣ್ ಕುಮಾರ್ ಹೇಳುವಂತೆ ವಾತಾವರಣವು ತಣ್ಣಗಾಗುತ್ತಿದ್ದಂತೆ ಗಾಳಿಯಲ್ಲಿನ ತೇವಾಂಶ ಕಡಿಮೆಯಾಗುತ್ತದೆ. ಈ ಒಣ ಗಾಳಿಯು ನಮ್ಮ ದೇಹದ ಸೂಕ್ಷ್ಮ ಭಾಗಗಳ ಮೇಲೆ, ವಿಶೇಷವಾಗಿ ಮೂಗಿನ ಒಳಗಿನ ಪೊರೆಗಳ ಮೇಲೆ ಹೆಚ್ಚಿನ ಪರಿಣಾಮ ಬೀರುತ್ತದೆ. ಇದರ ಪರಿಣಾಮವಾಗಿ ಶುಷ್ಕತೆ, ಕಿರಿಕಿರಿ, ತುರಿಕೆ, ಹೊರಪದರ ಮತ್ತು ಕೆಲವೊಮ್ಮೆ ರಕ್ತಸ್ರಾವವಾಗುತ್ತದೆ.**

ಚಳಿಗಾಲದಲ್ಲಿ ಮೂಗು ಒಣಗುವುದು ಸಾಮಾನ್ಯ ಸಮಸ್ಯೆಯಾಗಿದೆ. ಇದು ಹೆಚ್ಚಿನ ಜನರನ್ನು ತೊಂದರೆಗೊಳಿಸುತ್ತದೆ. ಆದರೆ ಕೆಲವು ಸರಳ ವಿಧಾನಗಳನ್ನು ಅನುಸರಿಸುವ ಮೂಲಕ ನೀವು ಈ ಸಮಸ್ಯೆಯಿಂದ ಪಾರಾಗಬಹುದು. ಚಳಿಗಾಲದ ಆಗಮನದೊಂದಿಗೆ, ಜನರು ವಿವಿಧ ರೀತಿಯ ಆರೋಗ್ಯ ಸಮಸ್ಯೆಗಳನ್ನು ಅನುಭವಿಸಲು ಪ್ರಾರಂಭಿಸುತ್ತಾರೆ. ಈ ಋತುವಿನಲ್ಲಿ ಕೆಲವು ಜನರು ಒಣ ಮೂಗುಗಳಿಂದ ವಿಶೇಷವಾಗಿ ತೊಂದರೆಗೊಳಗಾಗುತ್ತಾರೆ. ಕೆಲವೊಮ್ಮೆ, ಮೂಗಿನಿಂದ ರಕ್ತಸ್ರಾವವೂ ಸಂಭವಿಸುತ್ತದೆ. ಒಣ ಮೂಗು ಮೂಗಿನ ಸುತ್ತಲಿನ ಚರ್ಮ ಒಣಗಲು ಮತ್ತು ಕೆಂಪು ಬಣ್ಣಕ್ಕೆ ತಿರುಗಲು ಕಾರಣವಾಗುತ್ತದೆ.



ನೀವು ಒಣ ಮೂಗಿನಿಂದ ಬಳಲುತ್ತಿದ್ದರೆ ಮತ್ತು ಅದನ್ನು ಹೈಡ್ರೀಕರಿಸಲು ಬಯಸಿದರೆ, ನೀವು ತೆಗೆದುಕೊಳ್ಳಬಹುದಾದ ಕೆಲವು ಸರಳ ವಿಧಾನಗಳು ಇಲ್ಲಿವೆ.

**ಸೋಂಕಿನ ಅಪಾಯ ಹೆಚ್ಚುತ್ತದೆ:** ನಮ್ಮ ಮೂಗು ಉಸಿರಾಟಕ್ಕೆ ಒಂದು ಮಾರ್ಗ ಮಾತ್ರವಲ್ಲ, ಅದು ಗಾಳಿಯನ್ನು ಸ್ವಚ್ಛಗೊಳಿಸುತ್ತದೆ ಮತ್ತು ತೇವಗೊಳಿಸುತ್ತದೆ ಮತ್ತು ಶ್ವಾಸಕೋಶಗಳಿಗೆ ತಲುಪಿಸುತ್ತದೆ. ಮೂಗು ಒಣಗಿದಾಗ, ಅದರ ರಕ್ಷಣಾತ್ಮಕ ಪದರವು ದುರ್ಬಲಗೊಳ್ಳುತ್ತದೆ, ಸೋಂಕಿನ ಅಪಾಯವನ್ನು ಹೆಚ್ಚಿಸುತ್ತದೆ.

**ಚಳಿಗಾಲದಲ್ಲಿ ಮೂಗಿನ ತೇವಾಂಶವನ್ನು ಕಾಪಾಡಿಕೊಳ್ಳಲು ಸುಲಭ ಮಾರ್ಗಗಳು**

**ಸ್ಟೀಮ್ ತೆಗೆದುಕೊಳ್ಳುವುದು:** ದಿನಕ್ಕೆ ಒಂದು ಅಥವಾ ಎರಡು ಬಾರಿ ಲಘು ಬಿಸಿ ನೀರಿನ ಆವಿ ತೆಗೆದುಕೊಳ್ಳುವುದರಿಂದ ಮೂಗಿಗೆ ತೇವಾಂಶವನ್ನು ಪುನಃಸ್ಥಾಪಿಸಬಹುದು ಮತ್ತು ಶುಷ್ಕತೆಯನ್ನು ಕಡಿಮೆ ಮಾಡಬಹುದು.

**ಎಣ್ಣೆ ಅಥವಾ ತುಪ್ಪವನ್ನು ಲಘುವಾಗಿ ಹಚ್ಚಿ:** ಮೂಗಿನ ಹೊಳ್ಳೆಗಳ ಒಳಗೆ ಸ್ವಲ್ಪ ತೆಂಗಿನ ಎಣ್ಣೆ, ಎಳ್ಳೆಣ್ಣೆ ಅಥವಾ ತುಪ್ಪವನ್ನು ಹಚ್ಚಿ ನೈಸರ್ಗಿಕ ತೇವಾಂಶವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ.

**ಲವಣಯುಕ್ತ ಮೂಗಿನ ಸ್ಪ್ರೇ ಬಳಸಿ:** ಮಾರುಕಟ್ಟೆಯಲ್ಲಿ ಲಭ್ಯವಿರುವ ಉಪ್ಪುನೀರಿನ ಸ್ಪ್ರೇಗಳು ಯಾವುದೇ ಅಡ್ಡಪರಿಣಾಮಗಳಿಲ್ಲದೆ ಮೂಗನ್ನು ತೇವವಾಗಿರಿಸುತ್ತದೆ.

**ಮನೆಯಲ್ಲಿ ತೇವಾಂಶವನ್ನು ಕಾಪಾಡಿಕೊಳ್ಳಿ:** ಗಾಳಿಯಲ್ಲಿ ತೇವಾಂಶವನ್ನು ಕಾಪಾಡಿಕೊಳ್ಳಲು ಕೋಣೆಯಲ್ಲಿ ಆರ್ದ್ರಕವನ್ನು ಇರಿಸಿ.

**ಸಾಕಷ್ಟು ನೀರು ಕುಡಿಯಿರಿ:** ಚಳಿಗಾಲದಲ್ಲಿ ಜನರು ಕಡಿಮೆ ನೀರು ಕುಡಿಯುತ್ತಾರೆ, ಇದು ದೇಹದೊಳಗೆ ಶುಷ್ಕತೆಯನ್ನು ಹೆಚ್ಚಿಸುತ್ತದೆ. ಪ್ರತಿದಿನ ಕನಿಷ್ಠ 3-3.5 ಲೀಟರ್ ನೀರು ಕುಡಿಯಿರಿ.

**ಏನನ್ನು ಮಾಡಬಾರದು:** ಮೂಗಿನ ಒಳಭಾಗವನ್ನು ಬೆರಳು ಮಾಡುವುದು ಅಥವಾ ಉಜ್ಜುವುದನ್ನು ತಪ್ಪಿಸಿ. ನಿಮ್ಮ ಮೂಗು ನಿರ್ಬಂಧಿಸಿದ್ದರೆ ಪದೇ ಪದೇ ಔಷಧಿಗಳನ್ನು ಬಳಸಬೇಡಿ. ದೀರ್ಘಕಾಲದವರೆಗೆ ಹೀಟರ್ ಮುಂದೆ ಕುಳಿತುಕೊಳ್ಳುವುದನ್ನು ತಪ್ಪಿಸಿ. ಮೂಗಿನ ಆರೈಕೆಯನ್ನು ಸಾಮಾನ್ಯವಾಗಿ ಲಘುವಾಗಿ ತೆಗೆದುಕೊಳ್ಳಲಾಗುತ್ತದೆ, ಇದು ನಮ್ಮ ಉಸಿರಾಟದ ವ್ಯವಸ್ಥೆಯ ಮೊದಲ ರಕ್ಷಣಾತ್ಮಕ ತಡೆಗೋಡೆಯಾಗಿದೆ. ಸ್ವಲ್ಪ ಎಚ್ಚರಿಕೆಯು ಚಳಿಗಾಲದ ಸೋಂಕುಗಳಿಂದ ನಿಮಗೆ ಸಂಪೂರ್ಣ ರಕ್ಷಣೆಯನ್ನು ನೀಡುತ್ತದೆ.

# ತುಂಗಭದ್ರಾ ಡ್ಯಾಂ ಗೇಟ್ ಅಳವಡಿಕೆ ಮುಹೂರ್ತ ಡಿಸೆಂಬರ್‌ಗೆ ನಿಗದಿ

● ಎರಡನೇ ಬೆಳೆಗೆ ನೀರು ಸಿಗುವುದು ಅನುಮಾನ, ರೈತರಲ್ಲಿ ಗೊಂದಲ ● ಜಲಾಶಯದಲ್ಲಿ ಪ್ರಸ್ತುತ 80 ಟಿಎಂಸಿ ನೀರು ಸಂಗ್ರಹ

• **ಉದಯವಾಹಿನಿ, ಕೊಪ್ಪಳ**

ಕಳೆದ ವರ್ಷ ಭಾರೀ ಅನಾಹುತಕ್ಕೆ ಕಾರಣವಾಗಿದ್ದ ತುಂಗಭದ್ರಾ ಜಲಾಶಯದ ಕ್ರಸ್ಟ್‌ಗೇಟ್‌ಗಳ ಬದಲಾವಣೆ ಕಾಮಗಾರಿಗೆ ಕೊನೆಗೂ ಮುಹೂರ್ತ ನಿಗದಿಯಾಗಿದ್ದು, ಡಿಸೆಂಬರ್ ಮೊದಲ ವಾರದಿಂದ ಕಾರ್ಯಾರಂಭ ಮಾಡುವ ಸಾಧ್ಯತೆಯಿದೆ. ಆದರೆ, ಈ ಮಹತ್ವದ ಕಾಮಗಾರಿಗಾಗಿ ಜಲಾಶಯದ ನೀರಿನ ಮಟ್ಟವನ್ನು ಗಣನೀಯವಾಗಿ ಕಡಿಮೆ ಮಾಡಬೇಕಾಗಿರುವುದರಿಂದ ಈ ವರ್ಷ ಎರಡನೇ ಬೆಳೆಗೆ ನೀರು ಪೂರೈಸುವುದು ಕಷ್ಟಸಾಧ್ಯ ಎಂದು ತುಂಗಭದ್ರಾ ಮಂಡಳಿ ಸ್ಪಷ್ಟಪಡಿಸಿದೆ. ಕಳೆದ ವರ್ಷ ಜಲಾಶಯದ 19ನೇ ಕ್ರಸ್ಟ್ ಗೇಟ್ ತುಂಡಾಗಿ ನೂರಾರು ಟಿಎಂಸಿ ನೀರು ನದಿ ಪಾಲು ಆಗಿತ್ತು. ಈ ಘಟನೆಯ ಬಳಿಕ, ಏಳು ದಶಕಗಳಷ್ಟು ಹಳೆಯದಾದ ಎಲ್ಲಾ 32 ಗೇಟ್‌ಗಳನ್ನು ಬದಲಾಯಿಸಲು ಸರ್ಕಾರ ನಿರ್ಧರಿಸಿತ್ತು. ಅದರಂತೆ, ಗದಗ, ಹೊಸಪೇಟೆಯಲ್ಲಿ ಹೊಸ ಗೇಟ್‌ಗಳ ನಿರ್ಮಾಣ ಕಾರ್ಯ ನಡೆದಿದ್ದು, ಇದೀಗ ಅಳವಡಿಕೆಗೆ ಸಿದ್ಧತೆ ನಡೆದಿದೆ.

**ಕಾಮಗಾರಿಯ ಸವಾಲುಗಳು:** ತುಂಗಭದ್ರಾ ಮಂಡಳಿಯ ಅಂದಾಜಿನ ಪ್ರಕಾರ, ಒಂದು ಹಳೆಯ ಗೇಟ್ ತೆಗೆದು ಹೊಸ ಗೇಟ್ ಅಳವಡಿಸಲು ಸುಮಾರು 15 ದಿನಗಳು ಬೇಕಾಗುತ್ತವೆ. ಜಲಾಶಯದಲ್ಲಿ ಪ್ರಸ್ತುತ 80 ಟಿಎಂಸಿ ನೀರು ಸಂಗ್ರಹವಿದ್ದು, ಗೇಟ್ ಅಳವಡಿಕೆ ಕಾರ್ಯಕ್ಕೆ ನೀರಿನ ಮಟ್ಟವನ್ನು 40 ಟಿಎಂಸಿಗೆ ಇಳಿಸಬೇಕಿದೆ. ಆದರೆ, ಜಲಾನಯನ ಪ್ರದೇಶದಲ್ಲಿ ಮಳೆ ಮುಂದುವರಿದರೆ, ಒಳಹರಿವು ಹೆಚ್ಚಾಗಿ ಕಾಮಗಾರಿಗೆ ಅಡ್ಡಿಯಾಗುವ ಆತಂಕವೂ ಇದೆ. ಒಂದು ವೇಳೆ ಮಳೆ ಬಾರದೆ, ಪರಿಸ್ಥಿತಿ ಅನುಕೂಲಕರವಾಗಿದ್ದರೆ ಮಾತ್ರ ಡಿಸೆಂಬರ್‌ನಲ್ಲಿ ಕಾಮಗಾರಿ ಆರಂಭವಾಗಲಿದೆ.


ಉದಯವಾಹಿನಿ ಚಿತ್ರ

ನೂರಾರು ಟಿಎಂಸಿ ನೀರು ನದಿ ಪಾಲು

### ನೀರಿನ್ನು 40 ಟಿಎಂಸಿಗೆ ಇಳಿಸಬೇಕಿದೆ

**ತುಂಗಭದ್ರಾ ಜಲಾಶಯದ ಹಳೆಯ 32 ಕ್ರಸ್ಟ್ ಗೇಟ್‌ಗಳ ಬದಲಾವಣೆ ಕಾಮಗಾರಿ ಡಿಸೆಂಬರ್‌ನಲ್ಲಿ ಆರಂಭವಾಗಲಿದೆ. ಇದಕ್ಕಾಗಿ ಜಲಾಶಯದ ನೀರಿನ ಸಂಗ್ರಹವನ್ನು 80 ಟಿಎಂಸಿಯಿಂದ 40 ಟಿಎಂಸಿಗೆ ಇಳಿಸಬೇಕಿದೆ. ಈ ಬಾರಿ ಎರಡನೇ ಬೆಳೆಗೆ ನೀರು ಪೂರೈಸುವುದು ಅಸಾಧ್ಯವಾಗಿದೆ. ಇದು ಲಕ್ಷಾಂತರ ರೈತರನ್ನು ಸಂಕಷ್ಟಕ್ಕೆ ದೂಡಿದ್ದು, ಈ ವಿಚಾರವಾಗಿ ಆಡಳಿತ, ವಿರೋಧ ಪಕ್ಷಗಳ ನಡುವೆ ರಾಜಕೀಯ ಕೆಸರೆರಚಾಟ ಆರಂಭವಾಗಿದೆ.**

**ರಾಜಕೀಯ ಕೆಸರೆರಚಾಟ:** ಗೇಟ್ ಅಳವಡಿಕೆ ಮತ್ತು ನೀರು ಪೂರೈಕೆಯ ವಿಚಾರವು ಇದೀಗ ರಾಜಕೀಯ ಕೆಸರೆರಚಾಟಕ್ಕೆ ಕಾರಣವಾಗಿದೆ. ತುಂಗಭದ್ರಾ ಮಂಡಳಿ ಮನಸ್ಸು ಮಾಡಿದರೆ ಎರಡನೇ ಬೆಳೆಗೆ ನೀರು ಕೊಡಬಹುದು, ಎಂದು ವಿರೋಧ ಪಕ್ಷದ ನಾಯಕರು ಒತ್ತಾಯಿಸುತ್ತಿದ್ದಾರೆ. ಆದರೆ, ಆಡಳಿತ ಪಕ್ಷವು ಕಾಮಗಾರಿಯ ಅನಿವಾರ್ಯತೆಯನ್ನು ಮುಂದಿಟ್ಟುಕೊಂಡು ನೀರು ಪೂರೈಕೆಯ ಅಸಾಧ್ಯತೆಯನ್ನು ಹೇಳುತ್ತಿದೆ. ಈ ರಾಜಕೀಯ ಜಟಾಪಟಿಯ ನಡುವೆ ಎರಡನೇ ಬೆಳೆ ನಾಟಿ ಮಾಡಬೇಕೋ, ಬೇಡವೋ ಎಂಬ ಗೊಂದಲದಲ್ಲಿ ಅನ್ನದಾತ ಸಿಲುಕಿದ್ದಾನೆ.

### ಎರಡನೇ ಬೆಳೆಗೆ ನೀರು ಪೂರೈಕೆ ಕಷ್ಟ

**ಈ ವರ್ಷ ಎರಡನೇ ಬೆಳೆಗೆ ನೀರು ಲಭ್ಯವಿಲ್ಲ ಎಂದು ತುಂಗಭದ್ರಾ ಮಂಡಳಿ ಮೊದಲೇ ಸ್ಪಷ್ಟಪಡಿಸಿದೆ. ಈ ಬಾರಿ ಡ್ಯಾಂನಲ್ಲಿ 80 ಟಿಎಂಸಿ ನೀರನ್ನು ಮಾತ್ರ ಸಂಗ್ರಹ ಮಾಡಿಕೊಂಡಿರುವುದರಿಂದ ಎರಡನೇ ಬೆಳೆಗೆ ನೀರು ಸಿಗುವುದು ಕಷ್ಟಸಾಧ್ಯ, ಎಂದು ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ಖಚಿತಪಡಿಸಿದ್ದಾರೆ. ಈ ನಿರ್ಧಾರದಿಂದಾಗಿ ಕೊಪ್ಪಳ, ರಾಯಚೂರು, ಬಳ್ಳಾರಿ, ವಿಜಯನಗರ ಹಾಗೂ ಆಂಧ್ರ ಮತ್ತು ತೆಲಂಗಾಣದ ಲಕ್ಷಾಂತರ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ.**

---


## ಖಾನಾಪುರದಲ್ಲಿ ಜೋಡಿ ಆನೆಗಳ ಸಾವು
## ತನಿಖೆಗೆ ಸಚಿವ ಖಂಡ್ರೆ ಆದೇಶ

• **ಉದಯವಾಹಿನಿ, ಬೆಳಗಾವಿ**

ಜಿಲ್ಲೆಯ ಖಾನಾಪುರ ಬಳಿ ಸುಳೇಗಾಳಿ ಗ್ರಾಮದಲ್ಲಿ ವಿದ್ಯುತ್ ಸ್ಪರ್ಶದಿಂದ ಎರಡು ಆನೆಗಳು ಸಾವಿಗೀಡಾಗಿರುವ ಬಗ್ಗೆ ನೋವು ವ್ಯಕ್ತಪಡಿಸಿರುವ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ, ತನಿಖೆಗೆ ಆದೇಶ ನೀಡಿದ್ದಾರೆ. ಕಳೆದ ಕೆಲವು ದಿನಗಳಿಂದ ಇದೇ ಪ್ರದೇಶದಲ್ಲಿ ಆನೆಗಳು ಓಡಾಡುತ್ತಿದ್ದರೂ ಅರಣ್ಯ ಅಧಿಕಾರಿಗಳು ಮತ್ತು ಸಿಬ್ಬಂದಿ ಸೂಕ್ತ ಕ್ರಮ ಕೈಗೊಳ್ಳದೇ ಕರ್ತವ್ಯ ಲೋಪ ಮಾಡಿರುವುದೇ ಆನೆಗಳ ಸಾವಿಗೆ ಕಾರಣ ಎಂಬ ಆರೋಪವಿದೆ. ಈ ಬಗ್ಗೆ ಸಮಗ್ರ ತನಿಖೆ ನಡೆಸಿ, ಲೋಪವಿದ್ದಲ್ಲಿ ಶಿಸ್ತು ಕ್ರಮದ ಶಿಫಾರಸಿನೊಂದಿಗೆ 5 ದಿನಗಳ ಒಳಗಾಗಿ ವರದಿ ಸಲ್ಲಿಸಲು ಮುಖ್ಯ ವನ್ಯಜೀವಿ ಪರಿಪಾಲಕರಿಗೆ ಸೂಚಿಸಿದ್ದಾರೆ. ಬೇಲಿಗೆ ವಿದ್ಯುತ್ ಸಂಪರ್ಕ ನೀಡಿ ಆನೆಗಳ ಸಾವಿಗೆ ಕಾರಣರಾದವರ ವಿರುದ್ಧ ಕಾನೂನು ರೀತ್ಯ ಪ್ರಕರಣ ದಾಖಲಿಸಲು ಈಶ್ವರ ಖಂಡ್ರೆ ನಿರ್ದೇಶನ ನೀಡಿದ್ದಾರೆ.

**ಏನಿದು ಪ್ರಕರಣ?:** ಖಾನಾಪುರ ತಾಲ್ಲೂಕಿನ ಸುಳೇಗಾಳಿ ಮೀಸಲು ಅರಣ್ಯ ಪ್ರದೇಶದಲ್ಲಿ ವಿದ್ಯುತ್ ತಂತಿ ಸ್ಪರ್ಶಿಸಿ ಜೊಡಾನೆಗಳು ಸಾವನ್ನಪ್ಪಿದ್ದವು. ಆನೆಗಳ ಹಿಂಡಿನಿಂದ ಬಂದ ಸರಿಸುಮಾರು ನಾಲ್ಕು ವರ್ಷಗಳ ವಯಸ್ಸಿನ ಒಂದು ಗಂಡು, ಒಂದು ಹೆಣ್ಣು ಆನೆ ಮೃತಪಟ್ಟಿದ್ದವು.

ಘಟನೆ ತಿಳಿಯುತ್ತಿದ್ದಂತೆ ನಾಗರಗಾಳಿ ವಲಯದ ಆರ್‌ಎಫ್‌ಒ ಸಚಿನ ಹೊನಮನಿ, ಡಿಎಫ್‌ಒ ಕ್ರಾಂತಿ ಅಧಿಕಾರಿಗಳ ತಂಡದಿಂದ ಸ್ಥಳ ಪರಿಶೀಲನೆ ನಡೆಸಲಾಗಿತ್ತು. ಮೃಗಾಲಯ ಡಾ. ನಾಗೇಶ ಹುಯಿಲಗೋಳ ಮರಣೋತ್ತರ ಪರಿಕ್ಷೆ ನಡೆಸಿದ್ದರು.



---

# ಹೊಸ ಡ್ಯಾಂ ನಿರ್ಮಾಣಕ್ಕೆ ಮುಂದಾದ ಸರ್ಕಾರ

ಬಾಬಾನಗರದ ಹತ್ತಿರ 0.8 ಟಿಎಂಸಿ ಸಾಮರ್ಥ್ಯದ ಜಲ ಸಂಗ್ರಹಾರ ನಿರ್ಮಾಣ

• **ಉದಯವಾಹಿನಿ, ವಿಜಯಪುರ**

ತುಬಚಿ – ಬಬಲೇಶ್ವರ ಯೋಜನೆಯಡಿ ಹಂಚಿಕೆಯಾದ ನಮ್ಮ ಪಾಲಿನ ನೀರನ್ನು ಗರಿಷ್ಠ ಮಟ್ಟದಲ್ಲಿ ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಬಾಬಾನಗರದ ಹತ್ತಿರ 0.8 ಟಿಎಂಸಿ ಜಲಸಂಗ್ರಹಗಾರ ನಿರ್ಮಾಣಕ್ಕೆ ಸಮಗ್ರ ಯೋಜನಾ ವರದಿ ಸಿದ್ಧಪಡಿಸಿ ಸರಕಾರಕ್ಕೆ ಸಲ್ಲಿಸಲಾಗುವುದು, ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ಹೇಳಿದರು.

ಬಾಬಾನಗರ ಹತ್ತಿರವಿರುವ ಉದ್ದೇಶಿತ ಯೋಜನಾ ಪ್ರದೇಶಕ್ಕೆ ಭಾನುವಾರ ಅಧಿಕಾರಿಗಳು, ರೈತ ಮುಖಂಡರೊಂದಿಗೆ ಭೇಟಿ ನೀಡಿ ಸ್ಥಳ ಪರಿಶೀಲಿಸಿ ಅವರು ಮಾತನಾಡಿದರು. ಈ ಯೋಜನೆಯಡಿ 5.5 ಟಿಎಂಸಿ ನೀರು ಇದ್ದರೂ ಸಂಪೂರ್ಣ ಬಳಕೆ ಮಾಡಿಕೊಳ್ಳಲು ಸಾಧ್ಯವಾಗಿಲ್ಲ. ಈಗಾಗಲೇ ನಮ್ಮ ಪಾಲಿನ 2 ಟಿಎಂಸಿ ನೀರು ಮಾತ್ರ ಬಳಕೆ ಮಾಡಿಕೊಳ್ಳಲಾಗುತ್ತಿದೆ. ಎಫ್‌ಐಡಿ ಆದ ನಂತರವೂ 3 ಟಿಎಂಸಿ ನೀರು ಮಾತ್ರ ಬಳಕೆಯಾಗುತ್ತದೆ. ಹಾಗಾಗಿ ಉಳಿದ 2.5 ಟಿಎಂಸಿ ನೀರನ್ನು ಶೇಖರಿಸಿಕೊಂಡು ಗರಿಷ್ಠ ಮಟ್ಟದ ನೀರನ್ನು ಬಳಕೆ ಮಾಡುವ ನಿಟ್ಟಿನಲ್ಲಿ 0.8 ಟಿಎಂಸಿ ಜಲಸಂಗ್ರಹಾರ ನಿರ್ಮಾಣ ಮಾಡುವ ಯೋಜನೆ ಹಾಕಿಕೊಳ್ಳಲಾಗಿದೆ. ಎಲ್ಲರ ಸಲಹೆ–ಸೂಚನೆಗಳನ್ನು ಪಡೆದು ಯಾವುದೇ ತಾಂತ್ರಿಕ ಸಮಸ್ಯೆಗಳಿದ್ದರೂ ಸರಿಪಡಿಸಲಾಗುವುದು, ಎಂದರು.

ಮಳೆಗಾಲದಲ್ಲಿ ಮಾತ್ರ ಏತ ನೀರಾವರಿ ಮೂಲಕ ನೀರನ್ನು ಒದಗಿಸಲಾಗುತ್ತದೆ. ಬೇಸಿಗೆಯಲ್ಲಿ ಈ ನೀರನ್ನು ಸದ್ಬಳಕೆ ಮಾಡಿಕೊಂಡು ಕೆರೆ–ಹಳ್ಳಗಳಿಗೆ ನೀರೊದಗಿಸಲು, ಯೋಜನೆ ರೂಪಿಸಲಾಗಿದೆ. ಬಾಬಾನಗರದ ಹತ್ತಿರ 500 ಎಕರೆ ಸರಕಾರಿ ಜಮೀನು ಇದ್ದು, ಜಲಸಂಗ್ರಹಗಾರ ನಿರ್ಮಾಣಕ್ಕೆ ಯಾವುದೇ ಭೂಸ್ವಾಧೀನಕ್ಕೆ ಹಣ ವೆಚ್ಚ ಮಾಡುವ ಅವಶ್ಯಕತೆ ಇಲ್ಲ. ತೆಗ್ಗು ಪ್ರದೇಶ, ನೈಸರ್ಗಿಕ ಸಂಪನ್ಮೂಲಗಳನ್ನು ಬಳಕೆ ಮಾಡಿಕೊಂಡು ನೀರಿನ ಸದ್ಬಳಕೆ ಮಾಡಿಕೊಳ್ಳಲು ಯೋಜನೆ ಹಾಕಿಕೊಳ್ಳಲಾಗಿದೆ, ಎಂದರು.

ನೀರಾವರಿ ನಿಗಮ ನಿಯಮಿತದ ಬೆಳಗಾವಿ ವೃತ್ತದ ಅಧೀಕ್ಷಕ ಅಭಿಯಂತರ ಬಿ.ಆರ್.ರಾಠೋಡ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಅಂಬಣ್ಣ, ನೀರಾವರಿ ತಜ್ಞ ಡಾ.ಹುಗ್ಗಿ ಇತರರಿದ್ದರು.


ಉದಯವಾಹಿನಿ ಚಿತ್ರ


### 500 ಎಕರೆ ಸರ್ಕಾರಿ ಜಮೀನು ಲಭ್ಯ

**ವಿಜಯಪುರ ಜಿಲ್ಲೆಯಲ್ಲಿ ತುಬಚಿ–ಬಬಲೇಶ್ವರ ಯೋಜನೆಯಡಿ ಹಂಚಿಕೆಯಾದ ನೀರನ್ನು ಗರಿಷ್ಠವಾಗಿ ಬಳಸಿಕೊಳ್ಳಲು ಬಾಬಾನಗರದ ಬಳಿ 0.8 ಟಿಎಂಸಿ ಸಾಮರ್ಥ್ಯದ ಜಲಸಂಗ್ರಹಗಾರ ನಿರ್ಮಿಸಲು ಯೋಜನೆ ರೂಪಿಸಲಾಗಿದೆ. ಈ ನಿಟ್ಟಿನಲ್ಲಿ ಸಮಗ್ರ ವರದಿ ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಲಾಗುವುದು. 500 ಎಕರೆ ಸರ್ಕಾರಿ ಜಮೀನು ಲಭ್ಯವಿದ್ದು, ಭೂಸ್ವಾಧೀನಕ್ಕೆ ಹಣ ವ್ಯಯವಾಗುವುದಿಲ್ಲ. ಮುಂದಿನ 6 ತಿಂಗಳಲ್ಲಿ ಕಾಮಗಾರಿ ಪೂರ್ಣಗೊಂಡು ರೈತರ ಹೊಲಗಳಿಗೆ ನೀರು ಹರಿಸಲಾಗುವುದು.**

### 6 ತಿಂಗಳಲ್ಲಿ ಕಾಮಗಾರಿ ಪೂರ್ಣ

**ಕಳೆದ 2013 – 18 ರ ಅವಧಿಯಲ್ಲಿ ತುಬಚಿ – ಬಬಲೇಶ್ವರ ಯೋಜನೆಗೆ ಈ ಭಾಗದ ಅತಿ ಎತ್ತರದ ಪ್ರದೇಶವಾದ ಕನಮಡಿ, ಬಾಬಾನಗರ, ಬಿಜ್ಜರಗಿ, ತಿಕೋಟಾ ತಾಲ್ಲೂಕು ಹಾಗೂ ಸಾವಳಗಿ ಭಾಗದ 1.30 ಲಕ್ಷ ಎಕರೆಗೆ 6.3 ಟಿಎಂಸಿ, 5.5 ತಿಕೋಟಾ ಹೋಬಳಿ, ಸಾವಳಿಗೆ 0.8 ಟಿಎಂಸಿ ನೀರೊದಗಿಸಲು 3,600 ಕೋಟಿ ರೂ. ವೆಚ್ಚ ಮಾಡಲಾಗಿದೆ. ಈಗಾಗಲೇ ಅಂತರ್ಜಲ ಮಟ್ಟ ಹೆಚ್ಚಾಗಿ ರೈತರು ಸಂತಸದಲ್ಲಿದ್ದಾರೆ. ಎಫ್‌ಐಸಿ ಯೋಜನೆ ಪೂರ್ಣಗೊಂಡು ಕೆರೆಗಳಿಗೆ ನೀರು ಒದಗಿಸಲಾಗುತ್ತಿದೆ. ಟೆಂಡರ್ ಆಗಿ ಕಾಮಗಾರಿ ನಡೆಯುತ್ತಿದ್ದು, ಮುಂದಿನ 6 ತಿಂಗಳಲ್ಲಿ ಕಾಮಗಾರಿ ಪೂರ್ಣಗೊಂಡು ರೈತರ ಹೊಲಗಳಿಗೆ ನೀರು ಹರಿಸಲಾಗುವುದು.**

**–ಎಂ.ಬಿ.ಪಾಟೀಲ, ಸಚಿವ**



---

## ದುರ್ಬಳಕೆಯಾದ ಹಣ ಸರಕಾರಕ್ಕೆ ವಾಪಸ್ ಜಮಾ ಮಾಡಿಕೊಳ್ಳಲು ಆಗ್ರಹ

• **ಉದಯವಾಹಿನಿ, ಯಾದಗಿರಿ**

ಮುದ್ನಾಳ ಗ್ರಾಮ ಪಂಚಾಯಿತಿ ಪಿಡಿಒ ನೀಲಕಂಠ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ, ಅಕ್ರಮಕ್ಕೆ ಸಹಕರಿಸಿದ ಇಒ, ಜಿಲ್ಲಾ ಪಂಚಾಯಿತಿ ಪಿಡಿಒ ಅವರ ವಿರುದ್ಧವೂ ಕ್ರಮ ಜರುಗಿಸಬೇಕು. ದುರ್ಬಳಕೆ ಆಗಿರುವ ಹಣವನ್ನು ಸರಕಾರಕ್ಕೆ ವಾಪಸ್ ಪಡೆದುಕೊಳ್ಳಬೇಕು ಎಂದು ಸಾಮಾಜಿಕ ಹೋರಾಟಗಾರ ಉಮೇಶ ಕೆ. ಮುದ್ನಾಳ ಒತ್ತಾಯಿಸಿದರು.

ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, 2021–22ನೇ ಸಾಲಿನ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಸಮುದಾಯ ಗೋದಾಮು ಕಾಮಗಾರಿ ಅಪೂರ್ಣವಾಗಿದ್ದರೂ, 18.64 ಲಕ್ಷ ರೂಪಾಯಿ ಪಾವತಿಸಿ ಅವ್ಯವಹಾರ ಮಾಡಲಾಗಿದೆ. ಪಂಚಾಯಿತಿ ಅಧ್ಯಕ್ಷರು, ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸುವಂತೆ ಆಗಸ್ಟ್ ತಿಂಗಳಲ್ಲಿ ಜಿಪಂ ಸಿಇಒ ಅವರು ಇಒ ಅವರಿಗೆ ಸೂಚನೆ ನೀಡಿದ್ದರೂ ಕ್ರಮ ಜರುಗಿಸಿಲ್ಲ ಎಂದು ದೂರಿದರು.

ಆರ್‌ಒ ಪ್ಲಾಂಟ್, ಗ್ರಂಥಾಲಯ ಸೇರಿದಂತೆ ಇತರೆ ಕಾಮಗಾರಿಗಳಲ್ಲೂ ಅಕ್ರಮ ಎದಗಿಸಿ ಕೋಟ್ಯಂತರ ರೂಪಾಯಿ ಲೂಟಿ ಮಾಡಿದ್ದಾರೆ. ಆದ್ದರಿಂದ, ತಡಮಾಡದೆ ಕ್ರಮ ಜರುಗಿಸಿ ದುರ್ಬಳಕೆ ಆಗಿರುವ ಹಣವನ್ನು ವಾಪಸ್ ವಸೂಲಿ ಮಾಡಿ ಸರಕಾರಕ್ಕೆ ಜಮಾ ಮಾಡಬೇಕು ಎಂದು ಆಗ್ರಹಿಸಿದರು. ಸುಳ್ಳು ಕಾರಣ ನೀಡಿ ಪಿಡಿಒ ರಜೆ ತೆಗೆದುಕೊಂಡು ಹೋಗಲು ಹಿರಿಯ ಅಧಿಕಾರಿಗಳೇ ಮಾರ್ಗದರ್ಶ ಮಾಡಿದ್ದಾರೆ.

ಅರಕೇರಾ ಕೆ ಗ್ರಾಮ ಪಂಚಾಯಿತಿಗೆ ವರ್ಗಾವಣೆ ಮಾಡಲಾಗಿದ್ದು, ಅವರ ವಿರುದ್ಧ ಕೂಡಲೇ ಕ್ರಮ ಜರುಗಿಸದಿದ್ದರೆ ಗೋ ಬ್ಯಾಕ್ ಪಿಡಿಒ ಹೋರಾಟ ಆರಂಭಿಸಲಾಗುತ್ತದೆ ಎಂದು ಎಚ್ಚರಿಸಿದರು. ಸಾಬಯ್ಯ ಗುತ್ತೇದಾರ್, ಶರಣು ನಾರಾಯಣಪೇಟ ಇದ್ದರು.


ಉದಯವಾಹಿನಿ ಚಿತ್ರ

ಪಿಡಿಒ ಅಮಾನತಿಗೆ ಒತ್ತಾಯ

---

## ರೈತರನ್ನು ಒಡೆದು ಆಳುವ ಸಕ್ಕರೆ ಕಾರ್ಖಾನೆಗಳ ನೀತಿಗೆ ಡಿಸಿ ಗರಂ

• **ಉದಯವಾಹಿನಿ, ವಿಜಯನಗರ**

ಸಕ್ಕರೆ ಕಾರ್ಖಾನೆಗಳು ಜಿಲ್ಲೆಯ ಕಬ್ಬು ಬೆಳೆಗಾರರಿಂದ ಖರೀದಿಸುವ ಕಬ್ಬಿಗೆ ದರ ನಿಗದಿ ಸಂಬಂಧಿಸಿದಂತೆ ಇಲ್ಲಿನ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸೋಮವಾರ ಸಂಜೆ ಸಭೆ ನಡೆದಿದ್ದು, ರಾತ್ರಿಯೊಳಗೆ ಪರಿಷ್ಕೃತ ದರ ಸೂತ್ರದೊಂದಿಗೆ ತಮಗೆ ತಿಳಿಸುವಂತೆ ಕಂಪನಿಗಳ ಪ್ರತಿನಿಧಿಗಳಿಗೆ ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ಸೂಚಿಸಿದರು. ಡಿಸಿ ಅವರ ಈ ಸೂಚನೆಗೆ ಕಂಪನಿಗಳ ಪ್ರತಿನಿಧಿಗಳು ಒಪ್ಪಿಗೆ ಸೂಚಿಸಿದ್ದು, ತಕ್ಷಣ ಮಾಹಿತಿ ನೀಡುವುದಾಗಿ ಹೇಳಿದರು. ಹೀಗಾಗಿ ಬಹುತೇಕ ಮಂಗಳವಾರವೇ ಕಬ್ಬಿನ ದರವನ್ನು ನಿಗದಿಪಡಿಸಿ ಜಿಲ್ಲಾಧಿಕಾರಿ ಅವರು ಆದೇಶ ಹೊರಡಿಸುವ ಸಾಧ್ಯತೆ ದಟ್ಟವಾಗಿದೆ.

ಕಮಲಾಪುರ ಭಾಗದಲ್ಲಿ ಕಂಪನಿಗಳು ರೈತರನ್ನು ಒಡೆದು ಆಳುವ ನೀತಿಯಂತೆ ಕಬ್ಬು ಖರೀದಿಸಲು ಮುಂದಾಗಿದ್ದರು. ಇದಕ್ಕೆ ಹೊಸಪೇಟೆ ರೈತ ಸಂಘದ ಮುಖಂಡರು ಆಕ್ಷೇಪ ಎತ್ತಿದ ಕಾರಣ ಶಾಸಕ ಎಚ್.ಆರ್.ಗವಿಯಪ್ಪ ಅವರು ಇಂದಿನ ಈ ಸಭೆ ನಿಗದಿಪಡಿಸಿದ್ದರು. ಬೆಂಗಳೂರಿಗೆ ಬರಲು ಅವರಿಗೆ ಪಕ್ಷದ ವತಿಯಿಂದ ತುರ್ತು ಕರೆ ಬಂದ ಕಾರಣ ಅವರು ಸಭೆಯಲ್ಲಿ ಹಾಜರಿರಲಿಲ್ಲ. ಆದರೆ ಜಿಲ್ಲಾಧಿಕಾರಿ ಅವರು ರೈತರ ಭಾವನೆಗೆ ಸ್ಪಂದಿಸಿ, ಕಾರ್ಖಾನೆಗಳ ಒಡೆದು ಆಳುವ ನೀತಿಯನ್ನು ಬಹಿರಂಗವಾಗಿಯೇ ಖಂಡಿಸಿದರು.

ರೈತರು ಟನ್ ಕಬ್ಬಿಗೆ 3,200 ಕೇಳುತ್ತಿದ್ದಾರೆ. ಸಕ್ಕರೆ ಕಾರ್ಖಾನೆಗಳ ಪ್ರತಿನಿಧಿಗಳು ಕಂಪನಿ ಮಾಲೀಕರೊಂದಿಗೆ ಮಾತನಾಡಿ, ನನಗೆ ಕಬ್ಬಿನ ದರದ ಕುರಿತು ಸ್ಪಷ್ಟ ಮಾಹಿತಿ ನೀಡಬೇಕು. ಇದಕ್ಕೆ ಸ್ಪಂದಿಸದಿದ್ದರೆ ಕಬ್ಬು ತುಂಬಿದ ಲಾರಿಗಳ ಸಂಚಾರವನ್ನು ತಡೆಯುವುದು ಅನಿವಾರ್ಯವಾಗಲಿದೆ ಎಂದು ಜಿಲ್ಲಾಧಿಕಾರಿ ಖಡಕ್ ಎಚ್ಚರಿಕೆ ನೀಡಿದರು.




---

## ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ
## 46 ದಿನ ಪೂರೈಸಿದ ಹೋರಾಟ

• **ಉದಯವಾಹಿನಿ, ವಿಜಯಪುರ**

ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಗಾಗಿ ನಡೆಯುತ್ತಿರುವ ಅನಿರ್ದಿಷ್ಟಾವಧಿ ಧರಣಿಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘ, ಹಸಿರು ಸೇನೆ ಪದಾಧಿಕಾರಿಗಳು ಪಾಲ್ಗೊಂಡು ಬೆಂಬಲ ಸೂಚಿಸಿದರು. ಸೇನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಹುಲ್ ಕುಬಕಡ್ಡಿ ಮಾತನಾಡಿ, ಜಿಲ್ಲೆಯ ಜನರ ಆರೋಗ್ಯ ಹಕ್ಕನ್ನು ರಕ್ಷಿಸುವ ಮಹತ್ವದ ಹೋರಾಟವಾಗಿದೆ. ಈ ಹೋರಾಟವು ಕೇವಲ ವೈದ್ಯಕೀಯ ಕಾಲೇಜಿನ ಸ್ಥಾಪನೆಗೆ ಮಾತ್ರವಲ್ಲ, ಉತ್ತರ ಕರ್ನಾಟಕದ ರೈತರ ಹಾಗೂ ಜನರ ಆರೋಗ್ಯ ಸುರಕ್ಷತೆಗೆ ಸಂಬಂಧಿಸಿದ್ದು, ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಹಸಿರು ಸೇನೆಯ ರಾಜ್ಯ ಉಪಾಧ್ಯಕ್ಷ ಕಲ್ಲು ಸೊನ್ನದ ಮಾತನಾಡಿ, ರೈತ ಸಮುದಾಯವು ಆರೋಗ್ಯ ಸೇವೆಯ ಕೊರತೆಯಿಂದ ತುಂಬಾ ಅನ್ಯಾಯಕ್ಕೆ ಒಳಗಾಗಿದೆ. ವಿಜಯಪುರದಂತಹ ಹಿಂದುಳಿದ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಯು ಜನರ ಜೀವನಕ್ಕೆ ರಕ್ಷಣೆಯಾಗುತ್ತದೆ. ನಾವು ಈ ಚಳವಳಿಗೆ ಪೂರ್ಣ ಬೆಂಬಲ ನೀಡುತ್ತಿದ್ದು, ಸರ್ಕಾರದ ಯಾವುದೇ ವಿಳಂಬವನ್ನು ವಿರೋಧಿಸುತ್ತೇವೆ ಎಂದರು. ಹಸಿರು ಸೇನೆಯ ಪದಾಧಿಕಾರಿಗಳು ಸಹ, ಸರ್ಕಾರಿ ವೈದ್ಯಕೀಯ ಕಾಲೇಜು ಅಗತ್ಯತೆಯನ್ನು ಒತ್ತಿ ಹೇಳಿ, ಹೋರಾಟಕ್ಕೆ ತಮ್ಮ ಸಂಘಟನೆಯ ಎಲ್ಲಾ ಸದಸ್ಯರ ಬೆಂಬಲವನ್ನು ಘೋಷಿಸಿದರು.


ಉದಯವಾಹಿನಿ ಚಿತ್ರ

---

## ನಿರ್ಜನ ಪ್ರದೇಶದಲ್ಲಿ ಹೆಚ್ಚಿದ ಕುಡುಕರ ಹಾವಳಿ

• **ಉದಯವಾಹಿನಿ, ಜೇವರ್ಗಿ**

ಪಟ್ಟಣ ಹೊರ ವಲಯದಲ್ಲಿರುವ ಖಾಲಿ ನಿವೇಶನಗಳು ಸಂಜೆಯಾಗುತ್ತಲೇ ಪುಂಡರು ಮದ್ಯಪಾನ ಮಾಡುತ್ತ ಹರಟೆ ಹೊಡೆಯುವ ಸ್ಥಳಗಳಾಗಿವೆ. ಪಟ್ಟಣದ ವಿಜಯಪುರ ರಸ್ತೆಯಲ್ಲಿರುವ ಲೇಔಟ್, ಬೈಪಾಸ್ ರಸ್ತೆ, ಫುಡ್‌ಪಾರ್ಕ್, ತಾಲ್ಲೂಕು ಕ್ರೀಡಾಂಗಣ, ಶಹಾಪುರ ರಸ್ತೆಯಲ್ಲಿ ಬರುವ ಲೇಔಟ್ ಸೇರಿದಂತೆ ಹಲವಾರು ಖಾಲಿ ನಿವೇಶನಗಳು ಕುಡುಕರು ಅಡ್ಡೆಗಳಾಗಿ ಪರಿವರ್ತನೆ ಮಾಡಿಕೊಂಡಿದ್ದಾರೆ.

ಪಟ್ಟಣದಲ್ಲಿ ಪರವಾನಿಗೆ ಹೊಂದಿರುವ ಐದು ಸಿಎಲ್–7, ಎರಡು ಸಿಎಲ್–9, ಎರಡು ಸಿಎಲ್–2, ಎರಡು ಎಂಎಸ್‌ಐಎಲ್ ಸೇರಿ ಒಟ್ಟು 11 ಬಾರುಗಳಿವೆ. ರಾತ್ರಿ 10 ಗಂಟೆ ಹೊತ್ತಿಗೆ ಎಲ್ಲೆಡೆ ಬಾರ್, ವೈನ್‌ಶಾಪ್‌ಗಳು ಬಂದ್ ಆದರೂ ರಾತ್ರಿ ಕುಡುಕರ ಹಾವಳಿ ರಾತ್ರಿಯಿಡಿ ಮುಂದುವರಿಯುತ್ತದೆ. ಪಟ್ಟಣದಲ್ಲಿರುವ, ಶಾಲಾ ಆವರಣ, ಕೆರೆ–ಕಟ್ಟೆ, ಹೊಂಡಗಳ ಆಸುಪಾಸಿನ ಖಾಲಿ ಜಾಗಗಳೇ ಕುಡುಕರ ಪಾಲಿಗೆ ಬಾರ್ ಆಗಿ ತಲೆ ಎತ್ತಿದ್ದು ಸಾರ್ವಜನಿಕರಿಗೆ ಕಿರಿಕಿರಿ ಎನಿಸಿದೆ. ಕುಡುಕರ ಹಾವಳಿ ತೀವ್ರಗೊಳ್ಳುತ್ತಿದ್ದು, ಸಾರ್ವಜನಿಕರು ರಸ್ತೆಗಳಲ್ಲಿ ನಿರಾತಂಕವಾಗಿ ಓಡಾಡುವುದು ಕಷ್ಟಸಾಧ್ಯವಾಗುತ್ತಿದೆ. ಎಲ್ಲೆಂದರಲ್ಲಿ ಮುಕ್ತ ಬಾರ್‌ಗಳು ತಲೆ ಎತ್ತುತ್ತಿದ್ದು ಕುಡುಕರ ನಿಯಂತ್ರಣವೇ ಇಲ್ಲದಾಗಿದೆ. ಸಾರ್ವಜನಿಕ ಸ್ಥಳಗಳಲ್ಲಿ ಕಾನೂನಿನ ಭಯ ಇಲ್ಲದ ಕಾರಣ ಕಿಡಿಗೇಡಿಗಳ ಹಾವಳಿ ನಿರಾತಂಕವಾಗಿ ಮುಂದುವರಿದಿದೆ.

ಕದ್ದುಮುಚ್ಚಿ ಮದ್ಯಪಾನ ಮಾಡುವವರು, ಕೆಲ ಪುಂಡರು ಅಕ್ಕಪಕ್ಕದ ಸಾರ್ವಜನಿಕ ಸ್ಥಳದ ಸಂದಿಗೊಂದಿಗಳನ್ನು ಹುಡುಕುತ್ತಾರೆ. ಜನಸಂಚಾರ ಕಡಿಮೆ ಇರುವ ಅಥವಾ ಸಂದಿಗೊಂದಿಗಳಲ್ಲಿ ಕುಳಿತು ಮದ್ಯಪಾನ ಮಾಡುತ್ತಾರೆ. ಕೆಲವೊಮ್ಮೆ ರಸ್ತೆ ಪಕ್ಕದಲ್ಲೇ ಮದ್ಯಪಾನ ಮಾಡುತ್ತಿರುವ ದೃಶ್ಯಗಳು ಕಂಡು ಬರುತ್ತಿವೆ. ಸಂಜೆಯಾಗುವುದೇ ತಡ ಬೈಕ್ ಹಾಗೂ ಕಾರುಗಳಲ್ಲಿ ಮದ್ಯದ ಬಾಟಲ್‌ಗಳೊಂದಿಗೆ ತೆರಳಿ ಕುಡಿದು ರಸ್ತೆ ಮೇಲೆ ಬಾಟಲ್ ಒಡೆದು ಹಾಕಲಾಗುತ್ತಿದೆ. ಬೆಳಿಗ್ಗೆ ಹಾಗೂ ಸಂಜೆ ವಾಯು ವಿಹಾರಕ್ಕೆ ಹೋಗುವವರು ತೀವ್ರ ಕಿರಿಕಿರಿ ಅನುಭವಿಸುತ್ತಿದ್ದಾರೆ. ಮಹಿಳೆಯರು ಸಂಜೆ ಸಮಯದಲ್ಲಿ ಅಡ್ಡಾಡಲು ಹಿಂಜರಿಯುತ್ತಿದ್ದಾರೆ.

ಪಟ್ಟಣದ ಕೆಲವು ಮಾಂಸಹಾರಿ, ಹೋಟೆಲ್, ಡಾಬಾಗಳಲ್ಲಿ ಕದ್ದು ಮುಚ್ಚಿ ಹೆಚ್ಚಿನ ಬೆಲೆಯಲ್ಲಿ ಮದ್ಯ ಮಾರಲಾಗುತ್ತಿದ್ದು, ಇದಕ್ಕೆ ಕಡಿವಾಣ ಹಾಕಬೇಕು' ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.


ಉದಯವಾಹಿನಿ ಚಿತ್ರ

---

## ಮಿನಿ ನ್ಯೂಸ್

### ಟಿಎಪಿಸಿಎಮ್‌ಎಸ್ ಇಬ್ಬರು ನಿರ್ದೇಶಕರಿಗೆ ಕೋ–ಆಪ್ಟ್ ನೇಮಕ

• **ಉದಯವಾಹಿನಿ, ಚಿಂಚೋಳಿ**

ತಾಲ್ಲೂಕಾ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘ ನಿಯಮಿತ ಆಡಳಿತ ಮಂಡಳಿಗೆ ವಿಷಯ ಪರಿಣಿತ ನಿರ್ದೇಶಕರುಗಳಾಗಿ ರೇವಣಸಿದ್ದಪ್ಪಾ ಶಾಮರಾವ ಬುಬಲಿ, ಮಾಣಿಕ ಶಿವಪ್ಪಾ ಗೌತಮ ಅವರನ್ನು ಕೋ–ಆಪ್ಟ್ ಮಾಡಲಾಗಿದೆ ಎಂದು ಮುಖ್ಯ ಕಾರ್ಯನಿರ್ವಾಣಾಧಿಕಾರಿ ಅತೀಕಪಾಶಾ ತಿಳಿಸಿದ್ದಾರೆ. ಪಟ್ಟಣದ ಚಂದಾಪೂರದ ತಾಲ್ಲೂಕು ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ನಿಯಮಿತ ಸಂಘದ ಕಾರ್ಯಾಲಯದಲ್ಲಿ ಸಂಘದ ಅಧ್ಯಕ್ಷ ಸಂಜೀವನ್ ರಮೇಶ ಯಾಕಾಪೂರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕೋಡ್ಲಿ ಗ್ರಾಮದ ರೇವಣಸಿದ್ದಪ್ಪಾ ಶಾಮರಾವ ಬುಬಲಿ, ನಿಡಗುಂದಾ ಗ್ರಾಮದ ಮಾಣಿಕ ಶಿವಪ್ಪಾ ಗೌತಮ ಅವರನ್ನು ಸಂಘದ ಆಡಳಿತ ಮಂಡಳಿ ನಿರ್ಧೇಶಕರ ಸಹಮತ, ಸಹಕಾರ ಇಲಾಖೆ ನಿಯಮಾನುಸಾರವಾಗಿ ಸಂಘದ ಆಡಳಿತ ಮಂಡಳಿಗೆ ವಿಷಯ ಪರಿಣಿತ ನಿರ್ದೇಶಕರುಗಳಾಗಿ ಕೋ–ಆಪ್ಟ್ ಮಾಡಲಾಗಿದೆ ಎಂದು ಸಭೆಯಲ್ಲಿ ತಿಳಿಸಿದರು. ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ಅಬ್ದುಲ್ ಬಾಷೀದ್, ಆಡಳಿತ ಮಂಡಳಿ ನಿರ್ಧೇಶಕರಾದ ರಮೇಶ ಯಾಕಾಪೂರ, ಪೀರಪ್ಪಾ, ಮುಕುಂದರಾವ ದೇಶಪಾಂಡೆ, ವೀರಶೆಟ್ಟಿ ಪಾಟೀಲ, ಪ್ರಭುಲಿಂಗ ಲೇವಡಿ, ಕಾಶೀನಾಥ ಪೂಜಾರಿ, ರಜೀಯ ಬೇಗಂ, ಬಕ್ಕಮ್ಮ, ಗುಂಡಮ್ಮ ಅನೇಕರಿದ್ದರು.




### ಬುರುಡೆ ಗ್ಯಾಂಗ್‌ನ ಮಹೇಶ್ ಶೆಟ್ಟಿ ತಿಮರೋಡಿ ಕೊನೆಗೂ ಪ್ರತ್ಯಕ್ಷ

• **ಉದಯವಾಹಿನಿ, ಮಂಗಳೂರು**

ಕಳೆದ 50 ದಿನಗಳಿಂದ ನಾಪತ್ತೆಯಾಗಿ ಭೂಗತನಾಗಿದ್ದ ಬುರುಡೆ ಗ್ಯಾಂಗ್‌ನ ಮಹೇಶ್ ಶೆಟ್ಟಿ ತಿಮರೋಡಿಗೆ ಕೊನೆಗೂ ಪ್ರತ್ಯಕ್ಷವಾಗಿದ್ದಾರೆ. ಸೋಮವಾರ ಬೆಳ್ತಂಗಡಿ ಕೋರ್ಟ್‌ಗೆ ಹಾಜರಾಗಿದ್ದು, ವಾರೆಂಟ್ ರೀಕಾಲ್ ಮಾಡಿ ತೆರಳಿದ್ದಾರೆ. ಕಳೆದ ವರ್ಷ ಉಜಿರೆಯಲ್ಲಿ ಸೌಜನ್ಯ ಪರವಾಗಿ ಅನಧಿಕೃತ ಬ್ಯಾನರ್ ಹಾಕಿದ್ದ ಹಿನ್ನೆಲೆಯಲ್ಲಿ ತಿಮರೋಡಿ ಸೇರಿ 6 ಮಂದಿಯ ವಿರುದ್ಧ ಬೆಳ್ತಂಗಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಈ ಸಂಬಂಧ ಪೊಲೀಸರು ಚಾರ್ಜ್‌ಶೀಟ್ ಸಲ್ಲಿಕೆ ಮಾಡಿದ್ದರೂ ಜಾಮೀನು ಪಡೆಯದೇ ತಿರುಗಾಡುತ್ತಿದ್ದ ತಿಮರೋಡಿಗೆ ಬೆಳ್ತಂಗಡಿ ನ್ಯಾಯಾಲಯ ವಾರೆಂಟ್ ಜಾರಿಗೊಳಿಸಿತ್ತು. ಹೀಗಾಗಿ ಇಂದು ಬೆಳ್ತಂಗಡಿ ನ್ಯಾಯಾಲಯಕ್ಕೆ ಹಾಜರಾಗಿ ವಾರೆಂಟ್ ರೀಕಾಲ್ ಮಾಡಿ, ತೆರಳಿದ್ದಾರೆ. ಸೆ.18ರಂದು ತಿಮರೋಡಿಯನ್ನು ರಾಯಚೂರಿಗೆ ಗಡಿಪಾರು ಮಾಡಿ, ಪುತ್ತೂರು ಎಸಿ ಸ್ಟೆಲ್ಲಾ ವರ್ಗೀಸ್ ಆದೇಶಿಸಿದ್ದರು. 2025ರ ಸೆ.18ರಿಂದ 2026ರ ಸೆ.17ರವರೆಗೆ ಒಂದು ವರ್ಷದ ಅವಧಿಗೆ ಗಡಿಪಾರು ಮಾಡಿ ಆದೇಶಿಸಿದ್ದರು. ಆದರೆ ಅದಾದ ಬಳಿಕ ಗಡಿಪಾರು ಆದೇಶ ರದ್ದು ಕೋರಿ ಕರ್ನಾಟಕ ಹೈಕೋರ್ಟ್ ತಿಮರೋಡಿ ಅರ್ಜಿ ಸಲ್ಲಿಸಿದ್ದರು. ಅದರಂತೆ ವಿಚಾರಣೆ ನಡೆಸಿದ ಕೋರ್ಟ್ ಗಡಿಪಾರು ಆದೇಶಕ್ಕೆ ಮಧ್ಯಂತರ ತಡೆ ನೀಡಿತ್ತು.



### ಕುರ್ಚಿಗಾಗಿ ಪೈಪೋಟಿ; ಆಡಳಿತದ ಮೇಲೂ ಪರಿಣಾಮ: ಬಿವೈವಿ

• **ಉದಯವಾಹಿನಿ, ಸುಬ್ರಹ್ಮಣ್ಯ**

ಕಳೆದ ತಿಂಗಳಿನಿಂದ ಆಡಳಿತ ಪಕ್ಷದಲ್ಲಿ ಮುಖ್ಯಮಂತ್ರಿ ಕುರ್ಚಿಗಾಗಿ ಬಹಿರಂಗವಾಗಿ ಪೈಪೋಟಿ ನಡೆಯುತ್ತಿದೆ. ಡಿ.ಕೆ.ಶಿವಕುಮಾರ್ ಸೇರಿ ಏಳೆಂಟು ಹಿರಿಯ ಸಚಿವರು ಮುಖ್ಯಮಂತ್ರಿಯಾಗಲು ಆಸೆ ವ್ಯಕ್ತಪಡಿಸುತ್ತಿದ್ದಾರೆ. ಇದರ ಪರಿಣಾಮ ಆಡಳಿತದ ಮೇಲೂ ಬೀಳುತ್ತಿದೆ ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.

ಇಲ್ಲಿನ ಕುಕ್ಕೆ ಸುಬ್ರಹ್ಮಣ್ಯ ದೇವಾಲಯಕ್ಕೆ ಭೇಟಿ ನೀಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನವೆಂಬರ್ ಕ್ರಾಂತಿ ಎಂದು ಬಿಜೆಪಿಯವರು ಹೇಳಿಲ್ಲ, ಆಡಳಿತ ಪಕ್ಷದ ಸಚಿವರೇ ಹೇಳಿದ್ದು ಎಂದ ಅವರು ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳು ನಡೆಯದೆ ರೈತರು ಪರದಾಡುತ್ತಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ನಾಡಿನ ಜನರ ಪಾಲಿಗೆ ಶಾಪವಾಗಿದೆ ಎಂದರು. ಬೆಂಗಳೂರು ಮಹಾನಗರ ಪಾಲಿಕೆ ಚುನಾವಣೆಗೆ ಪೂರ್ವ ತಯಾರಿ ಪ್ರಾರಂಭವಾಗಿದೆ. ಸ್ಥಳೀಯ ಸಂಸ್ಥೆಗಳ ಚುನಾವಣೆಯ ತಯಾರಿಯನ್ನು ಸದ್ಯದಲ್ಲೇ ಆರಂಭಿಸಲಿದ್ದೇವೆ. ಮುಂದಿನ ಚುನಾವಣೆ ಎದುರಿಸಲು ಬಿಜೆಪಿ ಸಿದ್ಧವಾಗಿದೆ. ಮುಂದಿನ ತಿಂಗಳಲ್ಲಿ ರಾಜ್ಯ ಸರ್ಕಾರದ ವಿರುದ್ಧ ಅಂದೋಲನ ನಡೆಸುವ ಬಗ್ಗೆ ರೂಪುರೇಷೆ ಮಾಡುತ್ತಿದ್ದೇವೆ ಎಂದರು.



---

# ಖಾಸಗಿ ಬಸ್ ನಿಲ್ದಾಣ; ದುರ್ವಾಸನೆಗೆ ಜನ ಹೈರಾಣ

ತರಕಾರಿ ಮಾರುಕಟ್ಟೆಯಲ್ಲಿ ಕಸ ಸುರಿಯುತ್ತಿರುವ ವರ್ತಕರು, ಮೂಗು ಮುಚ್ಚಿ ಓಡಾಡುವ ಪ್ರಯಾಣಿಕರು

• **ಉದಯವಾಹಿನಿ, ಚಿತ್ರದುರ್ಗ**

ನಗರದ ಮೆದೇಹಳ್ಳಿ ರಸ್ತೆಯಲ್ಲಿರುವ ಖಾಸಗಿ ಬಸ್‌ನಿಲ್ದಾಣದ ಆವರಣದ ಸ್ಥಿತಿ ಸಾಕ್ಷಾತ್ ಕಸದ ತೊಟ್ಟಿಯಂತಾಗಿದ್ದು, ಸಾರ್ವಜನಿಕರು ಮೂಗು ಮುಚ್ಚಿಕೊಂಡು ನಿಲ್ದಾಣ ಪ್ರವೇಶಿಸಬೇಕಾದ ಪರಿಸ್ಥಿತಿ ಉಂಟಾಗಿದೆ. ಜಿಲ್ಲೆಯ ವಿವಿಧ ಭಾಗಗಳಿಗೆ ಖಾಸಗಿ ಬಸ್‌ಗಳು ಸಂಪರ್ಕ ಸೇತುವೆಯಾಗಿವೆ. ಬಹುತೇಕ ಹಳ್ಳಿಗಳಿಗೆ ಕೆಎಸ್‌ಆರ್‌ಟಿಸಿ ಬಸ್ ಸಂಪರ್ಕ ಇಲ್ಲ. ಗಡಿ ಪ್ರದೇಶ, ಕಾಡಂಚಿನ ಹಳ್ಳಿಗಳಿಗೆ ಜನರು ಖಾಸಗಿ ಬಸ್‌ಗಳನ್ನೇ ಅವಲಂಬಿಸಿದ್ದಾರೆ. ನಿಲ್ದಾಣದಿಂದ 200ಕ್ಕೂ ಹೆಚ್ಚು ಬಸ್ ಗ್ರಾಮೀಣ ಭಾಗದ ವಿವಿಧ ಮಾರ್ಗಗಳಿಗೆ ಸೇವೆ ನೀಡುತ್ತವೆ. ಖಾಸಗಿ ಬಸ್ ನಿಲ್ದಾಣ ತರಕಾರಿ ಮಾರುಕಟ್ಟೆಗೆ ಹೊಂದಿಕೊಂಡಂತಿದ್ದು ತರಕಾರಿ, ಅಂಗಡಿ, ಮಳಿಗೆಗಳ ತ್ಯಾಜ್ಯ ನಿಲ್ದಾಣ ಸೇರುತ್ತಿದೆ. ಈ ಬಗ್ಗೆ ಪ್ರಯಾಣಿಕರು, ಖಾಸಗಿ ಬಸ್ ಮಾಲೀಕರು, ಚಾಲಕರು ನಗರಸಭೆ ಅಧಿಕಾರಿಗಳಿಗೆ ಹಲವು ಬಾರಿ ದೂರು ಕೊಟ್ಟಿದ್ದಾರೆ. ಆದರೆ, ತ್ಯಾಜ್ಯವು ಬಸ್ ನಿಲ್ದಾಣದ ಅಂಗಳ ಸೇರದಂತೆ ತಡೆಯುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಈವರೆಗೂ ಸಾಧ್ಯವಾಗಿಲ್ಲ.

ಮೂಲ ಸೌಲಭ್ಯಗಳೇ ಇಲ್ಲದ ನಿಲ್ದಾಣದಲ್ಲಿ ಪ್ರಯಾಣಿಕರು ಸಮಸ್ಯೆ ಅನುಭವಿಸುತ್ತಿದ್ದಾರೆ. ತ್ಯಾಜ್ಯದ ಸಮಸ್ಯೆ ಮಿತಿ ಮೀರಿದೆ. ಮಳೆ ಬಂದಾಗ ತರಕಾರಿ ಮಾರುಕಟ್ಟೆ ಕಡೆಯಿಂದ ಹರಿದು ಬರುವ ಕೊಳಚೆ ನೀರು ಖಾಸಗಿ ಬಸ್ ನಿಲ್ದಾಣದತ್ತ ನುಗ್ಗುತ್ತದೆ. ರಾತ್ರಿ 9 ಗಂಟೆಯ ನಂತರ ನಿಲ್ದಾಣದಲ್ಲಿ ಬಸ್ ಸೇವೆ ಸ್ಥಗಿತಗೊಳ್ಳುತ್ತದೆ. ಇದೇ ಸಂದರ್ಭವನ್ನು ನೋಡಿಕೊಳ್ಳುವ ಕೆಲ ತರಕಾರಿ ವ್ಯಾಪಾರಿಗಳು, ಅಂಗಡಿ ಮಾಲೀಕರು ಕಸ ತಂದು ಸುರಿಯುತ್ತಾರೆ.

ಬೆಳಿಗ್ಗೆ ಬಸ್‌ಗಳು ನಿಲ್ದಾಣದ ಅಂಗಳಕ್ಕೆ ಬಂದಾಗ ಇಡೀ ಆವರಣ ಕಸದ ರಾಶಿಯಿಂದ ತುಂಬಿ ಹೋಗಿರುತ್ತದೆ. ನಗರಸಭಾ ಸಿಬ್ಬಂದಿ ಸ್ವಚ್ಛತೆಗೆ ಆದ್ಯತೆ ನೀಡದ ಕಾರಣ ಕೊಳಚೆ, ಕಸದ ನಡುವೆಯೇ ಬಸ್‌ಗಳು ಓಡಾಡುತ್ತಿವೆ. ತಮ್ಮ ಊರುಗಳಿಗೆ ತೆರಳಲು ಬರುವ ಮಕ್ಕಳು, ಮಹಿಳೆಯರು, ವಿದ್ಯಾರ್ಥಿಗಳು ದುರ್ವಾಸನೆ ನಡುವೆಯೇ ಬಸ್‌ಗಾಗಿ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ.

**ಕಸ ಸಂಗ್ರಹ ತಾಣ:** ನಗರಸಭಾ ಕಸ ಸಂಗ್ರಹ ಸಿಬ್ಬಂದಿ ನಿಲ್ದಾಣವನ್ನು ತ್ಯಾಜ್ಯ ಸುರಿಯುವ ಜಾಗ ಮಾಡಿಕೊಂಡಿದ್ದಾರೆ. ವಿವಿಧ ಬಡಾವಣೆಗಳಿಂದ ಕಸ ತೆಗೆದುಕೊಂಡು ಬರುವ ಸಿಬ್ಬಂದಿ ಖಾಸಗಿ ಬಸ್ ನಿಲ್ದಾಣದ ಬದಿಯಲ್ಲೇ ಅದನ್ನು ಇಡುತ್ತಾರೆ. 2–3 ದಿನಗಳವರೆಗೂ ಅದು ನಿಲ್ದಾಣದಲ್ಲೇ ಇರುತ್ತದೆ. ಹೀಗಾಗಿ ಇಡೀ ಬಸ್ ನಿಲ್ದಾಣದ ಆವರಣ ದುರ್ವಾಸನೆಯಿಂದ ಕೂಡಿರುತ್ತದೆ. ಹೊರಗಿನಿಂದ ತಂದ ಕಸವನ್ನು ನಿಲ್ದಾಣದ ಸಮೀಪ ಸಂಗ್ರಹಿಸಿಡಬೇಡಿ ಎಂದು ಹಲವು ಬಾರಿ ನಗರಸಭೆ ಅಧಿಕಾರಿಗಳಿಗೆ, ಸಿಬ್ಬಂದಿಗೆ ಮನವಿ ಮಾಡಿದ್ದೇವೆ. ಅವರು ನಮ್ಮ ಮನವಿಗೆ ಸ್ಪಂದಿಸುತ್ತಿಲ್ಲ. ಇದರಿಂದಾಗಿ ಪ್ರಯಾಣಿಕರು, ಚಾಲಕರು, ನಿರ್ವಾಹಕರು ನರಕಯಾತನೆ ಅನುಭವಿಸಬೇಕಾಗಿದೆ' ಎಂದು ಬಸ್ ಚಾಲಕರೊಬ್ಬರು ಬೇಸರ ವ್ಯಕ್ತಪಡಿಸಿದರು.

ತ್ಯಾಜ್ಯದ ಸಮಸ್ಯೆ ಮಿತಿ ಮೀರಿದೆ


ಉದಯವಾಹಿನಿ ಚಿತ್ರ

**'ಒಂದು ಕಡೆ ಕಸದ ವಾಸನೆ, ಇನ್ನೊಂದೆಡೆ ಗೋಡೆ ಬದಿಯ ಶೌಚದಿಂದಾಗಿ ದುರ್ವಾಸನೆ ಬೀರುತ್ತಿದೆ. ಕೆಲವು ಸಂದರ್ಭಗಳಲ್ಲಿ ಬಸ್‌ಗಳು ಅರ್ಧಗಂಟೆಯಿಂದ 1 ಗಂಟೆ ನಿಲ್ದಾಣದಲ್ಲೇ ನಿಲ್ಲುತ್ತವೆ. ಆಗ ದುರ್ನಾತ ಸಹಿಸಿಕೊಂಡೇ ಕುಳಿತುಕೊಳ್ಳಬೇಕಾದ ಸ್ಥಿತಿ ಎದುರಾಗುತ್ತದೆ. ಇದರಿಂದ ತಲೆನೋವು, ಕೆಮ್ಮು ಸೇರಿದಂತೆ ಹಲವು ರೋಗಗಳು ಕಾಡುತ್ತಿವೆ' ಎಂದು ಪ್ರಯಾಣಿಕರೊಬ್ಬರು ಹೇಳಿದರು.**

### ಮಾಲೀಕರು ಚಾಲಕರ ಸಂಘದಿಂದ ಸ್ವಚ್ಛತೆ

**ಖಾಸಗಿ ಬಸ್ ಮಾಲೀಕರು ಹಾಗೂ ಚಾಲಕರ ಸಂಘದಿಂದ ಬಸ್ ನಿಲ್ದಾಣದ ಆವರಣವನ್ನು ಸ್ವಚ್ಛಗೊಳಿಸಲಾಗುತ್ತದೆ. ಫ್ಲಾಟ್‌ಫಾರಂ ಸುತ್ತಮುತ್ತಲಿನ ಜಾಗದಲ್ಲಿ ಕಸ ಗುಡಿಸಲಾಗುತ್ತದೆ. ಆದರೆ, ನಿಲ್ದಾಣದ ಸುತ್ತಲಿನ ಪ್ರದೇಶದಲ್ಲಿ ಕಸ ಸುರಿಯುವುದನ್ನು ತಡೆಯಲು ಸಾಧ್ಯವಾಗಿಲ್ಲ. ನಿಲ್ದಾಣದ ಆವರಣದಲ್ಲಿ 2 ಶೌಚಾಲಯಗಳಿವೆ. ಅಲ್ಲಿಗೆ ನೀರು ಪೂರೈಕೆ ಇಲ್ಲದ ಕಾರಣ ಪ್ರಯಾಣಿಕರು ಗೋಡೆ ಬದಿಯಲ್ಲೇ ಶೌಚ ಮಾಡುತ್ತಿದ್ದು, ಇದೂ ದುರ್ವಾಸನೆ ಹೆಚ್ಚಾಗಲು ಕಾರಣವಾಗಿದೆ. ಸಮೀಪದಲ್ಲೇ ನಗರಸಭೆಯಿಂದ ಗುತ್ತಿಗೆ ಪಡೆದಿರುವವರು ಶೌಚಾಲಯ ನಿರ್ಮಿಸಿದ್ದು, ಶೌಚಕ್ಕೆ 10 ಪಡೆಯುತ್ತಾರೆ. ಹೀಗಾಗಿ ಪ್ರಯಾಣಿಕರು ಅಲ್ಲಿಗೂ ಹೋಗುವುದಿಲ್ಲ. ಹೊರಗೇ ಶೌಚ ಮಾಡುವುದರಿಂದ ಇಡೀ ಆವರಣದಲ್ಲಿ ನಿಲ್ಲಲು ಸಾಧ್ಯವಾಗುತ್ತಿಲ್ಲ.**

## ದಿನ ಭವಿಷ್ಯ

| ರಾಹುಕಾಲ | ಮಧ್ಯಾಹ್ನ | 03:00 ರಿಂದ 04:30 |
| --- | --- | --- |
| ಗುಳಿಕ ಕಾಲ | ಬೆಳಿಗ್ಗೆ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ** ಆರೋಗ್ಯದ ಬಗ್ಗೆ ಸ್ವಲ್ಪ ಗಮನ ನೀಡಬೇಕು. ಯಾವುದೇ ಅನುಭವದ ವ್ಯಕ್ತಿಯ ಸಲಹೆ ಇಲ್ಲದೆ, ನಿಮಗೆ ಆರ್ಥಿಕ ನಷ್ಟವಾಗುವ ಯಾವುದೇ ಕೆಲಸವನ್ನು ಮಾಡಬೇಡಿ. ಒಂದು ಅಂಚೆಯ ಮೂಲಕ ಬಂದ ಪತ್ರ ಇಡೀ ಕುಟುಂಬಕ್ಕೆ ಸಂತೋಷದ ಸುದ್ದಿ ತರುತ್ತದೆ. ಮನ್ಮಥನ ಬಾಣದಿಂದ ತಪ್ಪಿಸಿಕೊಳ್ಳುವ ಅವಕಾಶ ಕಡಿಮೆಯಿದೆ.

**ವೃಷಭ** ನಿಮ್ಮ ಆರೋಗ್ಯದ ಬಗ್ಗೆ ಚಿಂತಿಸುವುದು ನಿಮ್ಮ ಕಾಯಿಲೆಯನ್ನು ಇನ್ನಷ್ಟು ಉಲ್ಬಣಿಸಬಹುದಾದ್ದರಿಂದ ಹಾಗೆ ಮಾಡಬೇಡಿ. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ಸಂಬಂಧಗಳೊಂದಿಗಿನ ಸಂಬಂಧಗಳು, ಬಂಧಗಳ ನವೀಕರಣದ ಒಂದು ದಿನ.

**ಮಿಥುನ** ಕುಟುಂಬದ ವೈದ್ಯಕೀಯ ವೆಚ್ಚದಲ್ಲಿ ಹೆಚ್ಚಳವನ್ನು ತಳ್ಳಿಹಾಕಲು ಸಾಧ್ಯವಿಲ್ಲ. ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ. ನೀವು ಇತರರ ಅಗತ್ಯಗಳಿಗೆ ಗಮನ ನೀಡಬೇಕಾದರೂ ಮಕ್ಕಳೊಂದಿಗೆ ಅತೀ ಉದಾರತೆ ತೋರಿಸುವುದು ತೊಂದರೆಗೆ ಕಾರಣವಾಗುತ್ತದೆ.

**ಕರ್ಕಾಟಕ** ನಿಮ್ಮ ಹಠಮಾರಿ ಧೋರಣೆ ಕೇವಲ ಸಮಯ ವ್ಯರ್ಥವಾದದ್ದರಿಂದ ಆದನ್ನು ನಿಮ್ಮ ಸಂತೋಷದ ಜೀವನದ ಸಲುವಾಗಿ ತೊರೆದುಬಿಡಿ. ನೀವು ಪ್ರಯಾಣ ಮಾಡುವ ಮತ್ತು ಹಣ ಖರ್ಚು ಮಾಡುವ ಮನಸ್ಥಿತಿಯಲ್ಲಿರುತ್ತೀರಿ. ಅದರೆ ಹಾಗೆ ಮಾಡಿದಲ್ಲಿ ನೀವು ವಿಷಾದಿಸುತ್ತೀರಿ.

**ಸಿಂಹ** ಗಾಳಿಯಲ್ಲಿ ಮನೆ ಕಟ್ಟುವಲ್ಲಿ ನಿಮ್ಮ ಸಮಯ ವ್ಯರ್ಥ ಮಾಡಬೇಡಿ. ಬದಲಿಗೆ ಏನಾದರೂ ಅರ್ಥಪೂರ್ಣವಾದದ್ದನ್ನು ಮಾಡಲು ನಿಮ್ಮ ಶಕ್ತಿ ವ್ಯಯಿಸಿ. ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ, ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ.

**ಕನ್ಯಾ** ನಿಮ್ಮ ಶೀಘ್ರ ಕ್ರಮ ನಿಮ್ಮನ್ನು ಪ್ರೇರೇಪಿಸುತ್ತದೆ. ಯಶಸ್ಸು ಸಾಧಿಸಲು-ಸಮಯದ ಜೊತೆ ನಿಮ್ಮ ಆಲೋಚನೆಗಳನ್ನು ಬದಲಾಯಿಸಿಕೊಳ್ಳಿ-ಇದು ನಿಮ್ಮ ದೃಷ್ಟಿಯನ್ನು ವಿಸ್ತಾರಗೊಳಿಸುತ್ತದೆ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುತ್ತದೆ- ನಿಮ್ಮ ವ್ಯಕ್ತಿತ್ವವನ್ನು ಸುಧಾರಿಸುತ್ತದೆ ಮತ್ತು ನಿಮ್ಮ ಮನಸ್ಸನ್ನು ಪಕ್ವಗೊಳಿಸುತ್ತದೆ.

**ತುಲಾ** ನಿಮ್ಮ ಕೆಟ್ಟ ಚಟಗಳು ನಿಮ್ಮನ್ನು ನಾಶಗೊಳಿಸುತ್ತವೆ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ಬಿಕ್ಕಟ್ಟಿನ ಸಮಯದಲ್ಲಿ ನಿಮಗೆ ಸಹಾಯ ಮಾಡಿದ ಸಂಬಂಧಿಗಳಿಗೆ ನಿಮ್ಮ ಕೃತಜ್ಞತೆಯನ್ನು ವ್ಯಕ್ತಪಡಿಸಿ.

**ವೃಶ್ಚಿಕ** ನಿರಾಶಾದಾಯಕ ಮನೋಭಾವವು ಕೇವಲ ನಿಮ್ಮ ಅವಕಾಶಗಳನ್ನು ಸೀಮಿತಗೊಳಿಸುವುದಷ್ಟೇ ಅಲ್ಲದೇ ದೇಹದ ಸಾಮರಸ್ಯವನ್ನೂ ಭಂಗಪಡಿಸುವುದರಿಂದ ಅವುಗಳನ್ನು ತಡೆಯಬೇಕು. ಯಾರ ಹತ್ತಿರವಾದರು ಸಾಲವನ್ನು ತೆಗೆದುಕೊಂಡಿರುವ ಜನರು, ಇಂದು ಯಾವುದೇ ಪರಿಸ್ಥಿತಿಯಲ್ಲೂ ಸಾಲವನ್ನು ಮರುಪಾವತಿಸಬೇಕಾಗುತ್ತದೆ.

**ಧನಸ್ಸು** ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ಆಪ್ತ ಸ್ನೇಹಿತನ ಸಹಾಯದಿಂದ ಇಂದು ಕೆಲವು ವ್ಯಾಪಾರಿಗಳಿಗೆ ಹಣದ ಲಾಭವಾಗುವ ಸಾಧ್ಯತೆ ಇದೆ. ಈ ಹಣ ನಿಮ್ಮ ಅನೇಕ ಸಮಸೆಗಳನ್ನು ದೂರ ಮಾಡಬಹುದು.

**ಮಕರ** ಜೀವನದಲ್ಲಿ ಒತ್ತಡದ ಮನೋಭಾವವನ್ನು ತಪ್ಪಿಸಿ ಇಂದು ಮಾಡಿದ ಹೂಡಿಕೆ ನಿಮ್ಮ ಅಭ್ಯುದಯ ಮತ್ತು ಆರ್ಥಿಕ ಭದ್ರತೆಯನ್ನು ಹೆಚ್ಚಿಸುತ್ತದೆ. ಅತಿಥಿಗಳು ನಿಮ್ಮ ಮನೆಯನ್ನು ಒಂದು ಆಹ್ಲಾದಕರ ಮತ್ತು ಅದ್ಭುತ ಸಂಜೆಗಾಗಿ ಬಳಸಿಕೊಳ್ಳುತ್ತಾರೆ. ಪ್ರೀತಿಯಲ್ಲಿ ಬೀಳುವುದು ಇಂದು ನಿಮಗೆ ಕೆಟ್ಟದಾಗಿರಬಹುದು.

**ಕುಂಭ** ಪತ್ನಿ ನೀವು ಹುರಿದುಂಬಿಸಬಹುದು. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ. ನಿಮ್ಮ ಸಂಗಾತಿಯ ಸಂಗದಲ್ಲಿ- ಆರಾಮ ಮತ್ತು ಪ್ರೀತಿಯನ್ನು ಪಡೆಯಿರಿ. ನೀವು ಮೊದಲ ನೋಟದಲ್ಲೇ ಪ್ರೀತಿಯಲ್ಲಿ ಬೀಳಬಹುದು.

**ಮೀನ** ಸ್ನೇಹಿತರು, ಕುಟುಂಬ ಸದಸ್ಯರೊಂದಿಗಿನ ಸಂತಸದ ಪ್ರಯಾಣ ನಿಮಗೆ ಸಮಾಧಾನ ನೀಡುತ್ತದೆ. ಸಹೋದರರ ಸಹಾಯದಿಂದ ನೀವು ಅರ್ಹಿಕವಾಗಿ ಲಾಭವನ್ನು ಪಡೆಯಬಹುದು. ನಿಮ್ಮ ಸಹೋದರ ಸಹೋದರಿಯರ ಸಲಹೆ ತೆಗೆದುಕೊಳ್ಳಿ ಮನೆಯಲ್ಲಿನ ಹಬ್ಬದ ವಾತಾವರಣ ಉದ್ವೇಗವನ್ನು ಶಮನಗೊಳಿಸುತ್ತದೆ.

---

**ಕುಷ್ಟರೋಗಕ್ಕೆ ನಿಗದಿತ ಚಿಕಿತ್ಸೆ ಇದೆ ಭಯಪಡುವ ಅಗತ್ಯ ಇಲ್ಲ: ಡಾ. ಜೆ.ಪಿ.ರೇಣುಪ್ರಸಾದ್ ಜಿಲ್ಲಾ ಆರೋಗ್ಯ, ಕುಟುಂಬ ಕಲ್ಯಾಣ ಅಧಿಕಾರಿ**

# ಕುಷ್ಟರೋಗವು ಶಾಪದಿಂದ ಪಾಪದಿಂದ ಬರುವ ರೋಗವಲ್ಲ

• ಉದಯವಾಹಿನಿ, ಚಿತ್ರದುರ್ಗ

ಕುಷ್ಟರೋಗವು ಶಾಪದಿಂದ ಪಾಪದಿಂದ ಬರುವ ರೋಗವಲ್ಲ. ಮೈಕೋ ಬ್ಯಾಕ್ಟೀರಿಯಮ್ ಲೆಪ್ರೇ ಎಂಬ ಸೂಕ್ಷ್ಮಾಣು ಜೀವಿ ಬ್ಯಾಕ್ಟೀರಿಯಾದಿಂದ ನಿಧಾನವಾಗಿ ಬರುವ ಒಂದು ಸಾಂಕ್ರಾಮಿಕ ರೋಗ. ಈ ರೋಗಕ್ಕೆ ನಿಗದಿತ ಚಿಕಿತ್ಸೆ ಇದೆ ಭಯಪಡುವ ಅಗತ್ಯ ಇಲ್ಲ ಎಂದು ಡಾಕ್ಟರ್ ಜೆ.ಪಿ.ರೇಣುಪ್ರಸಾದ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಹೇಳಿದರು.

**ಒಂದು ಸಾಂಕ್ರಾಮಿಕ ರೋಗ**

ಚಿತ್ರದುರ್ಗ ಬುದ್ದನಗರ ಆರೋಗ್ಯ ಕೇಂದ್ರ ಆವರಣದಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನ ಕಾರ್ಯಕ್ರಮದಡಿ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಕುಷ್ಟರೋಗ ವಿಭಾಗ ತಾಲ್ಲೂಕ ಆರೋಗ್ಯ ಅಧಿಕಾರಿಗಳ ಕಚೇರಿ ವತಿಯಿಂದ ಕುಷ್ಟ ರೋಗ ಪತ್ತೆ ಹಚ್ಚುವ ಅಭಿಯಾನದಲ್ಲಿ ಪಾಲ್ಗೊಂಡು ಹಸಿರು ನಿಶಾನೆ ತೋರಿಸುವ ಮುಖಾಂತರ ಜಾತಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ದೇಹದ ಯಾವುದೇ ಭಾಗದಲ್ಲಿ ಚರ್ಮದ ಮೇಲೆ ತಿಳಿ ಬಿಳಿ ಅಥವಾ ತಾಮ್ರ ವರ್ಣದ ಸ್ಪರ್ಶಜ್ಞಾನವಿಲ್ಲದ ಮಚ್ಚೆಗಳು, ಮಚ್ಚೆಗಳ ಮೇಲೆ ತಂಪು ಬಿಸಿಯ ಅನುಭವ ಇರುವುದಿಲ್ಲ, ಕೈಕಾಲುಗಳಲ್ಲಿ ಜೋಮು, ಮುಖದ ಮೇಲೆ ಎಣ್ಣೆ ಸವರಿದಂತೆ ಹೊಳಪು, ನಡೆಯುವಾಗ ಕಾಲು ಎಳೆಯುವುದು, ಕುಷ್ಟರೋಗದ ಲಕ್ಷಣಗಳಿರಬಹುದು. ಮಚ್ಚೆಗಳನ್ನು ಇಚ್ಚೆಯಿಂದ ಮುಚ್ಚಿಟ್ಟರೆ ಅಂಗವಿಕಲತೆ ಬರುವ ಸಾಧ್ಯತೆಯಿದ್ದು, ಸಾರ್ವಜನಿಕರು ಸ್ವಯಿಚ್ಚೆಯಿಂದ ಸರ್ಕಾರಿ ಆಸ್ಪತ್ರೆ ವೈದ್ಯರಲ್ಲಿ ಪರೀಕ್ಷೆಗೆ ಒಳಪಡಬೇಕು. ರೋಗ ದೃಢಪಟ್ಟರೆ ಉಚಿತವಾಗಿ ಮನೆ ಬಾಗಿಲಿಗೆ ಔಷಧಿ ಒದಗಿಸಲಾಗುವುದು ರೋಗಿಯು ಆಸ್ಪತ್ರೆಯಲ್ಲಿ ದಾಖಲಾಗುವ ಅವಶ್ಯಕತೆ ಇರುವುದಿಲ್ಲ ರೋಗಲಕ್ಷಣಗಳಿಗನುಸಾರ ಆರು ತಿಂಗಳಿಂದ ಒಂದು ವರ್ಷದೊಳಗೆ ಚಿಕಿತ್ಸೆ ಪಡೆದರೆ ಕುಷ್ಟರೋಗವನ್ನು ಸಂಪೂರ್ಣವಾಗಿ ಗುಣಪಡಿಸಬಹುದು ಬನ್ನಿ ಎಲ್ಲರೂ ಭಾರತವನ್ನು ಕುಷ್ಟರೋಗ ಮುಕ್ತ ಮಾಡಲು ಪ್ರಯತ್ನ ಮಾಡೋಣ ಎಂದರು. ಕಾರ್ಯಕ್ರಮದಲ್ಲಿ ಬುದ್ದನಗರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಸುರೇಂದ್ರ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶ್ರೀನಿವಾಸ್ ಮತ್ತು ಸಿಬ್ಬಂದಿ ವರ್ಗದವರು ಡಿ ಎನ್ ಟಿ ತಂಡದ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಚಂದ್ರಪ್ಪ. ಮಂಜುನಾಥ.ಓಂಕಾರ ಸ್ವಾಮಿ, ರಾಜೇಂದ್ರ ಪ್ರಸಾದ್, ಕಿರಣ್, ಹನುಮಂತಪ್ಪ, ಪ್ರವೀಣ್ ಕುಮಾರ್, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳು, ಆಶಾ ಕಾರ್ಯಕರ್ತರು. ವಿವಿಧ ವೃಂದದ ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು.


ಉದಯವಾಹಿನಿ ಚಿತ್ರ

**ಕೈ ಕೈ ಜೋಡಿಸಿ ಕುಷ್ಟರೋಗ ನಿವಾರಿಸಿ**

ಜಾತ ಕಾರ್ಯಕ್ರಮ ಬುದ್ದನಗರ ಆರೋಗ್ಯ ಕೇಂದ್ರ ಆವರಣದಿಂದ ಪ್ರಾರಂಭಗೊಂಡು ರಾಜೇಂದ್ರ ನಗರ ಮುಖ್ಯ ರಸ್ತೆ, ಅಂಬೇಡ್ಕರ್ ಕಲ್ಯಾಣ ಮಂಟಪದ ಮೂಲಕ ಜಟ್ಪಟ್ ನಗರ ಸರ್ಕಲ್, ತಿಪ್ಪಿನ ಘಟ್ಟಮ್ಮ ದೇವಸ್ಥಾನದ ಮಾರ್ಗವಾಗಿ, ಒಣಕೆ ಓಬವ್ವ ವೃತ್ತ ಕ್ರೀಡಾಂಗಣ ಮುಂಭಾಗದಲ್ಲಿ ಅಂತ್ಯಗೊಂಡಿತು. ಕಾರ್ಯಕ್ರಮದಲ್ಲಿ ತಾಲ್ಲೂಕ ಆರೋಗ್ಯ ಶಿಕ್ಷಣಾಧಿಕಾರಿ ಬಿ ಮೂಗಪ್ಪ ಕುಷ್ಟರೋಗ ಶಾಪವೂ ಅಲ್ಲ ಪಾಪವು ಅಲ್ಲ ಅನುವಂಶಿಯತೆಯಿಂದ ಬರುವ ರೋಗವಲ್ಲ ಚಿಕಿತ್ಸೆಗೆ ತಾತ್ಸಾರ ಮಾಡಿದರೆ ಅಂಗವಿಕಲತೆ ಬರಬಹುದು ಕೈ ಕೈ ಜೋಡಿಸಿ ಕುಷ್ಟರೋಗ ನಿವಾರಿಸಿ ಎಂಬ ಘೋಷಣೆಗಳನ್ನು ಹಾಕಿಸಿದರು.

> ಕುಷ್ಟರೋಗ ಪ್ರಕರಣ ಪತ್ತೆ ಹಚ್ಚುವ ಆಂದೋಲನ ನವಂಬರ್ 3 ರಿಂದ 19 ನವಂಬರ್ 2025ರ ವರೆಗೆ ಚಿತ್ರದುರ್ಗ ಜಿಲ್ಲೆಯ ಆಯ್ದ 179 ಗ್ರಾಮಗಳಲ್ಲಿ ಮೂರು ನಗರ ಪ್ರದೇಶ ಒಳಗೊಂಡಂತೆ 2,97, 445 ಜನಸಂಖ್ಯೆ ಮತ್ತು 67535 ಮನೆಗಳು ಸಮೀಕ್ಷೆಗೆ ಒಳಪಟ್ಟದ್ದು 14 ದಿನ ಕುಷ್ಟರೋಗ ಪ್ರಕರಣ ಪತ್ತೆ ಹಚ್ಚುವ ಅಭಿಯಾನ ನಡೆಯಲಿದೆ. 235 ತಂಡಗಳನ್ನು ರಚಿಸಿದ್ದು, ಒಂದು ತಂಡದಲ್ಲಿ ಒಬ್ಬ ಆಶಾ ಕಾರ್ಯಕರ್ತೆ ಮತ್ತು ಪುರುಷ ಸ್ವಯಂಸೇವಕರಿದ್ದು 10 ತಂಡಕ್ಕೆ ಒಬ್ಬರು ಮೇಲ್ವಿಚಾರಕರಂತೆ 23 ಜನ ಮೇಲ್ವಿಚಾರಕರನ್ನು ನಿಯೋಜಿಸಲಾಗಿದೆ. ಸಾರ್ವಜನಿಕರು ತಮ್ಮ ಮನೆಗಳಿಗೆ ಭೇಟಿ ನೀಡಿದ ಸಿಬ್ಬಂದಿಯವರಿಗೆ ಸಹಕರಿಸುವುದರ ಜೊತೆಗೆ ಕುಷ್ಟರೋಗದ ಪರೀಕ್ಷೆಗೆ ಒಳಪಡಬೇಕು.
>
> -ಡಾ. ಜಿ ಓ ನಾಗರಾಜ್, ಅನುಷ್ಠಾನಾಧಿಕಾರಿ

---

# ಜಿಲ್ಲಾಧಿಕಾರಿಗಳ ಸಭೆ ವಿಫಲ ಕಬ್ಬು ಬೆಳೆಗಾರರು ಹೋರಾಟಕ್ಕೆ ಕರೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ವಿಜಯಪುರ

ಸೋಮವಾರ ಜಿಲ್ಲಾ ಪಂಚಾಯಿತ ಸಭಾ ಭವನದಲ್ಲಿ ಜಿಲ್ಲಾಧಿಕಾರಿಗಳು ಸಂಭಂಧಿಸಿದ ಅಧಿಕಾರಿಗಳು ಹಾಗೂ ಸಕ್ಕರೆ ಕಾರ್ಖಾನೆ ಮಾಲಿಕರು ಹಾಗೂ ರೈತ ಮುಖಂಡರೊಡನೆ ಸಭೆ ಕರೆದು ಕಬ್ಬು ಬೆಳೆಗಾರರ ಸಭೆ ಕರೆಯಲಾಗಿತ್ತು ಹಲವಾರು ಬೇಡಿಕೆಸೇರಿದಂತೆ ಪ್ರತಿ ಟನ್ ಕಬ್ಬಿಗೆ 3500 ಕಟಾವು ಸಾಗಾಣೆ ಹೊರತು ಪಡೆಸಿ ಕೊಡಬೇಕೆಂದು ಪಟ್ಟು ಹಿಡಿದಾಗ ಸಭೆಯಲ್ಲಿ ಗದ್ದಲ ಸೃಷ್ಠಿಯಾಯಿತು ರೈತ ಮುಖಂಡರು ಸಭೆಯಿಂದ ಹೊರ ನಡೆದು ನಾಳೆಯಿಂದ ಅನಿರ್ಧಿಷ್ಠ ಹಾಗೂ ಅಹೋರಾತ್ರಿ ಹೋರಾಟಕ್ಕೆ ಕರೆ ನೀಡಿದರು.

ಈ ವೇಳೆ ರೈತ ಸಂಘದ ಮುಖಂಡರಾದ ರಾಹುಲ್ ಕುಬಕಡ್ಡಿ, ಕಲ್ಲು ಸೋನ್ನದ, ಸಂಗಮೇಶ ಸಗರ, ಸೋಮು ಬಿರಾದಾರ, ಸೇರಿದಂತೆ ವಿವಿಧ ಸಂಘಟನೆಯ ಮುಖಂಡರು ಸಭೆಯಲ್ಲಿ ಯಾವುದೇ ರೈತಪರ ಬೆಳವಣಿಗೆ ಕಾಣಲಿಲ್ಲ ಆದ್ದರಿಂದ ನಾಳೆಯಿಂದ ಹೋರಾಟಕ್ಕೆ ಕರೆ ಕೊಡುತ್ತಿದ್ದೇವೆ, ಈ ಹೋರಾಟವು ಜಾತ್ಯಾತೀತವಾಗಿ ಪಕ್ಷಾತೀತವಾಗಿ ಈ ನಾಡಿನ ಸಮಸ್ತ ಮಠಾಧಿಶರು, ಎಲ್ಲಾ ಕನ್ನಡಪರ, ಮಹಿಳಾಪರ, ದಲಿತಪರ, ವಿದ್ಯಾರ್ಥಿಪರ ಸೇರಿದಂತೆ ಪ್ರಗತಿಪರ ಸಂಘಟನೆ ಹಾಗೂ ಎಲ್ಲಾ ರೈತ ಸಂಘಟನೆಗಳ ಒಕ್ಕೂಟದಿಂದ ಈ ಹೋರಾಟ ಇರುತ್ತದೆ, ಎಲ್ಲಾ ಬೇಡಿಕೆಗಳು ಈಡೇರುವವರೆಗೂ ಅನಿರ್ಧಿಷ್ಠ ಹಾಗೂ ಅಹೋರಾತ್ರಿ ಹೋರಾಟ ಜರುಗಲಿದೆ ಎಂದರು.

---

# 20 ಕೆ.ಜಿ. ಗಾಂಜಾ ವಶ

• ಉದಯವಾಹಿನಿ, ಹುಬ್ಬಳ್ಳಿ

ನಗರದ ಸಿದ್ದಾರೂಢ ಸ್ವಾಮಿ ರೈಲ್ವೆ ನಿಲ್ದಾಣದ ನಾಲ್ಕನೇ ಪ್ಲಾಟ್‌ಫಾರ್ಮ್‌ನಲ್ಲಿ ಬ್ಯಾಗ್‌ನಲ್ಲಿ ಗಾಂಜಾ ಸಾಗಾಟ ಮಾಡುತ್ತಿದ್ದ ಒಡಿಶಾದ ಕೈಲಾಸಚಂದ್ರ ಬೆಹರಾ ಎಂಬುವವರನ್ನು ಬಂಧಿಸಿರುವ ರೈಲ್ವೆ ಪೊಲೀಸರು, 2.10 ಲಕ್ಷ ಮೌಲ್ಯದ 20 ಕೆ.ಜಿ. ಗಾಂಜಾ ವಶಪಡಿಸಿಕೊಂಡಿದ್ದಾರೆ. ಇನ್‌ಸ್ಪೆಕ್ಟರ್ ಸುರೇಶ ಕುಂಬಾರ ಮಾರ್ಗದರ್ಶನದಲ್ಲಿ ಪಿಎಸ್‌ಐ ಸತ್ಯಪ್ಪ ಮುಕ್ಕಣ್ಣವರ ನೇತೃತ್ವದ ತಂಡ ದಾಳಿ ನಡೆಸಿತ್ತು. ಹುಬ್ಬಳ್ಳಿ ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಮದ್ಯ ಅಕ್ರಮ ಸಾಗಾಟ:** ಕಾರಿನಲ್ಲಿ ಅಕ್ರಮವಾಗಿ ಮದ್ಯ ಸಾಗಾಟ ಮಾಡುತ್ತಿದ್ದು. ಅರಳಿಕಟ್ಟಿ ಗ್ರಾಮದ ಗುರುರಾಜ ಎಸ್. ಅವರನ್ನು ವಶಕ್ಕೆ ಪಡೆದಿರುವ ಅಬಕಾರಿ ಇಲಾಖೆ ಅಧಿಕಾರಿಗಳು, 1.73 ಲಕ್ಷ ಮೌಲ್ಯದ ಮದ್ಯ ವಶಪಡಿಸಿಕೊಂಡಿದ್ದಾರೆ. ಪ್ರಕರಣ ದಾಖಲಾಗಿದೆ. ಆರೋಪಿ ಗುರುರಾಜ ಪರವಾನಗಿ ಪಡೆಯದೇ ತಾಲ್ಲೂಕಿನ ವರೂರು ಗ್ರಾಮದ ಬಳಿ ಮದ್ಯ ಸಾಗಾಟ ಮಾಡುತ್ತಿದ್ದರು. 17.280 ಲೀಟರ್ ಮದ್ಯ, 37.200 ಲೀಟರ್ ಬೀಯರ್ ಅನ್ನು ವಶಪಡಿಸಿಕೊಳ್ಳಲಾಗಿದೆ. ಅಬಕಾರಿ ಇಲಾಖೆಯ ಅಧಿಕಾರಿ ಐ.ಡಿ. ಕಿತ್ತೂರ, ಸಿಬ್ಬಂದಿ ಕೆ.ಎನ್. ಕಮ್ಮಾರ, ಎಸ್.ಐ. ಬುಳಿ, ಶೇಖರ ಜ್ಯೋತಿ ದಾಳಿಯಲ್ಲಿ ಪಾಲ್ಗೊಂಡಿದ್ದರು.

**ಚಿನ್ನಾಭರಣ ಕಳವು:** ಹುಬ್ಬಳ್ಳಿ ತಾಲ್ಲೂಕಿನ ಕೋಳಿವಾಡ ಗ್ರಾಮದ ಮಂಜುನಾಥ ಸಣಕಲ್ ಅವರ ಮನೆ ಬಾಗಿಲಿನ ಬೀಗ ಮುರಿದು, 6.20 ಲಕ್ಷ ಮೌಲ್ಯದ ಚಿನ್ನಾಭರಣ ಕಳವು ಮಾಡಲಾಗಿದೆ. ಹುಬ್ಬಳ್ಳಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

---

# ಆರ್‌ಎಸ್‌ಎಸ್ ನಿಷೇಧಕ್ಕೆ ಆಗ್ರಹ

• ಉದಯವಾಹಿನಿ, ಹುಬ್ಬಳ್ಳಿ


ಉದಯವಾಹಿನಿ ಚಿತ್ರ

ರಾಷ್ಟ್ರೀಯ ಸ್ವಯಂ ಸೇವಕ ಸಂಘ ನಿಷೇಧಿಸಿ ರಾಷ್ಟ್ರವನ್ನು ರಕ್ಷಣೆ ಮಾಡಬೇಕು ಎಂದು ಆಗ್ರಹಿಸಿ ರಾಷ್ಟ್ರೀಯ ಅಹಿಂದ್ ಸಂಘಟನೆ ಸದಸ್ಯರು ನಗರದಲ್ಲಿ ಅರೆಬೆತ್ತಲೆ ಪ್ರತಿಭಟನೆ ನಡೆಸಿದರು. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಸೇರಿದ ಪ್ರತಿಭಟನಕಾರರು, ಸಂವಿಧಾನ ವಿರೋಧಿ ಆರ್‌ಎಸ್‌ಎಸ್ ಎಂದು ಘೋಷಣೆ ಕೂಗಿದರು. ಮನುಸ್ಮೃತಿ, ಮನುವಾದ ನಮಗೆ ಬೇಡ, ಅದಕ್ಕೆ ಧಿಕ್ಕಾರ ಎನ್ನುವ ಬರಹದ ಬ್ಯಾನರ್ ಸುಟ್ಟು ಆಕ್ರೋಶ ವ್ಯಕ್ತಪಡಿಸಿದರು. ಅರೆಬೆತ್ತಲೆ ಮೆರವಣಿಗೆ ಮೂಲಕ ಚನ್ನಮ್ಮ ವೃತ್ತದವರೆಗೆ ತೆರಳಲು ಮುಂದಾದ ಅವರನ್ನು, ಪೊಲೀಸರು ಪ್ರಧಾನ ಅಂಚೆಕಚೇರಿ ಎದುರಿಗೆ ಬ್ಯಾರಿಕೇಡ್ ಹಾಕಿ ತಡೆದು, ವಶಕ್ಕೆ ಪಡೆದರು. ಹಳೇ ಸಿಎಆರ್ ಮೈದಾನಕ್ಕೆ ಕರೆದೊಯ್ದು, ಕೆಲ ಸಮಯದ ನಂತರ ಬಿಡುಗಡೆ ಮಾಡಿದರು.

ಇದಕ್ಕೂ ಪೂರ್ವ ಮಾತನಾಡಿದ ಸಂಘಟನೆಯ ರಾಜ್ಯ ಅಧ್ಯಕ್ಷ ಮುತ್ತಣ್ಣ ಶಿವಳ್ಳಿ, ಜಾತ್ಯತೀತ ರಾಷ್ಟ್ರ ಭಾರತದಲ್ಲಿ ಮನುವಾದಿ ಮನಸ್ಥಿತಿಗಳ ಸಂಖ್ಯೆ ಹೆಚ್ಚುತ್ತಿದ್ದು, ಸಂವಿಧಾನದ ಆಶಯಕ್ಕೆ ಧಕ್ಕೆ ತರುತ್ತಿದ್ದಾರೆ. ಕಲಬುರಗಿಯ ಚಿತ್ತಾಪುರದಲ್ಲಿ ಭೀಮ್ ಆರ್ಮಿ ಸಂಘಟನೆ ಪಥಸಂಚಲನ ಹಮ್ಮಿಕೊಂಡಿದ್ದು, ಕೆಲವರಿಂದ ವಿರೋಧ ವ್ಯಕ್ತವಾಗುತ್ತಿದೆ. ಆರ್‌ಎಸ್‌ಎಸ್ ಕುರಿತು ಕೆಲವು ಪ್ರಶ್ನೆಗಳನ್ನು ಎತ್ತಿರುವ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಜೀವ ಬೆದರಿಕೆ ಹಾಕಿದ್ದು ಅಕ್ಷಮ್ಯ. ಡಾ. ಅಂಬೇಡ್ಕರ್ ಆಶಯಕ್ಕೆ ವಿರುದ್ಧವಾಗಿರುವ ಸಂಘಟನೆಯನ್ನು ತಕ್ಷಣ ನಿಷೇಧಿಸಬೇಕು ಎಂದು ಆಗ್ರಹಿಸಿದರು.

ಅಂಬೇಡ್ಕರ್ ಅವರು ನೀಡಿರುವ ಸಂವಿಧಾನವೇ ನಮಗೆ ಶ್ರೇಷ್ಠ ಗ್ರಂಥವಾಗಿದ್ದು, ಮನುವಾದದ ಮನುಸ್ಮೃತಿ ಬೇಡ ಎಂದು ಆಕ್ರೋಶ ವ್ಯಕ್ತಪಡಿಸಿದರು.

---

# ಕ್ಷೇತ್ರದ ಅಭಿವೃದ್ಧಿ ಕಾರ್ಯಗಳಿಗೆ 10 ಕೋಟಿ ಬಿಡುಗಡೆ

• ಉದಯವಾಹಿನಿ, ಶಿರ್ವ


ಅಭಿವೃದ್ಧಿಯ ವಿಷಯದಲ್ಲಿ ಯಾವುದೇ ಪಕ್ಷ ರಾಜಕೀಯವಿಲ್ಲ. ಶಿರ್ವ ಗ್ರಾಮ ಪಂಚಾಯಿತಿ ಅಭಿವೃದ್ಧಿ ಹೊಂದಿದ್ದು, ಇದು ಪಟ್ಟಣ ಪಂಚಾಯಿತಿ ಆಗುವ ಪೂರ್ಣ ಅರ್ಹತೆ ಹೊಂದಿದೆ. ಪಟ್ಟಣ ಪಂಚಾಯಿತಿ ಆದಲ್ಲಿ ಅಭಿವೃದ್ಧಿ ಯೋಜನೆಗಳಿಗೆ ಹೆಚ್ಚಿನ ಅನುದಾನ ಲಭ್ಯವಾಗುತ್ತದೆ. ಕುಡಿಯುವ ನೀರಿನ ಸೌಲಭ್ಯ ಸೇರಿದಂತೆ ಮೂಲಸೌಕರ್ಯ ಅಭಿವೃದ್ಧಿಗೆ ಸಂಪೂರ್ಣ ಸಹಕಾರ ನೀಡಲಾಗುವುದು. ಶಿರ್ವ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯಾಗಿ ಪರಿವರ್ತನೆ ಮಾಡಲು ಶ್ರಮಿಸುವೆ' ಎಂದು ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಹೇಳಿದರು.

ಶಿರ್ವ ಮಹಿಳಾ ಸೌಧದಲ್ಲಿ ಜರುಗಿದ ಕಾಪು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ 940 ಲಕ್ಷ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನಾ ಕಾರ್ಯಕ್ರಮಗಳಿಗೆ ಅವರು ಚಾಲನೆ ನೀಡಿ ಮಾತನಾಡಿದರು. ಕ್ಷೇತ್ರದ ಅಭಿವೃದ್ಧಿ ಕಾರ್ಯಗಳಿಗೆ 10 ಕೋಟಿ ಬಿಡುಗಡೆ ಮಾಡಲಾಗಿದ್ದು, ಗೃಹಲಕ್ಷ್ಮೀ ಯೋಜನೆಯ ಮೂಲಕ ಮಹಿಳೆಯರು ಸ್ವಾಭಿಮಾನದಿಂದ ಜೀವಿಸುವ ಕಾರ್ಯ ಮಾಡಿದ್ದೇನೆ. ಮಹಿಳೆಯರ ಸುರಕ್ಷತೆಗಾಗಿ ಅಕ್ಕಾ ಪಡೆ ಹಾಗೂ ಗೃಹಲಕ್ಷ್ಮೀ ಸಹಕಾರಿ ಬ್ಯಾಂಕ್ ಸ್ಥಾಪನೆಯ ಯೋಜನೆ ಹಮ್ಮಿಕೊಂಡಿದ್ದೇವೆ. ಆಶಾ, ಅಂಗನವಾಡಿ ಕಾರ್ಯಕರ್ತೆಯರ ಮಾಸಿಕ ಭತ್ಯೆಯನ್ನು 1 ಸಾವಿರ ಹೆಚ್ಚಿಸುವ ನಿರ್ಧಾರ ಕೈಗೊಂಡಿದ್ದೇವೆ ಎಂದರು. ಅಧ್ಯಕ್ಷತೆ ವಹಿಸಿದ ಶಾಸಕ ಗುರ್ಮೆ ಸುರೇಶ್ ಶೆಟ್ಟಿ ಮಾತನಾಡಿದರು.


ಉದಯವಾಹಿನಿ ಚಿತ್ರ

---

# ಧರ್ಮಸ್ಥಳ ಸಂಸ್ಥೆಯಿಂದ ಹಾಲು ಸಂಗ್ರಹಣಾ ಉಪಕೇಂದ್ರ ಪ್ರಾರಂಭ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಾ ನಿಡಗುಂದಾ ವಲಯದ ಬೆನಕೆನಹಳ್ಳಿ ಗ್ರಾಮದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್ ವತಿಯಿಂದ ಹಾಲು ಸಂಗ್ರಹಣ ಉಪಕೇಂದ್ರವನ್ನು ಪ್ರಾರಂಭ ಮಾಡಲಾಯಿತು ಎಂದು ಧರ್ಮಸ್ಥಳ ಸಂಸ್ಥೆಯ ತಾಲ್ಲೂಕಾ ಯೋಜನಾಧಿಕಾರಿ ಶಕುಂತಲಾ ತಿಳಿಸಿದ್ದಾರೆ.

ತದನಂತರ ಮಾತನಾಡಿದ ಅವರು,ಗ್ರಾಮೀಣ ಪ್ರದೇಶಗಳಲ್ಲಿ ಪ್ರತಿಯೊಬ್ಬರು ಹೈನುಗಾರಿಕೆಗೆ ಹೆಚ್ಚಿನ ಒತ್ತು ನೀಡಬೇಕು, ಹಸು ಮತ್ತು ಎಮ್ಮೆಗಳು ಸಾಕಿ ಹಾಲು ಸಂಗ್ರಹಣ ಉಪಕೇಂದ್ರದಲ್ಲಿ ಮಾರಾಟ ಮಾಡಿ ಆರ್ಥಿಕವಾಗಿ ಸಬಲರಾಗಬೇಕು ಎಂದರು.

ಈ ಸಂದರ್ಭದಲ್ಲಿ ಅಶೋಕ ಗುತ್ತೇದಾರ,ಉಸ್ಮಾನ ಪಟ್ಟೆದಾರ, ಅಜಮತ ಪಟೇಲ್, ಪರಮೇಶ್ವರ ಸಾಲೋಳ್ಳಿ, ಬಸವರಾಜ ಕೆರೋಳ್ಳಿ, ಹಾಜಪ್ಪ ರಾಯಕೋಡ ಸೇರಿದಂತೆ ಧರ್ಮಸ್ಥಳ ಸಂಸ್ಥೆಯ ಕೃಷಿ ಮೇಲ್ವಿಚಾರಕಸತೀಶ್ ಕೆ.ಎಚ್.ನಿಡಗುಂದಾ ವಲಯ ಮೇಲ್ವಿಚಾರಕಿ ನಿಂಗಮ್ಮ, ಸೇವಾ ಪ್ರತಿನಿಧಿ, ಮಂಜುಳಾ, ಸಿ.ಎಸ್ ಸಿ ಸೇವಾದಾರ ಶಿವಲಿಂಗಯ್ಯಸ್ವಾಮಿ, ಗ್ರಾಮದ ರೈತರು ಸ್ವಸಹಾಯ ಸಂಘದ ಸದಸ್ಯರು ಇದ್ದರು.

---

# ಗೋ ಪೂಜೆ ಮೂಲಕ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬಸವನಬಾಗೇವಾಡಿ

8ನೇ ಸುತ್ತಿನ ರಾಷ್ಟ್ರೀಯ ಪ್ರಾಣಿ ರೋಗ ನಿಯಂತ್ರಣ ಕಾರ್ಯಕ್ರಮದಡಿ ಕಾಲು ಬಾಯಿ ಜ್ವರ ಲಸಿಕಾ ಕಾರ್ಯಕ್ರಮಕ್ಕೆ ಸೋಮವಾರ ಗೋ ಪೂಜೆ ಮೂಲಕ ಚಾಲನೆ ನೀಡಲಾಯಿತು ಎಂದು ಪಟ್ಟಣದ ಪಶು ಪಾಲನಾ ಇಲಾಖೆಯ ಮುಖ್ಯ ಪಶು ವೈದ್ಯಾಧಿಕಾರಿ ಡಾ. ಪಂಚಾಕ್ಷರಿ ಎಸ್ ಸಂಖ ಪ್ರಕಟಣೆ ಮೂಲಕ ತಿಳಿಸಿದ್ದಾರೆ. ತಾಲ್ಲೂಕಿನಾದ್ಯಾಂತ ನ.21ರವರೆಗೆ ಕಾಲು ಬಾಯಿ ಜ್ವರ ರೋಗದ ವಿರುದ್ದ ಲಸಿಕೆ ಹಾಕಲು 11512 ದನಗಳು, 8117 ಎಮ್ಮೆಗಳು ಸೇರಿ 19629 ಜಾನುವಾರುಗಳು ನೊಂದಣಿಯಾಗಿರುತ್ತವೆ ಎಂದು ಅವರು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷೆ ಜಗದೇವಿ ಗುಂಡಳ್ಳಿ, ಡಾ. ಬಸವರಾಜ ಕನಮಡಿ, ಡಾ. ರೇವಣಸಿದ್ದು, ಆರ್.ಎಸ್ ಹಿರೇಮಠ, ಬಿ.ಎಂ ಡಿಗ್ಗಾವಿ, ಎಂಎಸ್ ಕುಂಟೋಜಿ, ಎಂಬಿ ಗಣಿ, ಕೌಸರ್ ಚಪ್ಪರಬಂದ ಸೇರಿದಂತೆ ಇಲಾಖೆಯ ಅನೇಕ ಸಿಬ್ಬಂದಿಗಳು ಹಾಜರಿದ್ದರು.

> ತಾಲ್ಲೂಕಿನಲ್ಲಿ ಲಸಿಕೆ ಹಾಕಲು 211 ಬ್ಲಾಕ್, 8 ತಂಡಗಳನ್ನು ರಚಿಸಿದ್ದು, 9 ಸಿಬ್ಬಂದಿಗಳನ್ನು ನೇಮಿಸಲಾಗಿದ್ದು. ಎಲ್ಲಾ ದನಕರುಗಳಿಗೆ ಉಚಿತವಾಗಿ ರೈತರ ಮನೆ ಬಾಗಿಲಿಗೆ ತೆರಳಿ ಲಸಿಕೆ ಹಾಕಲಾಗುತ್ತದೆ.
>
> -ಡಾ. ಪಂಚಾಕ್ಷರಿ ಎಸ್ ಸಂಖಿ, ಪಶು ಪಾಲನಾ ಇಲಾಖೆಯ ಮುಖ್ಯ ಪಶು ವೈದ್ಯಾಧಿಕಾರಿ

---

# ಸಿಎಂ ಕುರ್ಚಿ ಚರ್ಚೆಯಲ್ಲಿ ಕಾಲಹರಣ: ಬೊಮ್ಮಾಯಿ

• ಉದಯವಾಹಿನಿ, ಹಾನಗಲ್

ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ತಮ್ಮ ಸಚಿವರ ಮೇಲೆ ಹಿಡಿತ ಇಲ್ಲ. ಕಾಂಗ್ರೆಸ್ ಕೇಂದ್ರ ವರಿಷ್ಠರಲ್ಲಿ ಕರ್ನಾಟಕದ ಮುಖ್ಯಮಂತ್ರಿ ಸ್ಥಾನದ ಕುರಿತು ಎರಡು ಗುಂಪುಗಳಾಗಿವೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು. ಖಾಸಗಿ ಕಾರ್ಯಕ್ರಮದ ನಿಮಿತ್ತ ಪಟ್ಟಣಕ್ಕೆ ಬಂದಿದ್ದ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಕಾಂಗ್ರೆಸ್‌ನ ನವೆಂಬರ್ ರಾಜಕೀಯ ಕ್ರಾಂತಿ ಖಾಸಗಿ ವ್ಯವಹಾರವಾಗಿದ್ದು, ಮುಖ್ಯಮಂತ್ರಿ ಮತ್ತು ಡಿಸಿಎಂ ನಾವಿಬ್ಬರೇ ಮಾತನಾಡಿಕೊಳ್ಳುತ್ತೇವೆ ಎಂದು ವ್ಯವಹಾರ ಮಾಡಿಕೊಂಡಿದ್ದಾರೆ. ಉಳಿದ ಮಂತ್ರಿ, ಶಾಸಕರಿಗೆ ಸಂಬಂಧವೇ ಇಲ್ಲ ಎನ್ನುವಂತಾಗಿದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಂದಾಗಿನಿಂದ ಮುಖ್ಯಮಂತ್ರಿ ಸ್ಥಾನದ ಚರ್ಚೆಯಲ್ಲಿಯೇ ದಿನ ನೂಕುತ್ತ ರಾಜ್ಯದ ಅಭಿವೃದ್ಧಿ ಶೂನ್ಯವಾಗಿದೆ ಎಂದು ಹೇಳಿದರು. ಕರ್ನಾಟಕದ ರಾಜಕೀಯ ಇತಿಹಾಸದಲ್ಲಿ ಮುಖ್ಯಮಂತ್ರಿ ಯಾರಾಗಬೇಕೆಂಬ ವಿಷಯ ಖಾಸಗೀಕರಣಗೊಂಡಿರುವುದು ಇದೇ ಮೊದಲು. ಇಷ್ಟು ಕೆಳ ಮಟ್ಟಕ್ಕೆ ವಿಚಾರ ಹೋಗಬಾರದಾಗಿತ್ತು. ರಾಜ್ಯದ ಆರ್ಥಿಕ ಸ್ಥಿತಿ ದಿವಾಳಿಯಾಗಿದೆ. ಅಭಿವೃದ್ಧಿ ಮರೀಚಿಕೆಯಾಗಿದೆ. ಸರ್ಕಾರ ರೈತರನ್ನು ಮರೆತೇ ಬಿಟ್ಟಿದೆ. ಕಿತ್ತು ಹೋದ ರಸ್ತೆ ಗುಂಡಿ ಮುಚ್ಚಲು ಹಣವಿಲ್ಲ ಎಂಬುದನ್ನು ಇಡೀ ರಾಜ್ಯದ ಜನತೆ ಗಮನಿಸಿದ್ದಾರೆ.


ಉದಯವಾಹಿನಿ ಚಿತ್ರ

ನೀರಾವರಿ ಯೋಜನೆಗಳಿಗೆ ದುಡ್ಡಿಲ್ಲ. ಇಂತಹ ಶೋಚನೀಯ ಸ್ಥಿತಿ ರಾಜ್ಯದ ಸರ್ಕಾರದ್ದಾಗಿದೆ. ರೈತರಿಗೆ ಬೆಳೆ ಪರಿಹಾರವಿಲ್ಲ. ಸರ್ಕಾರ ಇದ್ದೂ ಇಲ್ಲದಾಗಿದೆ. ಕೇವಲ ಅಧಿಕಾರದ ಚರ್ಚೆಯಲ್ಲಿಯೇ ಎರಡೂವರೆ ವರ್ಷ ಕಳೆದಿದ್ದಾರೆ ಎಂದರು.

ಶಾಸಕರಿಗೆ ಅನುದಾನ ಕೊಡುತ್ತೇವೆ ಎಂದವರು ಇಂದಿಗೂ ಅದರ ಮಾತಿಲ್ಲ. ಹಣವಿದ್ದರೆ ತಾನೆ ಕೊಡುವುದು. ರಾಜ್ಯದ ಅಭಿವೃದ್ಧಿ ಹಿಂದಕ್ಕೆ ಹೋಗುತ್ತಿದೆ. ಎರಡು ವರ್ಷಗಳಲ್ಲಿ 3.5 ಲಕ್ಷ ಕೋಟಿ ಸಾಲ ಮಾಡಿದ್ದೇ ಈ ಸರ್ಕಾರದ ಸಾಧನೆ. ಅಧಿಕಾರ ಮುಗಿಯುವಷ್ಟರಲ್ಲಿ ಈ ಸಾಲ 6 ಲಕ್ಷ ಕೋಟಿಗೆ ಮುಟ್ಟಿರುತ್ತದೆ ಎಂದರು.

ಸಿದ್ದರಾಮಯ್ಯ ಒಳ್ಳೆಯ ಆಡಳಿತ ನೀಡಬಹುದು ಎಂದುಕೊಂಡಿದ್ದೆವು. ಆದರೆ ರಾಜ್ಯದ ಜನತೆಗೆ ನಿರಾಸೆ ಮೂಡಿಸಿದ್ದಾರೆ. ಈ ಸರ್ಕಾರ ಬಂದಾಗಿನಿಂದ ಖುರ್ಚಿ ಚರ್ಚೆಯಾಗುತ್ತಿದೆಯೇ ಹೊರತು, ರಾಜ್ಯದ ಅಭಿವೃದ್ಧಿ ಚರ್ಚೆ ಆಗುತ್ತಿಲ್ಲ' ಎಂದರು.

ಭೂಗ್ಯಾರಂಟಿ ಕಾಂಗ್ರೆಸ್ ಸರ್ಕಾರದ ಸಾಧನೆ ಎಂದು ಹೇಳಿಕೊಳ್ಳುತ್ತಿರುವುದರಲ್ಲಿ ಅರ್ಥವಿಲ್ಲ. ಅಲ್ಲಿ ವಾಸಿಸುವ ಅವರೆಲ್ಲ ತಮ್ಮ ಜಾಗೆಯಲ್ಲಿ ವಾಸಿಸುತ್ತಿದ್ದರು. ಇಲಾಖೆಗಳು ಅವರಿಗೆ ದಾಖಲೆ ನೀಡಿವೆ ಅಷ್ಟೇ. ಇದರಲ್ಲಿ ಸರ್ಕಾರದ ಯಾವುದೇ ದೊಡ್ಡಸ್ತಿಕೆ ಇಲ್ಲ. ಅವರಿಗೆ ಗ್ಯಾರಂಟಿಗೆ ಇನ್ನೊಂದನ್ನು ಸೇರಿಸಿಕೊಳ್ಳಲು ಭೂ ಗ್ಯಾರಂಟಿ ಎಂದು ಪ್ರಚಾರ ಪಡೆಯುತ್ತಿದ್ದಾರೆ ಅಷ್ಟೇ ಎಂದರು.

---

# ಎಂಇಎಸ್ ವಿರುದ್ಧ ಪ್ರತಿಭಟನೆ: ಕನ್ನಡ ಹೋರಾಟಗಾರರು ಪೊಲೀಸರ ವಶಕ್ಕೆ



• ಉದಯವಾಹಿನಿ, ಬೆಳಗಾವಿ

ಕರ್ನಾಟಕ ರಾಜ್ಯೋತ್ಸವಕ್ಕೆ ಪರ್ಯಾಯವಾಗಿ ಕರಾಳ ದಿನ ಆಚರಿಸಿದ ಮಹಾರಾಷ್ಟ್ರ ಏಕೀಕರಣ ಸಮಿತಿ ಕಾರ್ಯಕರ್ತರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿ ನಗರದಲ್ಲಿ ಸೋಮವಾರ ಪ್ರತಿಭಟಿಸಿದ ಯುವ ಕರ್ನಾಟಕ ವೇದಿಕೆ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದರು. ಇಲ್ಲಿನ ರಾಣಿ ಚನ್ನಮ್ಮನ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿಯವರೆಗೆ ಪ್ರತಿಭಟನಕಾರರು ಮೆರವಣಿಗೆ ನಡೆಸಿ, ಎಂಇಎಸ್ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ರೌಡಿಶೀಟರ್ ಆಗಿರುವ ಎಂಇಎಸ್‌ನ ಶುಭಂ ಶೆಳಕೆ ವಿರುದ್ಧ ಮಾಳಮಾರುತಿ ಠಾಣೆ ಇನ್‌ಸ್ಪೆಕ್ಟರ್ ಜೆ.ಎಂ.ಕಾಲಿಮಿರ್ಚಿ ಸೆಲ್ಫಿ ಕ್ಲಿಕ್ಕಿಸಿಕೊಂಡಿದ್ದು ತಪ್ಪು. ಈ ಬಗ್ಗೆ ತನಿಖೆ ಕೈಗೊಂಡು ಪೊಲೀಸ್ ಅಧಿಕಾರಿ ತಪ್ಪು ಮಾಡಿರುವುದು ಸಾಬೀತಾದರೆ ಸೇವೆಯಿಂದ ವಜಾಗೊಳಿಸಬೇಕು ಅಥವಾ ವರ್ಗಾವಣೆ ಮಾಡಬೇಕು ಎಂದು ಒತ್ತಾಯಿಸಿದರು.

---

# ತಿರುಪತಿಗೆ ಇದ್ದ ವಿಮಾನ ಸೇವೆಯೂ ಬಂದ್ ಮಾಡಿದ ಸ್ಟಾರ್ ಏರ್ ವಿಮಾನ ಸಂಸ್ಥೆ


## ಆರಂಭವಾಗಿ 6 ವರ್ಷಗಳಲ್ಲೇ ಬಂದ್ ಆದ ಕಲಬುರಗಿ-ಬೆಂಗಳೂರು ವಿಮಾನ ಸೇವೆ; ಕಾರಣವೇನು?

• ಉದಯವಾಹಿನಿ, ಕಲಬುರಗಿ

ಕಲಬುರಗಿಯಲ್ಲಿ ಆರ್‌ಎಸ್‌ಎಸ್ ಪಥಸಂಚಲನ ಹಾಗೂ ಭೀಮ್ ಆರ್ಮಿ ಪಥಸಂಚಲನ ಹೀಗೆ ಹಲವು ರಾಜಕೀಯ ಚರ್ಚೆಗಳು ಜೋರಾಗಿ ನಡೆಯುತ್ತಲೇ ಇದೆ. ಆದರೆ ಇವೆಲ್ಲದರ ನಡುವೆ ಜನಸಾಮನ್ಯರಿಗೆ ತಲುಪಬೇಕಾದ ಮೂಲ ಸೌಕರ್ಯಗಳು ಸದ್ದಿಲ್ಲದೆ ಬಂದ್ ಆಗುತ್ತಿವೆ. ಹೌದು ರಾಜಕೀಯ ಜಟಾಪಟಿಗಳ ನಡುವೆ ಕಲಬುರಗಿಯ ಜನತೆಗೆ ಬೆಂಗಳೂರು ಹಾಗೂ ಕಲಬುರಗಿಯ ನಡುವೆ ಇದ್ದ ವಿಮಾನ ಹಾರಾಟ ಏಕಾಏಕಿ ಸ್ಥಗಿತಗೊಂಡು ಪ್ರಯಾಣಿಕರಿಗೆ ಶಾಕ್ ನೀಡಿದೆ.

**ಆರಂಭವಾಗಿ 6 ವರ್ಷಗಳಲ್ಲೇ ಬಂದ್:** ಕಲಬುರಗಿಯ ವಿಮಾನ ನಿಲ್ದಾಣ ಆರಂಭವಾಗಿ ಇನ್ನೂ ಕೇವಲ 6ವರ್ಷಗಳಲ್ಲೇ ಪ್ರಯಾಣಿಕರ ಸಂಖ್ಯೆ ಕಡಿಮೆ ಇದೆ ಎಂಬ ಕಾರಣ ನೀಡಿ ವಿಮಾನ ಸೇವೆಯನ್ನೇ ಸಂಪೂರ್ಣವಾಗಿ - ಕಲಬುರಗಿ ಸಂಪರ್ಕಿಸುತ್ತಿದ್ದ ಸ್ಟಾರ್ ಏರ್ ಸಂಸ್ಥೆ ನಿಲ್ಲಿಸಿದೆ. ಇದರಿಂದ ವಿಮಾನದ ಮೂಲಕ ಪ್ರಯಾಣಿಸುವ ಹಲವು ಜನರಿಗೆ ತೊಂದರೆಯಾಗಿ ಪರಿಣಮಿಸಿದೆ.



ಇನ್ನು, ಈ ಕುರಿತು ಕೇಳಿದರೆ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಸ್ಟಾರ್ ಏರ್ ವಿಮಾನ ಸಂಸ್ಥೆ ವಿಮಾನ ಸೇವೆಗಳನ್ನು ರದ್ದು ಮಾಡಿದೆ. ಆದರೆ ಇದರ ಬದಲಾಗಿ ಇಂಡಿಗೋ ಏರ್ಲೈನ್ಸ್‌ನವರು ಸೇವೆ ಆರಂಭಿಸಲಿದ್ದಾರೆ ಎಂದು ಹೇಳಿದ್ದಾರೆ.

**2019ರಲ್ಲಿ ಆರಂಭವಾಗಿದ್ದ ಕಲಬುರಗಿ-ಬೆಂಗಳೂರು ವಿಮಾನ ಸಂಚಾರ:** 2008ರರಲ್ಲಿ ಅಂದಿನ ಮುಖ್ಯಮಂತ್ರಿಗಳಾಗಿದ್ದ ಬಿ.ಎಸ್. ಯಡಿಯೂರಪ್ಪ ಕಲಬುರಗಿಯ ವಿಮಾನ ನಿಲ್ದಾಣಕ್ಕೆ ಅಡಿಗಲ್ಲು ಹಾಕಿದ್ದರು. ಇದಾದ ಹಲವು ವರ್ಷಗಳ ಬಳಿಕ 2019ರಲ್ಲಿ ಮೊದಲ ಬಾರಿಗೆ ಕಲಬುರಗಿಯಿಂದ ಬೆಂಗಳೂರಿಗೆ ವಿಮಾನ ಹಾರಟ ನಡೆಸಿತ್ತು. ಇದಾದ ಬಳಿಕ ನಿತ್ಯ 2 ಫ್ಲೈಟ್ ಸೇರಿ ತಿರುಪತಿಗೂ ಸಹ ಸ್ಟಾರ್ ಏರ್ ಸಂಸ್ಥೆ ವಿಮಾನಯಾನ ಸೇವೆ ಆರಂಭಿಸಿತ್ತು. ಇದಕ್ಕೆ ಪ್ರಯಾಣಿಕರಿಂದ ಒಳ್ಳೆಯ ಪ್ರತಿಕ್ರಿಯೆ ಕೂಡ ಸಿಕ್ಕಿತ್ತು. ಹೀಗಾಗಿ ಕಲಬುರಗಿಯಿಂದ ಬೆಂಗಳೂರಿಗೆ 50 ಸೀಟ್ ಬದಲು 80 ಸೀಟ್ ಸಾಮರ್ಥ್ಯದ ವಿಮಾನ ಸೇವೆ ಆರಂಭಿಸಲಾಗಿತ್ತು. ಆದರೆ ವಿಮಾನ ಸೇವೆ ಆರಂಭವಾಗಿ 6 ವರ್ಷಗಳಲ್ಲೇ ಪ್ರಯಾಣಿಕರ ಸಂಖ್ಯೆ ಕಡಿಮೆ ಎಂಬ ನೆಪ ಹೇಳಿ ಕೆಲ ತಿಂಗಳ ಹಿಂದೆ ತಿರುಪತಿ ಫ್ಲೈಟ್ ರದ್ದು ಪಡಿಸಲಾಗಿತ್ತು, ಇದೀಗ ಮತ್ತೆ ಬೆಂಗಳೂರಿಗೆ ಸಂಚರಿಸುವ ಸ್ಟಾರ್ ಏರ್ ಫ್ಲೈಟ್ ಸಹ ಏಕಾಏಕಿ ಬಂದ್ ಮಾಡಲಾಗಿದ್ದು, ಜನಸಾಮಾನ್ಯರ ಆಕ್ರೋಶಕ್ಕೆ ಕಾರಣವಾಗಿದೆ.

> ಕಲಬುರಗಿಯಿಂದ ಬೆಂಗಳೂರಿಗೆ ವಿಮಾನ ಸೇವೆ ಏಕಾಏಕಿ ಸ್ಥಗಿತಗೊಂಡಿದೆ. ಆರು ವರ್ಷಗಳಲ್ಲೇ ಈ ಸೇವೆ ನಿಂತುಹೋಗಿದೆ. ಪ್ರಯಾಣಿಕರ ಸಂಖ್ಯೆ ಕಡಿಮೆ ಎಂಬ ಕಾರಣಕ್ಕೆ ಸ್ಟಾರ್ ಏರ್ ಸಂಸ್ಥೆ ವಿಮಾನ ಹಾರಾಟ ನಿಲ್ಲಿಸಿದೆ. ಇದರಿಂದ ಜನಸಾಮಾನ್ಯರಿಗೆ ತೊಂದರೆಯಾಗಿದೆ. ಇಂಡಿಗೋ ಏರ್ಲೈನ್ಸ್ ಸೇವೆ ಆರಂಭಿಸಲಿದೆ.
>
> - ಪ್ರಿಯಾಂಕ್ ಖರ್ಗೆ, ಉಸ್ತುವಾರಿ ಸಚಿವ

# ದಫನ್ ಆದವರಿಗಾಗಿ ರ್‍ಯಾಲಿ ಮಾಡಿದರೆ ಕಫನ್ ಆಗ್ತಿರಿ

**ಹಫೀಜ್ ಹೊರಗೆಯೇ ಬಂದಿಲ್ಲ**


**ಇಸ್ಲಾಮಾಬಾದ್ :** ಭಾರತದ ಮಿಲಿಟರಿ ಪಡೆಗಳು ಪಾಕಿಸ್ತಾನದ ಗಡಿಯಲ್ಲಿ ನಡೆಸುತ್ತಿರುವ ತ್ರಿಶೂಲ್ ತಾಲೀಮಿನ ಹಿನ್ನೆಲೆಯಲ್ಲಿ, ಉಗ್ರ ಲಷ್ಕರ್ -ಎ-ತೊಯ್ಬಾ ಸಂಘಟನೆಯ ಸಂಸ್ಥಾಪಕ ಹಫೀಜ್ ಸಯೀದ್, ನಡೆಸಲು ಉದ್ದೇಶಿಸಿದ್ದ ಬಹು ನಿರೀಕ್ಷಿತ ಲಾಹೋರ್ ರ್‍ಯಾಲಿಯನ್ನು ಮುಂದೂಡಿದ್ದಾನೆ. ಭಾರತದ ಸೇನೆಗಳು ದೊಡ್ಡ ಪ್ರಮಾಣದಲ್ಲಿ ಯುದ್ಧತಾಲೀಮು ನಡೆಸುತ್ತಿವೆ. ಉಗ್ರ ಹಫೀಜ್, ಲಾಹೋರಿನಲ್ಲಿ ನವೆಂಬರ್ ಎರಡರಂದು ಮಿನಾರ್ -ಎ- ಪಾಕಿಸ್ತಾನ ಎನ್ನುವ ಹೆಸರಿನಲ್ಲಿ ರ್‍ಯಾಲಿ ನಡೆಸಲು ಉದ್ದೇಶಿಸಿದ್ದ. ಆದರೆ, ಪಾಕಿಸ್ತಾನದ ಗುಪ್ತಚರ ಸಂಸ್ಥೆ ಐಎಸ್‌ಐ ನೀಡಿದ ಎಚ್ಚರಿಕೆಯ ಹಿನ್ನೆಲೆಯಲ್ಲಿ ರ್‍ಯಾಲಿಯನ್ನು ಮುಂದೂಡಿದ್ದಾನೆ. ಮನೆಯಿಂದ, ಹಫೀಜ್ ಹೊರಗೆಯೇ ಬಂದಿಲ್ಲ ಎಂದು ವರದಿಯಾಗಿದೆ. ಪಾಕಿಸ್ತಾನ ಮೂಲಗಳ ಪ್ರಕಾರ, ರ್‍ಯಾಲಿಯನ್ನು ಸದ್ಯದ ಮಟ್ಟಿಗೆ ಮುಂದೂಡುವ ನಿರ್ಧಾರವು ಸಂಘಟನೆಯಲ್ಲಿ ಮತ್ತು ಅದರ ಬೆಂಬಲಿಗರಲ್ಲಿ ಭಾರೀ ಗೊಂದಲಕ್ಕೆ ಕಾರಣವಾಗಿದೆ. ಹೊಸ ದಿನಾಂಕವನ್ನು ಇನ್ನೂ ಪ್ರಕಟಿಸಲಾಗಿಲ್ಲ, ಐಎಸ್‌ಐ ಅಧಿಕಾರಿಗಳು ಮತ್ತು ಹಫೀಜ್ ಸಯೀದ್ ನಡುವಿನ ಮಾತುಕತೆಯ ನಂತರ, ರ್‍ಯಾಲಿ ಮುಂದೂಡುವ ನಿರ್ಧಾರಕ್ಕೆ ಬರಲಾಗಿದೆ. ಖುದ್ದು ಹಫೀಜ್ ಈ ನಿರ್ಧಾರವನ್ನು ತೆಗೆದುಕೊಂಡಿದ್ದಾನೆ. ಅಮೀರ್ - ಎ- ಮೊಹ್ವಾರ್ ಅವರ ನಿರ್ಧಾರದಂತೆ ರ್‍ಯಾಲಿಯನ್ನು ಮುಂದೂಡಲಾಗಿದೆ ಎಂದು ಸಂಘಟನೆಯ ಸದಸ್ಯರೊಬ್ಬರು ಹೇಳಿದ್ದಾರೆ. ಆಪರೇಷನ್ ಸಿಂಧೂರ್ ಕಾರ್ಯಾಚರಣೆಯ ನಂತರ ಹಫೀಜ್ ಸಯೀದ್, ಸಾರ್ವಜನಿಕವಾಗಿ ಕಾಣಿಸಿಕೊಂಡಿರಲಿಲ್ಲ. ಹಾಗಾಗಿ, ಬಹಳ ದಿನಗಳ ನಂತರ ತಮ್ಮ ನಾಯಕನನ್ನು ನೋಡಲು ಉಗ್ರ ಸಂಘಟನೆಯ ಸದಸ್ಯರು ಉತ್ಸುಕರಾಗಿದ್ದರು. ಆದರೆ, ಐಎಸ್‌ಐ, ರ್‍ಯಾಲಿಯನ್ನು ನಡೆಸದಂತೆ ಸೂಚನೆಯನ್ನು ನೀಡಿದ ಹಿನ್ನೆಲೆಯಲ್ಲಿ, ರ್‍ಯಾಲಿ ಮುಂದೂಡುವ ನಿರ್ಧಾರ, ಅವರ ಸಂಘಟನೆಯ ಸದಸ್ಯರಿಗೆ ನಿರಾಶೆಯನ್ನು ಮೂಡಿಸಿದೆ. ದೇಶದಲ್ಲಿ ಹೆಚ್ಚುತ್ತಿರುವ ತೆಹ್ರೀಕ್ - ಎ - ತಾಲಿಬಾನ್ ಬೆದರಿಕೆಗಳ ಹಿನ್ನೆಲೆಯಲ್ಲೂ, ರ್‍ಯಾಲಿ ಮುಂದೂಡುವ ನಿರ್ಧಾರಕ್ಕೆ ಬರಲಾಗಿದೆ. ಆಂತರಿಕವಾಗಿ ಸಾಕಷ್ಟು ಬೆದರಿಕೆಗಳನ್ನು ಪಾಕಿಸ್ತಾನ ಎದುರಿಸುತ್ತಿರುವ ಹಿನ್ನೆಲೆಯಲ್ಲಿ, ಯಾವುದೇ ರಿಸ್ಕ್ ತೆಗೆದುಕೊಳ್ಳಲು ಹೋಗಬೇಡಿ ಎಂದು ಐಎಸ್‌ಐ ಎಚ್ಚರಿಕೆಯನ್ನು ನೀಡಿದೆ. ಆಪರೇಷನ್ ಸಿಂಧೂರ್ ಕಾರ್ಯಾಚರಣೆಯಲ್ಲಿ ಸಾಯಲ್ಪಟ್ಟ ಉಗ್ರರ ಸ್ಮರಣಾರ್ಥ, ಹಫೀಜ್ ಸಯೀದ್, ಲಾಹೋರ್ ರ್‍ಯಾಲಿಯನ್ನು ಆಯೋಜಿಸಿದ್ದ. ಪಂಜಾಬ್ ಭಾಗದ ಮುರಿಡ್ಕೆಯಲ್ಲಿ, ಭಾರತದ ವಾಯುಪಡೆಯ ದಾಳಿಗೆ, ನೂರಾರು ಉಗ್ರರು ಸಾವನ್ನಪ್ಪಿದ್ದರು. ದೇಶೀಯವಾಗಿ, ಅಂತರಾಷ್ಟ್ರೀಯವಾಗಿ ಉಗ್ರರಿಗೆ ಹಣಕಾಸು ಒದಗಿಸುವುದನ್ನು ತಡೆಯಲು ಹೆಚ್ಚಿನ ಒತ್ತಡವನ್ನು ಪಾಕಿಸ್ತಾನ ಸರ್ಕಾರ ಎದುರಿಸುತ್ತಿದೆ. ಈ ಸಮಯದಲ್ಲಿ ನಡೆಸಲು ಉದ್ದೇಶಿಸಲಾಗಿರುವ ಲಷ್ಕರ್ ರ್‍ಯಾಲಿಯಿಂದ, ಜಾಗತಿಕವಾಗಿ ಪಾಕಿಸ್ತಾನ ಮುಜುಗರಕ್ಕೀಡಾಗುವ ಸಾಧ್ಯತೆಯೂ ಇತ್ತು. ಭಾರತದ ಸೇನೆ ಯುದ್ಧ ತಾಲೀಮು ದೊಡ್ಡ ಪ್ರಮಾಣದಲ್ಲಿ ನಡೆಸುತ್ತಿರುವ ಹಿನ್ನೆಲೆಯಲ್ಲಿ, ಉಗ್ರ ಹಫೀಜ್ ಸಯೀದ್ ಮನೆಯಿಂದ ಹೊರಬರಲು ನಿರಾಕರಿಸಿದ್ದಾನೆ. ಜೊತೆಗೆ, ಉಗ್ರ ಸಂಘಟನೆಯ ಯಾವ ಸದಸ್ಯರೂ ಯಾವುದೇ ಸಾರ್ವಜನಿಕ ಕಾರ್ಯಕ್ರಮದಲ್ಲಿ ಭಾಗವಹಿಸದಂತೆ ಎಚ್ಚರಿಕೆಯನ್ನು ನೀಡಲಾಗಿದೆ.



## 1 ಲಕ್ಷ ಕೋಟಿ ರೂ. ಆರ್‌ಡಿಐ ನಿಧಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ

**ನವದೆಹಲಿ:** ಸಂಶೋಧನೆ, ಅಭಿವೃದ್ಧಿಯಲ್ಲಿ ಖಾಸಗಿ ವಲಯದ ಹೂಡಿಕೆಗಳನ್ನು ಉತ್ತೇಜಿಸಲು ಪ್ರಧಾನಿ ನರೇಂದ್ರ ಮೋದಿ ಸೋಮವಾರ ಒಂದು ಲಕ್ಷ ಕೋಟಿ ರೂ.ಗಳ ಆರ್‌ಡಿಐ ನಿಧಿಗೆ ಚಾಲನೆ ನೀಡಿದರು. ಸರ್ಕಾರದ ವಿಕಸಿತ್ ಭಾರತ್ 2047 ದೃಷ್ಟಿಕೋನವನ್ನು ಮುನ್ನಡೆಸಲು ನೀತಿ ನಿರೂಪಕರು, ನಾವೀನ್ಯಕಾರರು ಮತ್ತು ಜಾಗತಿಕ ದಾರ್ಶನಿಕರನ್ನು ಒಟ್ಟುಗೂಡಿಸುವ ಮೊದಲ ಉದಯೋನ್ಮುಖ ವಿಜ್ಞಾನ ತಂತ್ರಜ್ಞಾನ ಮತ್ತು ನಾವೀನ್ಯತೆ ಸಮಾವೇಶದಲ್ಲಿ ಅವರು ಸಂಶೋಧನೆ, ಅಭಿವೃದ್ಧಿ ಮತ್ತು ನಾವೀನ್ಯತೆ ನಿಧಿಯನ್ನು ಪ್ರಾರಂಭಿಸಿದರು.

ಭಾರತದ ವೈಜ್ಞಾನಿಕ ಸಾಧನೆಗಳ ಕುರಿತಾದ ಕಾಫಿ ಟೇಬಲ್ ಪುಸ್ತಕ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನಕ್ಕಾಗಿ ದೃಷ್ಟಿ ದಾಖಲೆಯನ್ನು ಸಹ ಮೋದಿ ಬಿಡುಗಡೆ ಮಾಡಿದರು. ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಎರಡು ಹಂತದ ಹಣಕಾಸು ರಚನೆಯ ಮೂಲಕ ಕಾರ್ಯನಿರ್ವಹಿಸುವ ಆರ್‌ಡಿಐ ನಿಧಿಯ ನೋಡಲ್ ಸಚಿವಾಲಯವಾಗಿದೆ.ಮೊದಲ ಹಂತದಲ್ಲಿ, ಅನುಸಂಧಾನ ರಾಷ್ಟ್ರೀಯ ಸಂಶೋಧನಾ ಪ್ರತಿಷ್ಠಾನದ ಒಳಗೆ ವಿಶೇಷ ಉದ್ದೇಶ ನಿಧಿ ಅನ್ನು ಸ್ಥಾಪಿಸಲಾಗುವುದು, ಇದು ಒಂದು ಲಕ್ಷ ಕೋಟಿ ರೂ.ಗಳ ನಿಧಿಯ ಪಾಲಕರಾಗಿ ಕಾರ್ಯನಿರ್ವಹಿಸುತ್ತದೆ. ಈ ನಿಧಿಯು ಕೈಗಾರಿಕೆಗಳು, ನವೋದ್ಯಮಗಳಲ್ಲಿ ನೇರವಾಗಿ ಹೂಡಿಕೆ ಮಾಡುವುದಿಲ್ಲ ಆದರೆ ಬಂಡವಾಳವನ್ನು ಎರಡನೇ ಹಂತದ ನಿಧಿ ವ್ಯವಸ್ಥಾಪಕರಿಗೆ ವರ್ಗಾಯಿಸುತ್ತದೆ, ಅವರು ಪರ್ಯಾಯ ಹೂಡಿಕೆ ನಿಧಿಗಳು ಅಭಿವೃದ್ಧಿ ಹಣಕಾಸು ಸಂಸ್ಥೆಗಳು , ಬ್ಯಾಂಕೇತರ ಹಣಕಾಸು ಕಂಪನಿಗಳು ಇತ್ಯಾದಿ ಗಳಾಗಿರಬಹುದು. ಸರ್ಕಾರದಿಂದ ದೂರದಲ್ಲಿ ಕಾರ್ಯನಿರ್ವಹಿಸುವ ಹಣಕಾಸು, ವ್ಯವಹಾರ ಮತ್ತು ತಾಂತ್ರಿಕ ಕ್ಷೇತ್ರಗಳ ತಜ್ಞರನ್ನು ಒಳಗೊಂಡ ಹೂಡಿಕೆ ಸಮಿತಿಗಳ ಮೂಲಕ ಎರಡನೇ ಹಂತದ ನಿಧಿ ವ್ಯವಸ್ಥಾಪಕರು ಬೆಂಬಲಕ್ಕಾಗಿ ಶಿಫಾರಸುಗಳನ್ನು ಮಾಡುತ್ತಾರೆ.



## ಸಕ್ರಿಯ ಪರಮಾಣು ಪರೀಕ್ಷೆ ನಡೆಸುತ್ತಿರುವ ದೇಶಗಳ ಪೈಕಿ ಪಾಕಿಸ್ತಾನವೂ ಒಂದು: ಟ್ರಂಪ್
# ಅಣ್ವಸ್ತ್ರ ಪರೀಕ್ಷೆ ನಡೆಸುತ್ತಿರುವ ಜಾಗತಿಕ ದೇಶಗಳ ಪಟ್ಟಿ ಬಿಡುಗಡೆ

**ವಾಷಿಂಗ್ಟನ್:** ಬರೋಬ್ಬರಿ 30 ವರ್ಷಗಳ ಬಳಿಕ ಅಮೆರಿಕ ತನ್ನದೇ ಆದ ಸ್ವಂತ ಪರಮಾಣು ಅಸ್ತ್ರ ಪರೀಕ್ಷೆಯ ಯೋಜನೆ ಹಾಕಿಕೊಂಡಿದೆ. ಅಮೆರಿಕದ ಬಳಿ ಈಗಾಗಲೇ ಪರಮಾಣು ಅಸ್ತ್ರಗಳ ಭಂಡಾರವೇ ಇದ್ದು, ಈ ಸಂದರ್ಭದಲ್ಲಿ ಆ ದೇಶಕ್ಕೆ ಅಣ್ವಸ್ತ್ರ ಪರೀಕ್ಷೆಯ ಅಗತ್ಯವಿದೆಯೇ ಎಂಬ ಪ್ರಶ್ನೆ ಹುಟ್ಟುಹಾಕಿದೆ. ಅಮೆರಿಕದ ಪರಮಾಣು ಪರೀಕ್ಷೆ ಯೋಜನೆ ಕುರಿತು ಮಾಹಿತಿ ನೀಡಿರುವ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ನಾವು ಪರಮಾಣು ಪರೀಕ್ಷೆಗಳನ್ನು ನಡೆಸುವ ನಮ್ಮ ಹಕ್ಕುಗಳನ್ನು ಕಾಯ್ದಿರಿಸಿದ್ದೇವೆ ಎಂದು ಸ್ಪಷ್ಟಪಡಿಸಿದ್ದಾರೆ. ಇದಕ್ಕೆ ಸಮರ್ಥನೆಯಾಗಿ ಅನ್ಯ ರಾಷ್ಟ್ರಗಳ ಪರಮಾಣು ಪರೀಕ್ಷೆ ಯೋಜನೆಗಳನ್ನು ಟ್ರಂಪ್ ಪಟ್ಟಿ ಮಾಡಿದ್ದಾರೆ.

**ಪರಮಾಣು ಅಸ್ತ್ರ ಪರೀಕ್ಷೆಯ ಯೋಜನೆ**

ಆದರೆ ಡೊನಾಲ್ಡ್ ಟ್ರಂಪ್ ಬಿಡುಗಡೆ ಮಾಡಿರುವ ಪರಮಾಣು ಶಸ್ತ್ರಗಳ ಪರೀಕ್ಷೆ ನಡೆಸುತ್ತಿರುವ ಇತರ ರಾಷ್ಟ್ರಗಳ ಪಟ್ಟಿಯಲ್ಲಿ ಪಾಕಿಸ್ತಾನದ ಹೆಸರಿದ್ದು, ಇದು ಭಾರತ ಸೇರಿದಂತೆ ಹಲವು ರಾಷ್ಟ್ರಗಳ ಹುಬ್ಬೇರಿಸುವಂತೆ ಮಾಡಿದೆ. ಪಾಕಿಸ್ತಾನವು ಸಕ್ರಿಯವಾಗಿ ಪರಮಾಣು ಶಸ್ತ್ರಾಸ್ತ್ರಗಳನ್ನು ಪರೀಕ್ಷಿಸುವ ದೇಶಗಳ ಪೈಕಿ ಒಂದಾಗಿದೆ ಎಂದು ಅಮೆರಿಕ ಅಧ್ಯಕ್ಷರು ಘೋಷಿಸಿದ್ದಾರೆ. ಸಿಬಿಎಸ್ ನ್ಯೂಸ್‌ನ 60 ಮಿನಿಟ್ಸ್‌ಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಟ್ರಂಪ್, ರಷ್ಯಾ, ಚೀನಾ, ಉತ್ತರ ಕೊರಿಯಾ ಮತ್ತು ಪಾಕಿಸ್ತಾನ ದೇಶಗಳು ಅಣ್ವಸ್ತ್ರ ಪರೀಕ್ಷೆಗಳನ್ನು ನಡೆಸುತ್ತಿವೆ. ಆದರೆ ಅಮೆರಿಕ ಪರಮಾಣು ಪರೀಕ್ಷೆ ನಡೆಸಿದರೆ ಅದನ್ನು ಈ ರಾಷ್ಟ್ರಗಳು ವಿರೋಧಿಸುತ್ತವೆ ಎಂದು ಆರೋಪಿಸಿದ್ದಾರೆ.

ಅಮೆರಿಕ ಪರಮಾಣು ಪರೀಕ್ಷೆ ನಡೆಸಿ 30 ವರ್ಷಗಳಾಗಿವೆ. 1992ರಲ್ಲಿ ಕೊನೆಯ ಬಾರಿ ನಾವು ಅಣ್ವಸ್ತ್ರ ಪರೀಕ್ಷೆ ನಡೆಸಿದ್ದೇವೆ. ಅಣ್ವಸ್ತ್ರ ಪ್ರದರ್ಶನದ ಹಕ್ಕನ್ನು ನಾವು ಕಾಯ್ದಿರಿಸಿದ್ದು, ಈ ಬಾರಿ ಪರೀಕ್ಷೆ ನಡೆಸಿಯೇ ಸಿದ್ಧ ಎಂದು ಡೊನಾಲ್ಡ್ ಟ್ರಂಪ್ ಸ್ಪಷ್ಟವಾದ ಧ್ವನಿಯಲ್ಲಿ ಹೇಳಿದ್ದಾರೆ. ದಕ್ಷಿಣ ಆಫ್ರಿಕಾದಲ್ಲಿ ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರನ್ನು ಭೇಟಿ ಮಾಡುವ ಮೊದಲು, ಟ್ರಂಪ್ ಅವರು ಅಮೆರಿಕ ಪರಮಾಣು ಪರೀಕ್ಷೆ ನಡೆಸುವ ಕುರಿತು ತಮ್ಮ ಟ್ರೂತ್ ಸೋಶಿಯಲ್ ಮಿಡಿಯಾದಲ್ಲಿ ಮಾಹಿತಿ ಹಂಚಿಕೊಂಡಿದ್ದರು. ಇದೀಗ ಚೀನಾದೊಂದಿಗಿನ ದ್ವಿಪಕ್ಷೀಯ ಮಾತುಕತೆ ನಂತರ ಮತ್ತೆ ಟ್ರಂಪ್ ಅವರು ಅಮೆರಿಕದ ನ್ಯೂಕ್ಲಿಯರ್ ಟೆಸ್ಟ್ ಯೋಜನೆಯ ಬಗ್ಗೆ ಬಹಿರಂಗವಾಗಿ ಮಾತನಾಡತೊಡಗಿದ್ದಾರೆ. 2021ರಲ್ಲಿ ಚೀನಾ ಹೈಪರ್ ಸಾನಿಕ್ ಕ್ಷಿಪಣಿ ಪರೀಕ್ಷೆ ನಡೆಸಿದ್ದನ್ನು ಇಲ್ಲಿ ಸ್ಮರಿಸಬಹುದು. ಉತ್ತರ ಕೊರಿಯಾ ಹೊರತುಪಡಿಸಿ ಬೇರೆ ಯಾವುದೇ ದೇಶ ದಶಕಗಳಿಂದ ಅಣ್ವಸ್ತ್ರ ಸ್ಫೋಟ ನಡೆಸಿಲ್ಲವಾದರೂ, ಡೊನಾಲ್ಡ್ ಟ್ರಂಪ್ ಮಾತ್ರ ಭೂಗತ ರೀತಿಯಲ್ಲಿ ಬಹುತೇಕ ದೇಶಗಳು ಪರೀಕ್ಷೆಗಳನ್ನು ನಡೆಸುತ್ತಿವೆ ಎಂದು ಆರೋಪಿಸಿದ್ದಾರೆ. ಅದೇ ರೀತಿ ಅಮೆರಿಕದ ಪರಮಾಣು ಪರೀಕ್ಷೆ ಯೋಜನೆಯ ಬಗ್ಗೆ ಮಾತನಾಡಿರುವ ಯುಎಸ್ ಇಂಧನ ಕಾರ್ಯದರ್ಶಿ ಕ್ರಿಸ್ ರೈಟ್, ನಿರ್ಣಾಯಕವಲ್ಲದ ವ್ಯವಸ್ಥೆಯ ಪರೀಕ್ಷೆಗಳನ್ನು ಮಾತ್ರ ನಡೆಸಲಾಗುತ್ತಿದ್ದು, ಪೂರ್ಣ ಪ್ರಮಾಣದ ಪರಮಾಣು ಸ್ಫೋಟಗಳನ್ನು ನಡೆಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.



> ಕೇವಲ ಒಂದು ವಾರದಲ್ಲಿ ರಷ್ಯಾದಿಂದ ಎರಡು ಅಣ್ವಸ್ತ್ರ ಪರೀಕ್ಷೆ ನಡೆದಿವೆ. ಚೀನಾ ಕೂಡ ಅಣ್ವಸ್ತ್ರ ಪರೀಕ್ಷೆಗೆ ಹಾತೊರೆಯುತ್ತಿದೆ. ಅದೇ ರೀತಿ ಉತ್ತರ ಕೊರಿಯಾ ಮತ್ತು ಪಾಕಿಸ್ತಾನ ಕೂಡ ತನ್ನ ಬತ್ತಳಿಕೆಯಲ್ಲಿರುವ ಅಣ್ವಸ್ತ್ರಗಳನ್ನು ಸ್ವಚ್ಛಗೊಳಿಸುತ್ತಿದೆ. ಆದರೆ ಅಮೆರಿಕ ಹಾಗೆ ಮಾಡಿದರೆ ಎಲ್ಲರೂ ಏಕೆ ಪ್ರಶ್ನೆ ಮಾಡುತ್ತಾರೆ ಎಂಬುದು ತಿಳಿಯುತ್ತಿಲ್ಲ .
>
> -ಡೊನಾಲ್ಡ್ ಟ್ರಂಪ್, ಅಮೆರಿಕದ ಅಧ್ಯಕ್ಷ

**ಸ್ಫೋಟಕ ಹೇಳಿಕೆ**

ಜಗತ್ತಿನಲ್ಲಿ ಈಗ ಎಲ್ಲೆಡೆ ನೋಡಿದರೂ ಪರಮಾಣು ಶಸ್ತ್ರಾಸ್ತ್ರಗಳ ಸದ್ದು. ರಷ್ಯಾ ಕೇವಲ ಒಂದು ವಾರದಲ್ಲಿ ಎರಡು ಪರಮಾಣು ಅಸ್ತ್ರಗಳ ಪರೀಕ್ಷೆ ನಡೆಸಿದೆ. ಚೀನಾ ಕೂಡ ತನ್ನದೇ ಆದ ಪರಮಾಣು ಪರೀಕ್ಷೆ ಯೋಜನೆಯನ್ನು ಘೋಷಿಸಿದೆ. ಅದರಂತೆ ಅಮೆರಿಕ ಕೂಡ ಬರೋಬ್ಬರಿ 30 ವರ್ಷಗಳ ಬಳಿಕ ಪರಮಾಣು ಅಸ್ತ್ರ ಪರೀಕ್ಷೆಯ ಯೋಜನೆಯನ್ನು ಘೋಷಿಸಿದೆ. ಈ ಬಗ್ಗೆ ಮಾತನಾಡಿರುವ ಅಧ್ಯಕ್ಷ ಟ್ರಂಪ್, ಪಾಕಿಸ್ತಾನ ಕೂಡ ಪರಮಾಣು ಪರೀಕ್ಷೆ ನಡೆಸುತ್ತಿದೆ ಎಂದು ಸ್ಫೋಟಕ ಹೇಳಿಕೆ ನೀಡಿದ್ದಾರೆ.

## 3000 ಕೋಟಿ ರೂ. ಆಸ್ತಿ ಮುಟ್ಟುಗೋಲು ಹಾಕಿಕೊಂಡ ಇಡಿ


**ನವದೆಹಲಿ:** ರಿಲಯನ್ಸ್ ಗ್ರೂಪ್ ಅಧ್ಯಕ್ಷ ಅನಿಲ್ ಅಂಬಾನಿ ಅವರ ಕಂಪನಿಗಳ ವಿರುದ್ಧದ ಹಣ ವರ್ಗಾವಣೆ ತನಿಖೆಯ ಭಾಗವಾಗಿ ಜಾರಿ ನಿರ್ದೇಶನಾಲಯ ಅವರಿಗೆ ಸಂಬಂಧಿಸಿದ 3,000 ಕೋಟಿ ರೂ.ಗಳಿಗೂ ಹೆಚ್ಚಿನ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಂಡಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. 66 ವರ್ಷದ ಅಂಬಾನಿ ಅವರ ಮುಂಬೈನ ಪಾಲಿ ಹಿಲ್‌ನಲ್ಲಿರುವ ಮನೆ ಸೇರಿದಂತೆ ಅವರ ಗುಂಪಿನ ಕಂಪನಿಗಳ ಇತರ ವಸತಿ, ವಾಣಿಜ್ಯ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲು ಫೆಡರಲ್ ತನಿಖಾ ಸಂಸ್ಥೆ ಹಣ ವರ್ಗಾವಣೆ ತಡೆ ಕಾಯ್ದೆ ಅಡಿಯಲ್ಲಿ ನಾಲ್ಕು ತಾತ್ಕಾಲಿಕ ಆದೇಶಗಳನ್ನು ಹೊರಡಿಸಿದೆ.

ದೆಹಲಿಯ ಮಹಾರಾಜ ರಂಜಿತ್ ಸಿಂಗ್ ಮಾರ್ಗದಲ್ಲಿರುವ ರಿಲಯನ್ಸ್ ಸೆಂಟರ್‌ಗೆ ಸೇರಿದ ಭೂಮಿ, ರಾಷ್ಟ್ರ ರಾಜಧಾನಿ ನೋಯ್ಡಾ, ಗಾಜಿಯಾಬಾದ್, ಮುಂಬೈ, ಪುಣೆ, ಥಾಣೆ, ಹೈದರಾಬಾದ್, ಚೆನ್ನೈ, ಪೂರ್ವ ಗೋದಾವರಿಯಲ್ಲಿರುವ ಅನೇಕ ಇತರ ಆಸ್ತಿಗಳನ್ನು ಸಹ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ.

ಮೂಲಗಳ ಪ್ರಕಾರ, ಮುಟ್ಟುಗೋಲು ಹಾಕಿಕೊಂಡ ಆಸ್ತಿಗಳ ಒಟ್ಟು ಮೌಲ್ಯ 3,084 ಕೋಟಿ ರೂ.ಈ ಪ್ರಕರಣವು ರಿಲಯನ್ಸ್ ಹೋಮ್ ಫೈನಾನ್ಸ್ ಲಿಮಿಟೆಡ್, ರಿಲಯನ್ಸ್ ಕಮರ್ಷಿಯಲ್ ಫೈನಾನ್ಸ್ ಲಿಮಿಟೆಡ್ ಸಂಗ್ರಹಿಸಿದ ಸಾರ್ವಜನಿಕ ನಿಧಿಯ ಹಣ ವರ್ಗಾವಣೆ ಮತ್ತು ಅಕ್ರಮ ವರ್ಗಾವಣೆಗೆ ಸಂಬಂಧಿಸಿದೆ ಎಂದು ಆರೋಪಿಸಲಾಗಿದೆ. 2017-2019ರ ಅವಧಿಯಲ್ಲಿ, ಯೆಸ್ ಬ್ಯಾಂಕ್ ಸಾಧನಗಳಲ್ಲಿ 2,965 ಕೋಟಿ ರೂ.ಗಳನ್ನು ಮತ್ತು ಸಾಧನಗಳಲ್ಲಿ 2,045 ಕೋಟಿ ರೂ.ಗಳನ್ನು ಹೂಡಿಕೆ ಮಾಡಿದೆ.

ಇವು ಡಿಸೆಂಬರ್ 2019ರ ವೇಳೆಗೆ ನಿಷ್ಕ್ರಿಯ ಹೂಡಿಕೆಗಳಾಗಿ ಮಾರ್ಪಟ್ಟವು, ಇದರಿಂದ 1,353.50 ಕೋಟಿ ರೂ.ಗಳು ಮತ್ತು 1,984 ಕೋಟಿ ರೂ.ಗಳು ಬಾಕಿ ಉಳಿದಿವೆ ಎಂದು ತಿಳಿಸಿದೆ. ಅಂಬಾನಿ ವಿರುದ್ಧದ ಕ್ರಮವು ರಿಲಯನ್ಸ್ ಇನ್ಫ್ರಾಸ್ಟ್ರಕ್ಚರ್ ಸೇರಿದಂತೆ ಬಹು ಗುಂಪು ಕಂಪನಿಗಳು 17,000 ಕೋಟಿ ರೂ.ಗಳಿಗೂ ಹೆಚ್ಚು ಮೊತ್ತದ ಆರ್ಥಿಕ ಅಕ್ರಮಗಳು ಮತ್ತು ಸಾಮೂಹಿಕ ಸಾಲ ಮರುಪಾವತಿಗೆ ಸಂಬಂಧಿಸಿದೆ ಎಂದು ಆರೋಪಿಸಲಾಗಿದೆ.

ಈ ಪ್ರಕರಣದಲ್ಲಿ ಉದ್ಯಮಿಯನ್ನು ಆಗಸ್ಟ್‌ನಲ್ಲಿ ಪ್ರಶ್ನಿಸಿತು. ಜುಲೈ 24 ರಂದು ಮುಂಬೈನಲ್ಲಿ ಏಜೆನ್ಸಿಯು 50 ಕಂಪನಿಗಳ 35 ಆವರಣಗಳು, ಅವರ ವ್ಯವಹಾರ ಗುಂಪಿನ ಕಾರ್ಯನಿರ್ವಾಹಕರು ಸೇರಿದಂತೆ 25 ಜನರನ್ನು ಶೋಧಿಸಿದ ನಂತರ ಇದು ಸಂಭವಿಸಿದೆ.ಇಡಿಯ ಹಣ ವರ್ಗಾವಣೆ ಪ್ರಕರಣವು ಕೇಂದ್ರ ತನಿಖಾ ದಳದ ಎಫ್‌ಐಆರ್‌ನಿಂದ ಬಂದಿದೆ.



## ಹಿಂದೂ ಬಾಲಕಿಯ ಅಪಹರಣ
### ಮತಾಂತರ, ವೃದ್ಧನೊಂದಿಗೆ ಬಲವಂತದ ಮದುವೆ

**ಕರಾಚಿ:** ಅಪಹರಣಕ್ಕೊಳಗಾಗಿ, ಬಲವಂತದಿಂದ ಮತಾಂತರಗೊಂಡು ಮುಸ್ಲಿಂ ವ್ಯಕ್ತಿಯೊಂದಿಗೆ ಮದುವೆಯಾದ ಮೂರು ತಿಂಗಳ ನಂತರ ಸಿಂದ್ ನ್ಯಾಯಾಲಯದ ಆದೇಶದಂತೆ 15 ವರ್ಷದ ಬಾಲಕಿ ಮರಳಿ ಕುಟುಂಬವನ್ನು ಸೇರಿದ್ದಾಳೆ ಎಂದು ಹಿಂದೂ ಸಮುದಾಯದ ಮುಖಂಡರು ತಿಳಿಸಿದ್ದಾರೆ. ಕರಾಚಿಯಿಂದ 310 ಕಿ.ಮೀ. ದೂರದಲ್ಲಿರುವ ಉಮೆರ್‌ಕೋಟ್‌ನ ಆದೇಶದಂತೆ ಸುನೀತಾ ಕುಮಾರಿ ಮಹಾರಾಜ್ ಅವರು ತಮ್ಮ ಕುಟುಂಬವನ್ನು ಸೇರಿದ್ದಾರೆ.

ಈ ಕುರಿತು ಮಾಹಿತಿ ನೀಡಿರುವ ಹಿಂದೂ ಸಮುದಾಯದ ಮುಖಂಡ ಶಿವ ಕಾಚಿ, ಕುನ್ರಿ ಎಂಬ ಪ್ರದೇಶದಿಂದ ಸುನೀತಾ ಅವರನ್ನು ಅಪಹರಿಸಲಾಗಿತ್ತು. ನಂತರ ಅವರನ್ನು ಬಲವಂತದಿಂದ ಮತಾಂತರಗೊಳಿಸಲಾಗಿತ್ತು. ಮುಸ್ಲಿಂ ಸಮುದಾಯದ ವೃದ್ಧನೊಂದಿಗೆ ಮದುವೆಯನ್ನೂ ಮಾಡಿದ್ದರು.

ಇಂಥ ಬಹಳಷ್ಟು ಪ್ರಕರಣಗಳು ಪಾಕಿಸ್ತಾನದಲ್ಲಿ ನಡೆಯುತ್ತಿವೆ. ಆದರೆ ಸುನೀತಾ ಅವರಂಥ ಕೆಲವೇ ಕೆಲವು ಯುವತಿಯರು ಕುಟುಂಬವನ್ನು ಮರಳಿ ಸೇರುತ್ತಿದ್ದಾರೆ ಎಂದಿದ್ದಾರೆ. ಸುನೀತಾ ಪರ ವಕೀಲ ಚಂದ್ರ ಕೊಹ್ಲಿ ಅವರು ಮಾಹಿತಿ ನೀಡಿ, ಇದೊಂದು ವ್ಯವಸ್ಥಿತ ಅಪಹರಣ ಪ್ರಕರಣವಾಗಿದೆ. ಇಲ್ಲಿ ಮತಾಂತರ ಮತ್ತು ಮದುವೆಗೆ ಬಲವಂತ ಮಾಡಲಾಗಿದೆ. ಸಿಂದ್‌ನಲ್ಲಿ ನಿರಂತರವಾಗಿ ಹಿಂದೂ ಸಮುದಾಯವನ್ನು ಬೆದರಿಸಲಾಗುತ್ತಿದೆ. ಸುನೀತಾ ಪ್ರಕರಣದಲ್ಲಿ ಅವರ ಪಾಲಕರು ದೂರು ದಾಖಲಿಸಿದ್ದರು.

ಪಾಲಕರು ಮತ್ತು ಸಾಮಾಜಿಕ ಕಾರ್ಯಕರ್ತರು ಸೇರಿ ಆಕೆಯನ್ನು ಸುರಕ್ಷಿತ ನೆಲೆಗೆ ಸ್ಥಳಾಂತರಿಸುವಲ್ಲಿ ಯಶಸ್ವಿಯಾಗಿದ್ದರು. ನ್ಯಾಯಾಲಯವು ಹಲವು ಸುತ್ತಿನ ವಿಚಾರಣೆ ನಡೆಸಿತು. ಅಪಹರಣ ಮತ್ತು ಬಲವಂತದ ಮತಾಂತರ ಮತ್ತು ಮದುವೆಯನ್ನು ಆಕೆ ನ್ಯಾಯಾಲಯಕ್ಕೆ ತಿಳಿಸಿದಳು ಎಂದಿದ್ದಾರೆ.

## ಎನ್‌ಡಿಎ ಅಧಿಕಾರಕ್ಕೆ ಬಂದರೆ ರಕ್ಷಣಾ ಕಾರಿಡಾರ್ ಸ್ಥಾಪನೆ: ಅಮಿತ್ ಶಾ

**ಶಿವಹರ್:** ಬಿಹಾರದಲ್ಲಿ ಅಧಿಕಾರಕ್ಕೆ ಬಂದರೆ ರಕ್ಷಣಾ ಕಾರಿಡಾರ್ ಸ್ಥಾಪಿಸಲಿದ್ದೇವೆ. ಪ್ರತಿ ಜಿಲ್ಲೆಗಳಲ್ಲಿಯೂ ಕಾರ್ಖಾನೆಗಳನ್ನು ತೆರೆಯಲಾಗುವುದು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಸೋಮವಾರ ಭರವಸೆ ನೀಡಿದ್ದಾರೆ. ಶಿವಹರ್‌ನಲ್ಲಿ ಚುನಾವಣಾ ಸಮಾವೇಶ ಉದ್ದೇಶಿಸಿ ಮಾತನಾಡಿದ ಅಮಿತ್ ಶಾ, 'ಬಿಹಾರದಲ್ಲಿ ಎನ್‌ಡಿಎ ಸರ್ಕಾರ ಮತ್ತೆ ಅಧಿಕಾರಕ್ಕೆ ಬರಲಿದೆ. ಆರ್‌ಜೆಡಿ-ಕಾಂಗ್ರೆಸ್ ಮೈತ್ರಿಯು ನಿರ್ನಾಮವಾಗಲಿದೆ' ಎಂದು ಹೇಳಿದ್ದಾರೆ. 'ಬಿಹಾರ ರಾಜ್ಯವನ್ನು ಪ್ರವಾಹ ಮುಕ್ತಗೊಳಿಸಲು ಆಯೋಗವನ್ನು ರಚಿಸಲಾಗುವುದು' ಎಂದೂ ಅಮಿತ್ ಶಾ ಭರವಸೆ ನೀಡಿದ್ದಾರೆ. 'ನಾವು ರಕ್ಷಣಾ ಕಾರಿಡಾರ್ ಮಂಜೂರು ಮಾಡಲಿದ್ದೇವೆ. ಪ್ರತಿ ಜಿಲ್ಲೆಗಳಲ್ಲೂ ಕಾರ್ಖಾನೆಗಳನ್ನು ತೆರೆಯಲಾಗುವುದು. ಇದರ ಜೊತೆಗೆ ಎಂಎಸ್‌ಎಂಇ ಹಾಗೂ ಕೈಗಾರಿಕಾ ಪಾರ್ಕ್ ತೆರೆಯಲಾಗುವುದು ಎಂದಿದ್ದಾರೆ.

ಸೀತಾ ದೇಗುಲದ ಪ್ರತಿಷ್ಠಾಪನಾ ದಿನದಂದು ಸೀತಾಮರ್ಹಿಯಿಂದ ಅಯೋಧ್ಯೆಗೆ ವಂದೇ ಭಾರತ್ ರೈಲು ಸಂಚಾರವನ್ನು ಆರಂಭಿಸಲಿದ್ದೇವೆ ಎಂದು ಅವರು ಹೇಳಿದ್ದಾರೆ. ಪುನೌರಾ ಧಾಮದಲ್ಲಿ 850 ಕೋಟಿ ವೆಚ್ಚದಲ್ಲಿ ಸೀತಾ ದೇಗುಲಕ್ಕೆ ಶಿಲಾನ್ಯಾಸ ನೆರವೇರಿಸಿರುವುದಾಗಿ ಶಾ ತಿಳಿಸಿದ್ದಾರೆ.

5000 ಕೋಟಿ ವೆಚ್ಚದಲ್ಲಿ ಅಯೋಧ್ಯೆ -ಸೀತಾಮರ್ಹಿ ರೈಲು ಹಳಿಯನ್ನು ದ್ವಿಗುಣಗೊಳಿಸುವುದು' ಎಂದು ಅಮಿತ್ ಶಾ ಭರವಸೆ ನೀಡಿದ್ದಾರೆ. ರಾಜ್ಯದಲ್ಲಿ ವಿಮಾನ ನಿಲ್ದಾಣಗಳನ್ನು ವಿಶ್ವದರ್ಜೆಗೆ ಏರಿಸಲಾಗುವುದು. ಬಿಹಾರದ ಪ್ರತಿ ಜಿಲ್ಲೆಗಳಲ್ಲೂ ವೈದ್ಯಕೀಯ ಕಾಲೇಜು ತೆರೆಯಲಾಗುವುದು ಎಂದು ಹೇಳಿದ್ದಾರೆ.

## ಬಸ್-ಟ್ರಕ್ ನಡುವೆ ಭೀಕರ ರಸ್ತೆ ಅಪಘಾತ, 20 ಮಂದಿ ಸಾವು

**ರಂಗಾರೆಡ್ಡಿ:** ಜಲ್ಲಿಕಲ್ಲು ಸಾಗಿಸುತ್ತಿದ್ದ ಟಿಪ್ಪರ್ ಲಾರಿ, ಸಾರಿಗೆ ಬಸ್‌ಗೆ ಡಿಕ್ಕಿ ಹೊಡೆದ ಪರಿಣಾಮ ಬಸ್‌ನಲ್ಲಿದ್ದ 20 ಪ್ರಯಾಣಿಕರು ಸಾವನ್ನಪ್ಪಿರುವ ಘಟನೆ ಸೋಮವಾರ ಬೆಳಿಗ್ಗೆ ತೆಲಂಗಾಣಾದ ರಂಗಾರೆಡ್ಡಿ ಜಿಲ್ಲೆಯ ಚವೆಲ್ಲಾ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಡಿಕ್ಕಿಯ ರಭಸಕ್ಕೆ ಟಿಪ್ಪರ್ ಲಾರಿಯಲ್ಲಿದ್ದ ಜಲ್ಲಿಕಲ್ಲು ಬಸ್‌ನೊಳಗೆ ತುಂಬಿಕೊಂಡ ಪರಿಣಾಮ ಅದರಡಿ ಸಿಲುಕಿ 20 ಜನರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಘಟನೆಯಲ್ಲಿ 15 ಮಂದಿ ಗಾಯಗೊಂಡಿದ್ದು, ಹತ್ತಿರದ ಆಸ್ಪತ್ರೆಗಳಿಗೆ ದಾಖಲು ಮಾಡಲಾಗಿದೆ. ಈ ಪೈಕಿ ಕೆಲವರ ಸ್ಥಿತಿ ಗಂಭೀರವಾಗಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಅಪಘಾತದ ಸುದ್ದಿ ತಿಳಿದು ಸ್ಥಳಕ್ಕಾಗಮಿಸಿದ ಪೊಲೀಸರು ಸ್ಥಳೀಯರ ನೆರವಿನೊಂದಿಗೆ ಬಸ್‌ನೊಳಗೆ ಸಿಲುಕಿಕೊಂಡಿದ್ದ ಪ್ರಯಾಣಿಕರನ್ನು ಹರಸಾಹಸಪಟ್ಟು ಹೊರಗೆ ಕರೆತಂದಿದ್ದಾರೆ.

ವಿಕಾರಾಬಾದ್-ಹೈದರಾಬಾದ್ ಮಾರ್ಗದಲ್ಲಿ ಸೋಮವಾರ ಬೆಳಿಗ್ಗೆ 7.30ರ ಸುಮಾರಿಗೆ ದ್ವಿಚಕ್ರ ವಾಹನವನ್ನು ಹಿಂದಿಕ್ಕುವ ಪ್ರಯತ್ನದಲ್ಲಿ ಟಿಪ್ಪರ್ ಲಾರಿ ಅತಿವೇಗವಾಗಿ ಮುನ್ನುಗಿ ಬಸ್‌ಗೆ ಡಿಕ್ಕಿ ಹೊಡೆದ ಪರಿಣಾಮ ಈ ದುರಂತ ಸಂಭವಿಸಿದೆ. ಘಟನಾ ಸ್ಥಳಕ್ಕೆ ತೆಲಂಗಾಣ ಸಾರಿಗೆ ಸಚಿವ ಪೊನ್ನಂ ಪ್ರಭಾಕರ್ ಭೇಟಿ ನೀಡಿ ಅಪಘಾತದ ಕಾರಣದ ಬಗ್ಗೆ ಅವರು ತೆಲಂಗಾಣ ರಾಜ್ಯ ರಸ್ತೆ ಸಾರಿಗೆ ನಿಗಮ ವ್ಯವಸ್ಥಾಪಕ ನಿರ್ದೇಶಕ ವೈ.ನಾಗಿರೆಡ್ಡಿ ಅವರೊಂದಿಗೆ ಮಾತನಾಡಿದರು.ಅಧಿಕೃತ ಸಂವಹನದ ಪ್ರಕಾರ, ಜಲ್ಲಿ ತುಂಬಿದ ಟಿಪ್ಪರ್ ಲಾರಿ ತಪ್ಪು ಮಾರ್ಗದಿಂದ ಬಂದು ಬಸ್‌ಗೆ ಡಿಕ್ಕಿ ಹೊಡೆದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ತಾಂಡೂರು ಡಿಪೋಗೆ ಸೇರಿದ ಈ ಬಸ್ ಹೈದರಾಬಾದ್‌ಗೆ ತೆರಳುತ್ತಿತ್ತು. ಬಸ್‌ನಲ್ಲಿ ಸುಮಾರು 40 ಜನರು ಪ್ರಯಾಣಿಸುತ್ತಿದ್ದರು ಎಂದು ತಿಳಿದುಬಂದಿದೆ. ಮೃತರ ಬಗ್ಗೆ ಮಾಹಿತಿ ಕಲೆ ಹಾಕಲಾಗುತ್ತಿದೆ ಎಂದ ಹೇಳಿದರು. ಸಾವನ್ನಪ್ಪಿದವರಲ್ಲಿ ಆರ್‌ಟಿಸಿ ಬಸ್ ಚಾಲಕ ಮತ್ತು ಲಾರಿ ಚಾಲಕರು ಸೇರಿದ್ದಾರೆ. ಹಲವಾರು ಮಹಿಳೆಯರು ಮತ್ತು ಹತ್ತು ತಿಂಗಳ ಮಗು ಮತ್ತು ಅದರ ತಾಯಿ ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಗಾಯಾಳುಗಳಲ್ಲಿ ಕೆಲವರ ಸ್ಥಿತಿ ಚಿಂತಾಜನಕವಾಗಿರುವುದರಿಂದ ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.ಪ್ರಾಥಮಿಕ ವರದಿಗಳ ಪ್ರಕಾರ ತಾಂಡೂರಿನಿಂದ ಹೈದರಾಬಾದ್‌ಗೆ ಆರ್‌ಟಿಸಿ ಬಸ್ ಹೋಗುತ್ತಿತ್ತು ಇದರಲ್ಲಿ ಬಹುತೇಕ ವಿದ್ಯಾರ್ಥಿಗಳು ಮತ್ತು ಕಚೇರಿಗೆ ಹೋಗುವವರು ವಾರಾಂತ್ಯದ ನಂತರ ನಗರಕ್ಕೆ ಮರಳುತ್ತಿದ್ದರು.

ಅನೇಕ ವಿದ್ಯಾರ್ಥಿಗಳು ಹೈದರಾಬಾದ್‌ನ ವಿವಿಧ ಕಾಲೇಜುಗಳಲ್ಲಿ ಓದುತ್ತಿದ್ದರು ಭಾನುವಾರ ರಜೆಯ ಕಾರಣ ತಮ್ಮ ಮನೆಗೆ ಭೇಟಿ ನೀಡಿ ಹಿಂತಿರುಗುತ್ತಿದ್ದರು.ಅಪಘಾತದಿಂದಾಗಿ ಹೈದರಾಬಾದ್-ಬಿಜಾಪುರ ಹೆದ್ದಾರಿಯಲ್ಲಿ ವಾಹನಗಳ ಸಂಚಾರ ಸ್ಥಗಿತಗೊಂಡಿತ್ತು ಚವೆಲ್ಲಾ-ವಿಕಾರಾಬಾದ್ ಮಾರ್ಗದಲ್ಲಿ ವಾಹನಗಳ ಸಾಲುಗಳು ಕಿಲೋ ಮೀಟರ್‌ನಷ್ಟು ನಿಂತಿದ್ದು ಕಂಡುಬಂತು. ತುರ್ತು ತಂಡಗಳು ಸ್ಥಳಕ್ಕೆ ಧಾವಿಸಿ ಮೂರು ಜೆಸಿಬಿ ಯಂತ್ರಗಳನ್ನು ಬಳಸಿ ಅವಶೇಷಗಳನ್ನು ತೆಗೆದು, ಒಳಗೆ ಸಿಲುಕಿರುವವರನ್ನು ಹೊರತೆಗೆಯಲು ರಕ್ಷಣಾ ಕಾರ್ಯಾಚರಣೆ ಪ್ರಾರಂಭಿಸಿವೆ.

**ಪರಿಹಾರ:** ಪ್ರಧಾನಿ ನರೇಂದ್ರ ಮೋದಿ ಅವರು ಅಪಘಾತದ ಬಗ್ಗೆ ದಿಗ್ಭ್ರಮೆ ವ್ಯಕ್ತಪಡಿಸಿದ್ದಾರೆ. ಮೃತರ ಕುಟುಂಬಕ್ಕೆ ತಲಾ 2 ಲಕ್ಷ ಹಾಗೂ ಗಂಭೀರ ಗಾಯಾಳುಗಳಿಗೆ 50 ಸಾವಿರ ರೂ ಪರಿಹಾರ ಘೋಷಿಸಿದ್ದಾರೆ.



## ಮಿನಿ ನ್ಯೂಸ್

### ಅಫ್ಘಾನಿಸ್ತಾನದಲ್ಲಿ 6.3 ತೀವ್ರತೆಯ ಭೂಕಂಪ: 20 ಮಂದಿ ಸಾವು

**ಕಾಬೂಲ್:** ಅಫ್ಘಾನಿಸ್ತಾನದಲ್ಲಿ ಮಧ್ಯರಾತ್ರಿ 6.3 ತೀವ್ರತೆಯ ಭೂಕಂಪನ ಸಂಭವಿಸಿದ್ದು ಸುಮಾರು 20 ಮಂದಿ ಸಾವನ್ನಪ್ಪಿ,320ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಸ್ಥಳೀಯ ಕಾಲಮಾನ ಮಧ್ಯರಾತ್ರಿ 1 ಗಂಟೆಗೆ ಭೂಕಂಪದ ಸಂಭವಿಸಿದೆ ಎಂದು ಅಮೆರಿಕದ ಜಿಯೋಲಾಜಿಕಲ್ ಸರ್ವೆ ಹೇಳಿದೆ. ಅಫ್ಘಾನಿಸ್ತಾನದ ರಾಷ್ಟ್ರೀಯ ವಿಪತ್ತು ನಿರ್ವಹಣಾ ಸಂಸ್ಥೆಯು ಸಾವುನೋವುಗಳು ಮತ್ತು ಹಾನಿಗಳ ಮೌಲ್ಯಮಾಪನಗಳನ್ನು ನಂತರ ಮಾಹಿತಿ ಹಂಚಿಕೊಳ್ಳಲಾಗುವುದು ಎಂದು ಹೇಳಿದೆ. ಸಾಮಾಜಿಕ ಮಾಧ್ಯಮದ ವಿಡಿಯೋದಿಂದ ಪಡೆದ ಚಿತ್ರದಲ್ಲಿ ಅಫ್ಘಾನಿಸ್ತಾನದ ಮಜರ್ ಇ ಷರೀಫ್‌ನಲ್ಲಿ ಭೂಕಂಪದ ನಂತರ ಬ್ಲೂ ಮಸೀದಿ, ಕಟ್ಟಡಗಳು ಕುಸಿದಿದೆ. ಅಫ್ಘಾನಿಸ್ತಾನದ ಅತಿದೊಡ್ಡ ನಗರ ಭೂಕಂಪನದಿಂದ ತತ್ತರಿಸಿದ್ದು ಭೂಕಂಪನದ ಕೇಮದ್ರ ಬಿಂದು ಖುಲ್ ಪಟ್ಟಣದ ಬಳಿ ಪತ್ತೆಯಾಗಿದೆ ಭೂಮಿಯ 23 ಕಿಲೋಮೀಟರ್ ಆಳದಲ್ಲಿ ಕಂಪನ ಸಂಭವಿಸಿದೆ ಎಂದು ರಾಷ್ಟ್ರೀಯ ಭೂಕಂಪಶಾಸ್ತ್ರ ಕೇಂದ್ರ ತಿಳಿಸಿದೆ.

### ಹೆದ್ದಾರಿಯಲ್ಲಿ ಕಾರು-ಬಸ್ ನಡುವೆ ಅಪಘಾತ, ಮೂವರ ಸಾವು

**ಚಿತ್ರಕೂಟ:** ಉತ್ತರ ಪ್ರದೇಶದ ಝೂನ್ಸಿ-ಮಿರ್ಜಾಪುರ ರಾಷ್ಟ್ರೀಯ ಹೆದ್ದಾರಿಯಲ್ಲಿ ಕಾರು ಹಾಗು ಸಾರಿಗೆ ಬಸ್ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ ಮೂವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಖೋಖ್ ಗ್ರಾಮದ ಬಳಿ ಉತ್ತರ ಪ್ರದೇಶ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ವೊಂದು ಕಾರಿಗೆ ಡಿಕ್ಕಿ ಹೊಡೆದಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣ್ ಕುಮಾರ್ ಸಿಂಗ್ ತಿಳಿಸಿದ್ದಾರೆ.

ಮೃತರನ್ನು ಕಾರಿನಲ್ಲಿದ್ದ ಗರ್ಹಿವಾದ ಮಜ್ರಾ ಕ್ಯಾಂಪ್‌ಕಾ ಪೂರ್ವಾ ಗ್ರಾಮದ ನಿವಾಸಿಗಳಾದ ಮೋಹಿತ್ (14), ಅವರ ಸಹೋದರ ಸುಭಾಷ್ (6), ಅವರ ಸೋದರಸಂಬಂಧಿ ರೋಹಿತ್ (24) ಎಂದು ಗುರುತಿಸಲಾಗಿದೆ. ಘಟನೆಯಲ್ಲಿ ಶೋಭಾ ದೇವಿ (35), ಅಭಿಲಾಷಾ (15), ಸಂಧ್ಯಾ (8), ಓಂಕಾರ್(10), ರಾಜಾ ಭಯ್ಯಾ (36) ಗಾಯಗೊಂಡಿದ್ದಾರೆ. ಅವರನ್ನು ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಯಿತು, ನಂತರ ಹೆಚ್ಚಿನ ಚಿಕಿತ್ಸೆಗಾಗಿ ಪ್ರಯಾಗರಾಜ್‌ನ ಸ್ವರೂಪ್ ರಾಣಿ ಆಸ್ಪತ್ರೆಗೆ ಕರೆದೊಯ್ಯಲಾಯಿತು ಎಂದು ಎಸ್‌ಪಿ ಹೇಳಿದರು. ಪೊಲೀಸರ ಪ್ರಕಾರ, ರಾಜಾ ಭಯ್ಯಾ, ಅವರ ಕುಟುಂಬ ಐಂಚ್ವಾರಾ ಗ್ರಾಮದಲ್ಲಿರುವ ಅವರ ಅತ್ತೆಯ ಮನೆಯಲ್ಲಿ ಹುಟ್ಟುಹಬ್ಬದ ಆಚರಣೆಯಲ್ಲಿ ಭಾಗವಹಿಸಿ ಮನೆಗೆ ಹಿಂತಿರುಗುತ್ತಿದ್ದಾಗ ಅಪಘಾತ ಸಂಭವಿಸಿದೆ. ಎರಡೂ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ, ಶವಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ ಎಂದು ಸಿಂಗ್ ಹೇಳಿದರು.

### ನಿವಾಸಕ್ಕೆ ನುಗ್ಗಿ ಟಿಎಂಸಿ ಶಾಸಕನ ಮೇಲೆ ಹಲ್ಲೆ, ಆರೋಪಿ ಬಂಧನ

**ಕೋಲ್ಕತ್ತಾ:** ನಿವಾಸಕ್ಕೆ ನುಗ್ಗಿ ಪಶ್ಚಿಮ ಬಂಗಾಳದ ಮಾಜಿ ಸಚಿವ ಹಾಗು ಹಬ್ರಾ ಕ್ಷೇತದ ತೃಣಮೂಲ ಕಾಂಗ್ರೆಸ್ ಶಾಸಕ ಜ್ಯೋತಿಪ್ರಿಯೋ ಮಲ್ಲಿಕ್ ಅವರ ಮೇಲೆ ಯುವಕನೊಬ್ಬ ಹಲ್ಲೆ ನಡೆಸಿದ್ದಾನೆ. ಕಳೆದ ರಾತ್ರಿ 9 ಗಂಟೆ ಸುಮಾರಿಗೆ ಆರೋಪಿ ಶಾಸಕರ ನಿವಾಸಕ್ಕೆ ನುಗ್ಗಿ ಇದ್ದಕ್ಕಿದ್ದಂತೆ ಶಾಸಕರ ಮೇಲೆ ದಾಳಿ ಮಾಡಿ ಹೊಟ್ಟೆಯ ಕೆಳಭಾಗಕ್ಕೆ ಗುದ್ದಿದ್ದಾನೆ. ಏಕಾಏಕಿ ಹಲ್ಲೆಯಿಂದ ಮಲ್ಲಿಕ್ ದಿಗ್ಭ್ರಮೆಗೊಂಡ ಕಿರುಚಿಕೊಂಡಿದ್ದಾರೆ. ಗಲಾಟೆ ಸದಸು ಕೇಲುತ್ತಿದ್ದಂಭದ್ರತಾ ಸಿಬ್ಬಂದಿ ಧಾವಿಸಿ ಯುವಕನನ್ನು ತಡೆದಿದ್ದಾರೆ. ನಂತರ ಅತನನ್ನು ಬಿಧಾನ್ನಗರ ಪೊಲೀಸರಿಗೆ ಹಸ್ತಾಂತರಿಸಲಾಗಿದೆ.ಆರೋಪಿ ಉತ್ತರ 24 ಪರಗಣ ಜಿಲ್ಲೆಯ ಶಾಸಕರು ಪ್ರತಿನಿಧಿಸುವ ಹಬ್ರಾ ಪ್ರದೇಶದ ನಿವಾಸಿಯಾಗಿದ್ದು, ಕೆಲಸ ಕೇಳಲು ಬಂದಿರುವುದಾಗಿ ಹೇಳಿದ್ದಾನೆ.

ನಗರದ ಸರ್ಕಾರಿ ಆಸ್ಪತ್ರೆಯಲ್ಲಿ ಮನೋವೈದ್ಯಕೀಯ ಚಿಕಿತ್ಸೆ ಪಡೆಯುತ್ತಿದ್ದರು ಮತ್ತು ಹಿಂದಿನ ದಿನ ಮಲ್ಲಿಕ್ ಅವರ ಮನೆಯ ಸುತ್ತ ಓಡಾಡುತ್ತಿದ್ದ ಎಂದು ಪೊಲೀಸರು ತಿಳಿಸಿದ್ದಾರೆ. ಯುವಕ ಇತರ ಸಂದರ್ಶಕರಂತೆ ಅವರನ್ನು ಭೇಟಿಯಾಗಲು ಬಯಸುತ್ತಿದ್ದಾರೆ ಎಂದು ಭಾವಿಸಿ,ಆದರೆ ಇದ್ದಕ್ಕಿದ್ದಂತೆ ಮುಂದಕ್ಕೆ ಹಾರಿ ಹೊಡೆದಾಗ ಆಶ್ಚರ್ಯಚಕಿತನಾದೆ ಎಂದು ಶಾಸಕರು ಹೇಳಿದ್ದಾರೆ.

### ಮೋದಿ, ಅಮಿತ್ ಶಾ, ಯೋಗಿ ವಿರುದ್ಧ ಆಕ್ಷೇಪಾರ್ಹ ಪೋಸ್ಟ್ ಮಾಡಿದ್ದವ ಬಂಧನ

**ಲಕ್ನೊ:** ಪ್ರಧಾನಿ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಸಿಎಂ ಯೋಗಿ ಆದಿತ್ಯನಾಥ್ ಅವರ ವಿರುದ್ಧ ಸಾಮಾಜಿಕ ಜಾಲತಾಣಗಳಲ್ಲಿ ಆಕ್ಷೇಪಾರ್ಹ ಪೋಸ್ಟ್ ಮಾಡಿದ್ದ ವ್ಯಕ್ತಿ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಪೊಲೀಸರ ಪ್ರಕಾರ, ಈ ಮೂವರು ನಾಯಕರ ಚಿತ್ರಗಳು ಮತ್ತು ಅಶ್ಲೀಲ ಹಾಡನ್ನು ಹೊಂದಿರುವ ಪೋಸ್ಟ್ ನವೆಂಬರ್ 1 ರಂದು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಆ ಪ್ರದೇಶದಲ್ಲಿ ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಯಿತು.

ಚಕ್ಜೀತ್ ರಾಯ್ ಗ್ರಾಮದ ಗ್ರಾಮ ಕಾವಲುಗಾರ ಜೈಪಾಲ್ ಗೌತಮ್ ಸಲ್ಲಿಸಿದ ದೂರಿನ ಆಧಾರದ ಮೇಲೆ ಸೂರ್ಯವಾನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಇನ್ಸ್‌ಪೆಕ್ಟರ್ ಅಜಿತ್ ಕುಮಾರ್ ಶ್ರೀವಾಸ್ತವ ತಿಳಿಸಿದ್ದಾರೆ. ಪೊಲೀಸರು ಉಳಿದ ಆರೋಪಿಗಳಿಗಾಗಿ ಹುಡುಕಾಟ ಆರಂಭಿಸಿದ್ದಾರೆ ಮತ್ತು ಮುಂದಿನ ಕಾನೂನು ಕ್ರಮಗಳು ನಡೆಯುತ್ತಿವೆ ಎಂದು ಶ್ರೀವಾಸ್ತವ ಹೇಳಿದರು.

# ಎನ್‌ಡಿಎ ಟಿಕೆಟ್ ಯಾರಿಗೆ ಹೆಚ್ಚು? ಹಿಂದಿದೆ ಈ ಲೆಕ್ಕಾಚಾರ

## 30 ಕ್ಕೂ ಹೆಚ್ಚು ಅಭ್ಯರ್ಥಿಗಳನ್ನು ಎನ್‌ಡಿಎ ರಜಪೂತರು, ನೋನಿಯಾಸ್, ನಿಷಾದ್ಸ್, ಧನುಕ್ಸ್‌ನಂತಹ ಸಮುದಾಯಗಳಿಂದ ಕಣಕ್ಕಿಳಿಸಿದೆ

**ಹೊಸದಿಲ್ಲಿ :** ಎನ್‌ಡಿಎ ಮೈತ್ರಿಕೂಟವು ಬಿಹಾರದಲ್ಲಿ ರಜಪೂತರು ಮತ್ತು ಅತಿ ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಹೆಚ್ಚಿನ ಟಿಕೆಟ್‌ಗಳನ್ನು ನೀಡಿದೆ. ಈ ಮೇಲ್ವರ್ಗ, ಕೆಳವರ್ಗದ ಸಂಯೋಜನೆಯು ಹಿಂದಿನ ಚುನಾವಣೆಯಂತೆ ಈ ಬಾರಿಯೂ ಫಲ ನೀಡಲಿದೆ ಎಂದು ಮೈತ್ರಿಕೂಟ ವಿಶ್ವಾಸ ಹೊಂದಿದೆ. 243 ಕ್ಷೇತ್ರಗಳ ಪೈಕಿ 30 ಕ್ಕೂ ಹೆಚ್ಚು ಅಭ್ಯರ್ಥಿಗಳನ್ನು ಎನ್‌ಡಿಎ ರಜಪೂತರು ಅಥವಾ ನೋನಿಯಾಸ್, ನಿಷಾದ್ಸ್, ಧನುಕ್ಸ್‌ನಂತಹ ಸಮುದಾಯಗಳಿಂದ ಕಣಕ್ಕಿಳಿಸಿದೆ. ಇದರ ಜೊತೆಗೆ, ಸುಮಾರು 12 ಬ್ರಾಹ್ಮಣರು, 25 ಭೂಮಿಹಾರ್‌ಗಳು, 20 ವೈಶ್ಯರು, 20 ಕೋರಿ ಒಬಿಸಿ ಸಮುದಾಯದವರು ಮತ್ತು 15 ಯಾದವರು ಕೂಡ ಅಭ್ಯರ್ಥಿಗಳ ಪಟ್ಟಿಯಲ್ಲಿದ್ದಾರೆ. ಯಾದವರು, ಮುಸ್ಲಿಮರೊಂದಿಗೆ ಆರ್‌ಜೆಡಿ ಪಕ್ಷದ ಪ್ರಮುಖ ಮತದಾರರಾಗಿದ್ದಾರೆ. ಎನ್‌ಡಿಎ ಕೇವಲ 5 ಮುಸ್ಲಿಂ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಅದರಲ್ಲಿ 4 ಜೆಡಿಯು ಪಕ್ಷದಿಂದ ಮತ್ತು 1 ಎಲ್‌ಜೆಪಿ ಪಕ್ಷದಿಂದ. ಬಿಜೆಪಿ ಮತ್ತು ಜೆಡಿಯು ತಲಾ 101 ಕ್ಷೇತ್ರಗಳಲ್ಲಿ ಸ್ಪರ್ಧಿಸುತ್ತಿವೆ.

**ಮಹಿಳಾ-ಕೇಂದ್ರಿತ ಯೋಜನೆಗಳಿಗೆ ಒತ್ತು:** ಮಹಿಳಾ ಕೇಂದ್ರಿತ ಯೋಜನೆಗಳಿಗೆ ಒತ್ತು ನೀಡುತ್ತಿರುವ ನಿತೀಶ್ ಕುಮಾರ್ ಸರ್ಕಾರ, ಚುನಾವಣೆಗೆ ಮುನ್ನ 1.2 ಕೋಟಿ ಮಹಿಳೆಯರ ಖಾತೆಗೆ 10,000 ರೂಪಾಯಿಗಳನ್ನು ಜಮಾ ಮಾಡಿದೆ. ಇದು ಮಹಿಳಾ ಮತದಾರರನ್ನು ಸೆಳೆಯುವ ಪ್ರಯತ್ನವಾಗಿದೆ. ಆದರೂ, ಒಟ್ಟು 243 ಟಿಕೆಟ್‌ಗಳಲ್ಲಿ ಕೇವಲ 15% ಕ್ಕಿಂತ ಕಡಿಮೆ (36) ಮಹಿಳೆಯರಿಗೆ ನೀಡಲಾಗಿದೆ. ಜೆಡಿಯು ಮತ್ತು ಬಿಜೆಪಿ ತಲಾ 14 ಮತ್ತು 13 ಮಹಿಳಾ ಅಭ್ಯರ್ಥಿಗಳನ್ನು ಕಣಕ್ಕಿಳಿಸಿವೆ. ಎಲ್‌ಜೆಪಿ 6, ಎಚ್‌ಎಎಂ 2, ಆರ್ ಎಲ್‌ಎಂ 1 ಮಹಿಳಾ ಅಭ್ಯರ್ಥಿಯನ್ನು ಹೊಂದಿದೆ. ಮಹಿಳಾ ಮತದಾರರ ಮೇಲೆ ಗಮನಹರಿಸಿದರೂ, ಟಿಕೆಟ್ ಹಂಚಿಕೆಯಲ್ಲಿ ಮಹಿಳೆಯರ ಸಂಖ್ಯೆ ಕಡಿಮೆ ಇರುವುದು ಗಮನಾರ್ಹ. ನವೆಂಬರ್ 6 ರಂದು ನಡೆಯಲಿರುವ ಬಿಹಾರ ಚುನಾವಣೆಯ ಮೊದಲ ಹಂತದ 121 ಕ್ಷೇತ್ರಗಳ ಅಭ್ಯರ್ಥಿಗಳ ಕುರಿತು ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ ನಡೆಸಿದ ವಿಶ್ಲೇಷಣೆಯ ಪ್ರಕಾರ, ಜೆಡಿಯು ಅಭ್ಯರ್ಥಿಗಳಲ್ಲಿ 39% (57 ರಲ್ಲಿ 22), ಬಿಜೆಪಿ ಅಭ್ಯರ್ಥಿಗಳಲ್ಲಿ 65% (48 ರಲ್ಲಿ 31) ಮತ್ತು ಎಲ್‌ಜೆಪಿ ಅಭ್ಯರ್ಥಿಗಳಲ್ಲಿ 45% (29 ರಲ್ಲಿ 13) ಜನ ಕ್ರಿಮಿನಲ್ ಪ್ರಕರಣಗಳನ್ನು ಎದುರಿಸುತ್ತಿದ್ದಾರೆ.



**ಈ ಬಾರಿಯೂ ಫಲ ನೀಡಲಿದೆ**

**ಎನ್‌ಡಿಎ ಅಭ್ಯರ್ಥಿಗಳ ಶೈಕ್ಷಣಿಕ ಅರ್ಹತೆ**

ಎನ್‌ಡಿಎ ಅಭ್ಯರ್ಥಿಗಳ ಶೈಕ್ಷಣಿಕ ಅರ್ಹತೆಗಳ ಬಗ್ಗೆ ಹೇಳುವುದಾದರೆ, ಸುಮಾರು 60 ಮಂದಿ (24.7%) ಪದವೀಧರರಾಗಿದ್ದಾರೆ. 50 ಮಂದಿ (20.5%) ಇಂಟರ್ಮೀಡಿಯೇಟ್ ಅಥವಾ ತತ್ಸಮಾನ ಶಿಕ್ಷಣ ಪಡೆದಿದ್ದಾರೆ. 30ಕ್ಕೂ ಹೆಚ್ಚು ಮಂದಿ ಸ್ನಾತಕೋತ್ತರ ಪದವೀಧರರಾಗಿದ್ದಾರೆ. 17 ಮಂದಿ 10ನೇ ತರಗತಿ ಪಾಸಾಗಿದ್ದಾರೆ. 12 ಮಂದಿ ಕಾನೂನು ಪದವೀಧರರು, 15 ಮಂದಿ ಪಿಎಚ್‌ಡಿ ಪದವೀಧರರು, 5 ಮಂದಿ ಎಂಬಿಎ ಪದವೀಧರರು, ಇಬ್ಬರು ಡಿ. ಲಿಟ್, ಇಬ್ಬರು ಎಂಬಿಬಿಎಸ್ ಪದವೀಧರರಾಗಿದ್ದಾರೆ.

**ವಂಶಪಾರಂಪರ್ಯ ರಾಜಕಾರಣದ ಟೀಕೆ**

ಎನ್‌ಡಿಎ ಮೈತ್ರಿಕೂಟವು ಆರ್‌ಜೆಡಿ ನಾಯಕ ತೇಜಸ್ವಿ ಯಾದವ್‌ರವರನ್ನು ಲಾಲು ಪ್ರಸಾದ್ ಯಾದವ್‌ರವರ 'ವಂಶಪಾರಂಪರ್ಯ' ರಾಜಕಾರಣದ ಮುಂದುವರಿಕೆ ಎಂದು ಟೀಕಿಸುತ್ತಿದೆ. ಆದರೆ, ಎನ್‌ಡಿಎ ಅಭ್ಯರ್ಥಿಗಳ ಪಟ್ಟಿಯಲ್ಲಿ ಸುಮಾರು 10% (24 ಜನ) 'ವಂಶಪಾರಂಪರ್ಯ' ರಾಜಕಾರಣಿಗಳು ಇದ್ದಾರೆ. ಇವರು ಪ್ರಮುಖ ಮತ್ತು ಜನಪ್ರಿಯ ನಾಯಕರ ಉತ್ತರಾಧಿಕಾರಿಗಳಾಗಿದ್ದಾರೆ. ಉದಾಹರಣೆಗೆ, ಎಲ್‌ಜೆಪಿ ಮುಖ್ಯಸ್ಥ ಚಿರಾಗ್ ಪಾಸ್ವಾನ್ ಅವರ ಸೋದರಳಿಯ ಸಿಮಂತ್ ಮೃಣಾಲ್ ಅವರು ಗರ್ಖಾ ಕ್ಷೇತ್ರದಿಂದ ಸ್ಪರ್ಧಿಸುತ್ತಿದ್ದಾರೆ. ಜಿತನ್ ರಾಮ್ ಮಾಂಝಿ ಅವರ ಸೊಸೆ ದೀಪಾ ಕುಮಾರಿ, ಇಮಾಮ್‌ಗಂಜ್‌ನ ಪ್ರಸ್ತುತ ಶಾಸಕಿ, ಅವರನ್ನು ಅದೇ ಕ್ಷೇತ್ರದಿಂದ ಪುನಃ ಕಣಕ್ಕಿಳಿಸಲಾಗಿದೆ. ಬಿಜೆಪಿಯ ರಾಮಾ ನಿಶಾದ್, ಮಾಜಿ ಮುಜಾಫರ್‌ಪುರ ಸಂಸದ ಅಜಯ್ ನಿಶಾದ್ ಅವರ ಪತ್ನಿ ಮತ್ತು ಪ್ರಮುಖ ನಿಶಾದ್ ನಾಯಕ ಜೈ ನಾರಾಯಣ್ ಪ್ರಸಾದ್ ನಿಶಾದ್ ಅವರ ಸೊಸೆ, ಔರೈ ಕ್ಷೇತ್ರದಿಂದ ಸ್ಪರ್ಧಿಸುತ್ತಿದ್ದಾರೆ.

**ದಶಕಗಳ ಕಾಯುವಿಕೆಯ ನಂತರ ಭಾರತ ವನಿತಾ ಪಡೆ ಕೊನೆಗೂ ಇತಿಹಾಸ ನಿರ್ಮಿಸಿದೆ. ನವಿ ಮುಂಬೈನ ಡಿವೈ ಪಾಟೀಲ್ ಕ್ರೀಡಾಂಗಣದಲ್ಲಿ ದಕ್ಷಿಣ ಆಫ್ರಿಕಾವನ್ನು ಸೋಲಿಸುವ ಮೂಲಕ ಟೀಂ ಇಂಡಿಯಾ ಐಸಿಸಿ ಏಕದಿನ ವಿಶ್ವಕಪ್ 2025 ರ ಟ್ರೋಫಿಯನ್ನು ಎತ್ತಿಹಿಡಿದಿದೆ. ಮೊದಲು ಬ್ಯಾಟ್ ಮಾಡಿದ ಟೀಂ ಇಂಡಿಯಾ, ದಕ್ಷಿಣ ಆಫ್ರಿಕಾಕ್ಕೆ ಗೆಲ್ಲಲು 299 ರನ್‌ಗಳ ಗುರಿಯನ್ನು ನೀಡಿತ್ತು. ಈ ಗುರಿ ಬೆನ್ನಟ್ಟಿದ ಆಫ್ರಿಕಾ ತಂಡವನ್ನು ಟೀಂ ಇಂಡಿಯಾದ ಬೌಲರ್‌ಗಳು 45.2 ಓವರ್‌ಗಳಲ್ಲಿ 246 ರನ್‌ಗಳಿಗೆ ಆಲೌಟ್ ಮಾಡಿ ತಂಡಕ್ಕೆ 52 ರನ್‌ಗಳ ಗೆಲುವು ತಂದುಕೊಟ್ಟರು. ಭಾರತ ಇದಕ್ಕೂ ಮೊದಲು 2005 ಮತ್ತು 2017 ರಲ್ಲಿ ವಿಶ್ವಕಪ್ ಫೈನಲ್ ಆಡಿತ್ತು. ಆದರೆ ಗೆಲುವು ಸಾಧಿಸಲು ಸಾಧ್ಯವಾಗಿರಲಿಲ್ಲ. ಆದರೆ ಈ ಬಾರಿ ತನ್ನ ಕನಸನ್ನು ನನಸು ಮಾಡಿಕೊಂಡಿರುವ ಟೀಂ ಇಂಡಿಯಾ ಪಂದ್ಯವನ್ನು ಗೆಲ್ಲುತ್ತಿದ್ದಂತೆ ಸಂಭ್ರಮದಲ್ಲಿ ಮಿಂದೆತ್ತಿತ್ತು. ತಂಡದ ಎಲ್ಲಾ ಆಟಗಾರ್ತಿಯರು ಮೈದಾನದಲ್ಲಿ ಆನಂದಭಾಷ್ಪ ಹರಿಸಿದರು.**

# ಚೊಚ್ಚಲ ವಿಶ್ವಕಪ್ ಗೆದ್ದ ವೀರ ವನಿತೆಯರು...



ನವಿ ಮುಂಬೈನ ಡಿ.ವೈ ಪಾಟೀಲ್ ಸ್ಟೇಡಿಯಂನಲ್ಲಿ ನಡೆದ ಫೈನಲ್ ಹಣಾಹಣಿಯಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಭಾರತ 52 ರನ್ ಗಳ ಅಂತರದ ಜಯ ದಾಖಲಿಸಿ ತನ್ನ ಚೊಚ್ಚಲ ವಿಶ್ವಕಪ್ ಜಯಿಸಿದೆ. ಮಹಿಳಾ ಏಕದಿನ ವಿಶ್ವಕಪ್‌ನಲ್ಲಿ ಫೈನಲ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡವನ್ನು ಮಣಿಸಿದ ಟೀಮ್ ಇಂಡಿಯಾ ಚಾಂಪಿಯನ್ ಪಟ್ಟ ಅಲಂಕರಿಸಿದ್ದು, ಈ ಪಂದ್ಯದ ದಿಕ್ಕನ್ನೇ ಬದಲಿಸಿದ ಆ ಒಂದು ಅಲ್ಟಿಮೇಟ್ 'ಕ್ಯಾಚ್'ಗೆ ಇದೀಗ ಜಗತ್ತಿನೆಲ್ಲೆಡೆ ವ್ಯಾಪಕ ಪ್ರಶಂಸೆ ವ್ಯಕ್ತವಾಗುತ್ತಿದೆ....

ಹೌದು ಕಣ್ರೀ, ನವಿ ಮುಂಬೈನ ಡಿ.ವೈ ಪಾಟೀಲ್ ಸ್ಟೇಡಿಯಂನಲ್ಲಿ ನಡೆದ ಫೈನಲ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಭಾರತ 52 ರನ್ ಗಳ ಅಂತರದ ಜಯ ದಾಖಲಿಸಿ ವಿಶ್ವಕಪ್ ಗೆದ್ದುಕೊಂಡಿದೆ. ಈ ಪಂದ್ಯದಲ್ಲಿ ಟಾಸ್ ಗೆದ್ದ ಸೌತ್ ಆಫ್ರಿಕಾ ಕ್ಯಾಪ್ಟನ್ ಫೀಲ್ಡಿಂಗ್ ಆಯ್ದುಕೊಂಡರು. ಸೊ,ಇಂಡಿಯಾ ಬ್ಯಾಟಿಂಗ್‌ಗೆ ನಿಂತಿತು. ಅದರಂತೆ ಮೊದಲು ಬ್ಯಾಟ್ ಮಾಡಿದ ಭಾರತ ತಂಡವು 50 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು 298 ರನ್ ಕಲೆಹಾಕಿತು. ಈ ಬೃಹತ್ ಮೊತ್ತವನ್ನು ಬೆನ್ನಟ್ಟಿದ ಸೌತ್ ಆಫ್ರಿಕಾ ತಂಡ 45.3 ಓವರ್ ನಲ್ಲಿ 246 ರನ್ ಗಳಿಗೇ ತನ್ನೆಲ್ಲಾ ವಿಕೆಟ್ ಕಳೆದುಕೊಂಡ ಪರಿಣಾಮ ಭಾರತ 52 ರನ್ ಗಳ ಅಂತರದಲ್ಲಿ ಭರ್ಜರಿ ಜಯ ದಾಖಲಿಸಿತು. ಚೊಚ್ಚಲ ಮಹಿಳಾ ವಿಶ್ವಕಪ್ ಕ್ರಿಕೆಟ್ ಚಾಂಪಿಯನ್ ಆಗಿ ಭಾರತ ಹೊಮ್ಮಿದೆ. ಇಸವಿ 2008 ರಲ್ಲಿ ಭಾರತ ಮೊದಲ ಬಾರಿ ಫೈನಲ್ ಪ್ರವೇಶಿಸಿದಾಗ ಆಸೀಸ್ ವಿರುದ್ಧ 98 ರನ್‌ಗಳಿಂದ ಸೋತಿತ್ತು. 2017ರಲ್ಲಿ ಇಂಗ್ಲೆಂಡ್ ವಿರುದ್ಧ 9 ರನ್‌ಗಳ ವಿರೋಚಿತ ಸೋಲು ಕಂಡಿದ್ದ ಭಾರತ 3ನೇ ಬಾರಿಗೆ ಫೈನಲ್‌ನಲ್ಲಿ ಟ್ರೋಫಿ ಎತ್ತಿ ಹಿಡಿಯುವಲ್ಲಿ ಯಶಸ್ವಿಯಾಗಿದೆ.

## 46ನೇ ಓವರ್‌ನಲ್ಲಿ ಟ್ವಿಸ್ಟ್ ಮೇಲೆ ಟ್ವಿಸ್ಟ್

46ನೇ ಓವರ್‌ನಲ್ಲಿ ಕ್ರೀಸ್‌ಗೆ ಬಂದ ಶ್ರೀ ಚಾರಿಣಿ 5 ಎಸೆತಗಳಲ್ಲೇ 14 ರನ್ ಬಿಟ್ಟುಕೊಟ್ಟರು. ಇದರಿಂದ ಮತ್ತೆ ಗೆಲುವು ದಕ್ಷಿಣ ಆಫ್ರಿಕಾ ವಿರುದ್ಧ ವಾಲಿತ್ತು. ಆದ್ರೆ ಕ್ರೀಸ್‌ನಲ್ಲಿದ್ದ ನಾಡಿನ್ ಡಿ ಕ್ಲರ್ಕ್ ಓವರ್‌ನ ಕೊನೇ ಎಸೆತದಲ್ಲಿ ಸಿಂಗಲ್ ತೆಗೆದುಕೊಳ್ಳಲು ಹೋಗಿ ನಾನ್‌ಸ್ಟ್ರೈಕ್‌ನಲ್ಲಿದ್ದ ಅಯಬೊಂಗಾ ಖಾಕಾ ಅವರನ್ನ ರನೌಟ್ ಮಾಡಿಸಿದ್ರು.

ಇದಕ್ಕೂ ಮುನ್ನ, 42ನೇ ಓವರ್‌ನಲ್ಲಿ ಬೌಲಿಂಗ್‌ಗೆ ಬಂದ ದೀಪ್ತಿ ಶರ್ಮಾ ಮೊದಲ ಎಸೆತದಲ್ಲೇ ಕ್ಯಾಪ್ಟನ್‌ಗೆ ಪೆವಿಲಿಯನ್ ದಾರಿ ತೋರಿದರು. ದೀಪ್ತಿ ಬೌಲಿಂಗ್‌ಗೆ ಲಾರಾ ಸಿಕ್ಸರ್ ಬಾರಿಸಲು ಯತ್ನಿಸಿದರು. ಈ ವೇಳೆ ಬೌಂಡರಿ ಬಳಿ ಅಮನ್‌ಜೋತ್ ಕೌರ್ ಸೆನ್ಸೇಷನ್ ಕ್ಯಾಚ್ ಹಿಡಿದು ದಿಗ್ಭ್ರಮೆಗೊಳಿಸಿದರು! ಮತ್ತೆ 4ನೇ ಎಸೆತದಲ್ಲಿ ಕ್ಲೋಯ್ ಟ್ರಯಾನ್ ಅವರನ್ನ ಎಲ್‌ಬಿಡಬ್ಲ್ಯೂ ಔಟ್ ಮಾಡಿದರು. ಇದು ಪಂದ್ಯದ ಫಲಿತಾಂಶದ ಮೇಲೆ ಪರಿಣಾಮ ಬೀರಿತು. ಮತ್ತೆ 47ನೇ ಓವರ್‌ನಲ್ಲಿ ದೀಪ್ತಿ ಶರ್ಮಾ ಬೌಲಿಂಗ್‌ಗೆ ಬಂದರು. ಇತ್ತ ಕ್ರೀಸ್‌ನಲ್ಲಿದ್ದ ನಾಡಿನ್ ಡಿ ಕ್ಲರ್ಕ್ ಮೊದಲ ಎರಡು ಎಸೆತಗಳನ್ನ ಡಾಟ್ ಮಾಡಿಕೊಂಡರು. 3ನೇ ಎಸೆತದಲ್ಲಿ ಬೌಂಡರಿಗಟ್ಟುವ ಪ್ರಯತ್ನ ಮಾಡಿದರು. ಆದ್ರೆ ಕೌರ್ ಡ್ರೈವ್‌ನಲ್ಲಿ ಫೀಲ್ಡಿಂಗ್‌ನಲ್ಲಿದ್ದ ನಾಯಕಿ ಹರ್ಮನ್ ಪ್ರೀತ್ ಕೌರ್ ಅದ್ಭುತ ಕ್ಯಾಚ್ ಹಿಡಿಯುವ ಮೂಲಕ ಹರಿಣಿಯರನ್ನು ಆಲೌಟ್ ಮಾಡಿದರು. ಇದರೊಂದಿಗೆ ಭಾರತದ ವೀರ ವನಿತೆಯರ ತಂಡ 'ಚಾಂಪಿಯನ್ಸ್' ಪಟ್ಟ ಅಲಂಕರಿಸಿತು!

## ಜಯ್ ಶಾಗೆ ಕೌರ್ ಏನು ಮಾಡಿದ್ರು ನೋಡಿ



ಭಾರತದ ನಾಯಕಿ ಹರ್ಮನ್‌ಪ್ರೀತ್ ಕೌರ್ ಟ್ರೋಫಿಯನ್ನು ಪಡೆಯಲು ಹೊರಟಿದ್ದಾಗ, ಎಲ್ಲರ ಗಮನ ಸೆಳೆದ ಒಂದು ಘಟನೆ ನಡೆಯಿತು. ಐಸಿಸಿ ಅಧ್ಯಕ್ಷ ಜಯ್ ಶಾ ಟ್ರೋಫಿ ಹಿಡಿದು ವೇದಿಕೆಯ ಮೇಲೆ ನಿಂತಿದ್ದರು. ಹರ್ಮನ್‌ಪ್ರೀತ್ ಕೌರ್ ಬಂದು ಅವರ ಕೈಕುಲುಕಿದರು. ನಂತರ ಹರ್ಮನ್ ಅವರು ಜಯ್ ಶಾ ಅವರ ಪಾದಗಳನ್ನು ಮುಟ್ಟಲು ಪ್ರಯತ್ನಿಸಿದರು, ಆದರೆ ಜಯ್ ಶಾ ಅವರು ಹಾಗೆ ಮಾಡದಂತೆ ತಡೆದರು. ನಂತರ ಅವರು ಆಕೆಯ ಮುಂದೆ ನಮಸ್ಕರಿಸಿ ಗೌರವ ವ್ಯಕ್ತಪಡಿಸಿದರು. ಜಯ್ ಶಾ ಹರ್ಮನ್‌ಪ್ರೀತ್ ಕೌರ್ ಅವರಿಗೆ ಗೌರವ ತೋರಿಸಿದ್ದಲ್ಲದೆ, ನಮ್ಮ ದೇಶದ ಹೆಣ್ಣುಮಕ್ಕಳು ಯಾವುದರಲ್ಲೂ ಕಡಿಮೆಯಿಲ್ಲ ಎಂದು ತೋರಿಸಿದರು.

## ಪಂದ್ಯದ ದಿಕ್ಕು ಬದಲಿಸಿದ ಆ ಒಂದು ಕ್ಯಾಚ್!

ಒಂದು ಹಂತದಲ್ಲಿ ಶತಕ ಬಾರಿಸಿದ್ದ ದಕ್ಷಿಣ ಆಫ್ರಿಕಾ ಮಹಿಳಾ ತಂಡದ ನಾಯಕಿ ಲಾರಾ ವೊಲ್ವಾರ್ಡ್ ಬಿರುಸಿನ ಆಟಕ್ಕೆ ಮುಂದಾಗುತ್ತಿದ್ದರು. ಓವರ್ ಕೊನೆಯಲ್ಲಿ ಸ್ಟ್ರೈಕ್ ಉಳಿಸಿಕೊಳ್ಳುತ್ತಾ ಪಂದ್ಯವನ್ನ ಗೆಲುವಿನತ್ತ ಕೊಂಡೊಯ್ಯುತ್ತಿದ್ದರು. ಕೊನೆಯವರೆಗೂ ಲಾರಾ ಕ್ರೀಸ್‌ನಲ್ಲಿ ನಿಂತರೇ ದಕ್ಷಿಣ ಆಫ್ರಿಕಾ ಗೆಲುವು ಖಚಿತ ಎಂದೇ ಭಾವಿಸಲಾಗಿತ್ತು. ಆದ್ರೆ 42ನೇ ಓವರ್‌ನಲ್ಲಿ ದೀಪ್ತಿ ಶರ್ಮಾ ಕೊಟ್ಟ ಟ್ವಿಸ್ಟ್ ಪಂದ್ಯ ಗತಿಯನ್ನೇ ತಲೆಕೆಳಗೆ ಮಾಡಿತು. 42ನೇ ಓವರ್‌ನಲ್ಲಿ ಬೌಲಿಂಗ್‌ಗೆ ಬಂದ ದೀಪ್ತಿ ಶರ್ಮಾ ಮೊದಲ ಎಸೆತದಲ್ಲೇ ಕ್ಯಾಪ್ಟನ್‌ಗೆ ಪೆವಿಲಿಯನ್ ದಾರಿ ತೋರಿದರು. ದೀಪ್ತಿ ಬೌಲಿಂಗ್‌ಗೆ ಲಾರಾ ಸಿಕ್ಸರ್ ಬಾರಿಸಲು ಯತ್ನಿಸಿದರು. ಈ ವೇಳೆ ಬೌಂಡರಿ ಬಳಿ ಅಮನ್ ಜೋತ್ ಕೌರ್ ಸೆನ್ಸೆಷನ್ ಕ್ಯಾಚ್ ಹಿಡಿದು ದಿಗ್ಭ್ರಮೆಗೊಳಿಸಿದರು. ಮತ್ತೆ 4ನೇ ಎಸೆತದಲ್ಲಿ ಕ್ಲೋಯ್ ಟ್ರಯಾನ್ ಅವರನ್ನ ಎಲ್‌ಬಿಡಬ್ಲ್ಯೂ ಔಟ್ ಮಾಡಿದರು. ಇದು ಪಂದ್ಯದ ಫಲಿತಾಂಶದ ಮೇಲೆ ಪರಿಣಾಮ ಬೀರಿತು.

## ವೀಲ್ ಚೇರ್‌ನಲ್ಲಿ ಆಗಮಿಸಿ ಸಂಭ್ರಮಿಸಿದ ಟೀಮ್ ಇಂಡಿಯಾ ಆಟಗಾರ್ತಿ

ಭಾರತ ತಂಡವು 52 ವರ್ಷಗಳ ಬಳಿಕ ಮಹಿಳಾ ಏಕದಿನ ವಿಶ್ವಕಪ್‌ನಲ್ಲಿ ಚಾಂಪಿಯನ್ ಪಟ್ಟ ಅಲಂಕರಿಸಿದೆ. ಈ ಚಾಂಪಿಯನ್ ಪಟ್ಟದ ಬೆನ್ನಲ್ಲೇ ಟೀಮ್ ಇಂಡಿಯಾ ಆಟಗಾರ್ತಿ ಪ್ರತಿಕಾ ರಾವಲ್ ಮೈದಾನದಲ್ಲಿ ಕಾಣಿಸಿಕೊಂಡಿದ್ದರು. ಅದು ಸಹ ವೀಲ್ ಚೇರ್‌ನಲ್ಲಿ ಆಗಮಿಸುವ ಮೂಲಕ..! ಪ್ರತಿಕಾ ರಾವಲ್ ಈ ಬಾರಿಯ ಭಾರತ ತಂಡದ ಭಾಗವಾಗಿದ್ದರು. ಅಲ್ಲದೆ ಮೊದಲ 7 ಪಂದ್ಯಗಳಲ್ಲಿ ಕಣಕ್ಕಿಳಿದಿದ್ದರು. ಆದರೆ ಬಾಂಗ್ಲಾದೇಶ್ ವಿರುದ್ಧದ ಕೊನೆಯ ಲೀಗ್ ಪಂದ್ಯದಲ್ಲಿ ಫೀಲ್ಡಿಂಗ್ ಮಾಡುವ ವೇಳೆ ಪ್ರತಿಕಾ ಅವರ ಕಾಲಿಗೆ ಗಂಭೀರ ಗಾಯವಾಗಿತ್ತು. ಹೀಗಾಗಿ ಸೆಮಿಫೈನಲ್ ಹಾಗೂ ಫೈನಲ್ ಪಂದ್ಯದಿಂದ ಹೊರಗುಳಿದಿದ್ದರು. ಆದರೆ ಫೈನಲ್ ಪಂದ್ಯಕ್ಕೂ ಮುನ್ನ ವೈದ್ಯಕೀಯ ಚಿಕಿತ್ಸೆ ಪಡೆದಿದ್ದ ಪ್ರತಿಕಾ ರಾವಲ್ ವೀಲ್ ಚೇರ್‌ನೊಂದಿಗೆ ಆಗಮಿಸಿ ಅಂತಿಮ ಪಂದ್ಯವನ್ನು ವೀಕ್ಷಿಸಿದ್ದರು. ಅಲ್ಲದೆ ಟೀಮ್ ಇಂಡಿಯಾ ವಿಜಯೋತ್ಸವದಲ್ಲಿ ಭಾಗಿಯಾಗುವ ಮೂಲಕ ಡ್ಯಾನ್ಸ್ ಮಾಡಿ ಸಂಭ್ರಮಿಸಿದರು. ಇದೀಗ ಪ್ರತಿಕಾ ರಾವಲ್ ಅವರ ಡ್ಯಾನ್ಸಿಂಗ್ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದ್ದು, ಅಭಿಮಾನಿಗಳಿಂದ ಭಾರೀ ಮೆಚ್ಚುಗೆಗಳು ವ್ಯಕ್ತವಾಗುತ್ತಿದೆ.



ಅಂದಹಾಗೆ ಈ ಬಾರಿಯ ವಿಶ್ವಕಪ್‌ನಲ್ಲಿ 6 ಇನಿಂಗ್ಸ್‌ಗಳಲ್ಲಿ ಆರಂಭಿಕಳಾಗಿ ಕಣಕ್ಕಿಳಿದಿದ್ದ ಪ್ರತಿಕಾ ರಾವಲ್ ಒಟ್ಟು 308 ರನ್‌ಗಳಿಸಿ ಟೀಮ್ ಇಂಡಿಯಾ ಸೆಮಿಫೈನಲ್‌ಗೇರುವಲ್ಲಿ ಪ್ರಮುಖ ಪಾತ್ರವಹಿಸಿದ್ದರು. ಇದೀಗ ಅದೇ ಟೀಮ್ ಇಂಡಿಯಾ ಚಾಂಪಿಯನ್ ಪಟ್ಟ ಅಲಂಕರಿಸಿ ಹೊಸ ಇತಿಹಾಸ ನಿರ್ಮಿಸಿದೆ.



## ಟೂರ್ನಿಯಲ್ಲಿ ಗರಿಷ್ಟ ವಿಕೆಟ್ ಟೇಕರ್

ದೀಪ್ತಿ ಶರ್ಮಾ ಅವರು 22 ವಿಕೆಟ್‌ಗಳೊಂದಿಗೆ ಅತಿ ಹೆಚ್ಚು ವಿಕೆಟ್ ಪಡೆದ ಪ್ರಶಸ್ತಿಯನ್ನು ಗಳಿಸಿದರು. ವಿಶ್ವಕಪ್ ಫೈನಲ್‌ನಲ್ಲಿ ಐದು ವಿಕೆಟ್‌ಗಳನ್ನು ಪಡೆದ ಮೊದಲ ಆಟಗಾರ್ತಿ ಎಂಬ ಹೆಗ್ಗಳಿಕೆಗೆ ಪಾತ್ರರಾದರು.

## ವಿಶ್ವಕಪ್ ಗೆದ್ದ ಭಾರತ ತಂಡಕ್ಕೆ ಸಿಕ್ಕ ಬಹುಮಾನ ಮೊತ್ತವೆಷ್ಟು

- ಮಹಿಳಾ ಏಕದಿನ ವಿಶ್ವಕಪ್ ಆರಂಭಕ್ಕೂ ಮುನ್ನ ಐಸಿಸಿ ಅಧ್ಯಕ್ಷ ಜಯ್ ಶಾ ಅವರು ಪ್ರಶಸ್ತಿ ಮೊತ್ತವನ್ನು ಹೆಚ್ಚಿಸುವುದಾಗಿ ತಿಳಿಸಿದ್ದರು. ಅದರಂತೆ ಇದೀಗ ಚಾಂಪಿಯನ್ ಪಟ್ಟ ಅಲಂಕರಿಸಿದ ಟೀಮ್ ಇಂಡಿಯಾಗೆ ಬಹುಮಾನ ಮೊತ್ತವಾಗಿ 4.48 ಅಮೆರಿಕನ್ ಮಿಲಿಯನ್ ಡಾಲರ್ ಲಭಿಸಿದೆ. ಅಂದರೆ ಭಾರತೀಯ ರೂಪಾಯಿ ಮೌಲ್ಯ ಸುಮಾರು 40 ಕೋಟಿ ರೂ.
- 2022 ರಲ್ಲಿ ಆಸ್ಟ್ರೇಲಿಯಾ ತಂಡ ಚಾಂಪಿಯನ್ ಪಟ್ಟ ಅಲಂಕರಿಸಿದ್ದ ವೇಳೆ ಐಸಿಸಿ ನೀಡಿದ್ದ ಬಹುಮಾನ ಮೊತ್ತ 1.32 ಮಿಲಿಯನ್ ಯುಎಸ್ ಡಾಲರ್ (ಸುಮಾರು 12 ಕೋಟಿ ರೂ.) ಮಾತ್ರ. ಇದೀಗ ಮಹಿಳಾ ಟೂರ್ನಿಯ ಪ್ರಶಸ್ತಿಯನ್ನು ದುಪ್ಪಟ್ಟು ಮಾಡಲಾಗಿರುವುದು ವಿಶೇಷ.
- ಇನ್ನು ರನ್ನರ್ ಅಪ್ ಆಗಿರುವ ಸೌತ್ ಆಫ್ರಿಕಾ 2.24 ಮಿಲಿಯನ್ ಅಮೆರಿಕನ್ ಡಾಲರ್ ಬಹುಮಾನ ಮೊತ್ತವಾಗಿ ಪಡೆದುಕೊಂಡಿದೆ. ಅಂದರೆ ಭಾರತೀಯ ರೂಪಾಯಿ ಮೌಲ್ಯ ಸುಮಾರು 20 ಕೋಟಿ ರೂ.
- ಹಾಗೆಯೇ ಸೆಮಿಫೈನಲ್ ಆಡಿದ ಆಸ್ಟ್ರೇಲಿಯಾ ಹಾಗೂ ಇಂಗ್ಲೆಂಡ್ ತಂಡಗಳು ತಲಾ 1.12 ಮಿಲಿಯನ್ ಅಮೆರಿಕನ್ ಡಾಲರ್ (ಸುಮಾರು 10 ಕೋಟಿ ರೂ.) ಪಡೆಯಲಿದ್ದಾರೆ.
- ಮಹಿಳಾ ಏಕದಿನ ವಿಶ್ವಕಪ್ ಪಂದ್ಯಾವಳಿಯ ಒಟ್ಟು ಬಹುಮಾನದ ಮೊತ್ತ USD 13.88 ಮಿಲಿಯನ್ (ರೂ. 123 ಕೋಟಿ) ಆಗಿದ್ದು, 2022ರಲ್ಲಿ ನ್ಯೂಝಿಲೆಂಡ್‌ನಲ್ಲಿ ನಡೆದ ಹಿಂದಿನ ಆವೃತ್ತಿಯಲ್ಲಿ ನೀಡಲಾಗಿದ್ದ USD3.5 ಮಿಲಿಯನ್ (ರೂ. 31 ಕೋಟಿ) ಗಿಂತ ಸುಮಾರು ನಾಲ್ಕು ಪಟ್ಟು ಹೆಚ್ಚು ಎಂಬುದು ವಿಶೇಷ.
- ಗಮನಾರ್ಹವಾಗಿ, ಈ ಸಂಖ್ಯೆ 2023 ರ ಪುರುಷರ ಕ್ರಿಕೆಟ್ ವಿಶ್ವಕಪ್‌ನ USD 10 ಮಿಲಿಯನ್ (ಸುಮಾರು ರೂ. 89 ಕೋಟಿ) ಬಹುಮಾನ ಮೊತ್ತವನ್ನು ಮೀರಿದೆ. ಅಂದರೆ ಪುರುಷರ ಏಕದಿನ ವಿಶ್ವಕಪ್‌ನಲ್ಲಿ ನೀಡಲಾಗಿದ್ದು ಒಟ್ಟು 89 ಕೋಟಿ ರೂ. ಬಹುಮಾನ ಮೊತ್ತ. ಆದರೆ ಈ ಬಾರಿ ಮಹಿಳಾ ತಂಡಗಳಿಗೆ ಐಸಿಸಿ ಒಟ್ಟು 123 ಕೋಟಿ ರೂ. ಬಹುಮಾನ ಮೊತ್ತ ವಿತರಿಸಿದೆ.

## ತಗೋ ಕೊಡಲ್ಲ ಹೊಸ ಸೆಲೆಬ್ರೇಷನ್

ಭಾರತ ಮಹಿಳಾ ತಂಡದ ವಿಶ್ವಕಪ್ ಕನಸು ಕೊನೆಗೂ ನನಸಾಗಿದೆ. ನವಿ ಮುಂಬೈನಲ್ಲಿ ನಡೆದ 13ನೇ ಆವೃತ್ತಿಯ ಮಹಿಳಾ ಏಕದಿನ ವಿಶ್ವಕಪ್‌ನ ಫೈನಲ್ ಪಂದ್ಯದಲ್ಲಿ ಬಲಿಷ್ಠ ಸೌತ್ ಆಫ್ರಿಕಾ ತಂಡವನ್ನು ಮಣಿಸಿ ಟೀಮ್ ಇಂಡಿಯಾ ಚೊಚ್ಚಲ ಬಾರಿಗೆ ಚಾಂಪಿಯನ್ ಪಟ್ಟ ಅಲಂಕರಿಸಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಟೀಮ್ ಇಂಡಿಯಾ 50 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು 298 ರನ್ ಕಲೆಹಾಕಿತ್ತು.

ಈ ಗುರಿಯನ್ನು ಬೆನ್ನತ್ತಿದ ಸೌತ್ ಆಫ್ರಿಕಾ ತಂಡ 45.3 ಓವರ್‌ಗಳಲ್ಲಿ 246 ರನ್‌ಗಳಿಸಿ ಆಲೌಟ್ ಆಗಿದೆ. ಈ ಮೂಲಕ ಭಾರತ ತಂಡವು 52 ರನ್‌ಗಳ ಜಯಭೇರಿ ಬಾರಿಸಿ ಚಾಂಪಿಯನ್ ಪಟ್ಟ ಅಲಂಕರಿಸಿದೆ.

ಈ ಚಾಂಪಿಯನ್ ಪಟ್ಟದೊಂದಿಗೆ ಟೀಮ್ ಇಂಡಿಯಾ ನಾಯಕಿ ಹರ್ಮನ್‌ಪ್ರೀತ್ ಕೌರ್ ಹೊಸ ಸೆಲೆಬ್ರೇಷನ್‌ಗೆ ನಾಂದಿಯಾಡಿದ್ದಾರೆ. ಕಳೆದ ಕೆಲ ವರ್ಷಗಳಿಂದ ಚಾಂಪಿಯನ್ ಪಟ್ಟ ಅಲಂಕರಿಸುವ ತಂಡ ರೊಬೊಟ್ ವಾಕ್‌ನೊಂದಿಗೆ ಬಂದು ಟ್ರೋಫಿ ಸ್ವೀಕರಿಸುತ್ತಿದ್ದರು.

ಆದರೆ ಹರ್ಮನ್‌ಪ್ರೀತ್ ಕೌರ್ ಈ ನಡೆಯನ್ನು ಅನುಕರಿಸಿಲ್ಲ. ಬದಲಾಗಿ ಸಹ ಆಟಗಾರ್ತಿಯರಿಗೆ ಟ್ರೋಫಿ ತಗೋ ಕೊಡಲ್ಲ ಎನ್ನುವಂತೆ ಸಂಭ್ರಮಿಸಿ ಕಪ್ ಎತ್ತಿ ಹಿಡಿದಿದ್ದಾರೆ. ಇದುವೇ ಮುಂದೆ ಹೊಸ ಟ್ರೆಂಡ್ ಸೃಷ್ಟಿಸುವ ಸಾಧ್ಯತೆಯಿದೆ.








"ಮುಂದಿನ ಪೀಳಿಗೆಗೆ ಸ್ಫೂರ್ತಿ, ನಿಮ್ಮ ನಿರ್ಭೀತ ಕ್ರಿಕೆಟ್ ಮತ್ತು ನಂಬಿಕೆಯಿಂದ ನೀವು ಪ್ರತಿಯೊಬ್ಬ ಭಾರತೀಯನನ್ನು ಹೆಮ್ಮೆಪಡುವಂತೆ ಮಾಡಿದ್ದೀರಿ. ನೀವು ಎಲ್ಲಾ ಪ್ರಶಂಸೆಗಳಿಗೆ ಅರ್ಹರು ಮತ್ತು ಈ ಕ್ಷಣವನ್ನು ಪೂರ್ಣವಾಗಿ ಆನಂದಿಸಿ. ಹರ್ಮನ್ ಮತ್ತು ತಂಡಕ್ಕೆ ಅಭಿನಂದನೆಗಳು. ಜೈ ಹಿಂದ್

-ವಿರಾಟ್ ಕೊಹ್ಲಿ, ಕ್ರಿಕೆಟಿಗ



"ಕ್ರಿಕೆಟ್ ಪ್ರೇಮಿಯಾದ ನನಗಿದು ಖುಷಿ ಕೊಟ್ಟಿದೆ. ವಿಶ್ವ ಚಾಂಪಿಯನ್ಸ್ ಭಾರತ 2025ರ ಐಸಿಸಿ ಮಹಿಳಾ ಕ್ರಿಕೆಟ್ ವಿಶ್ವಕಪ್‌ನಲ್ಲಿ ಅದ್ಭುತ ಗೆಲುವು ಸಾಧಿಸಿದ ಟೀಂ ಇಂಡಿಯಾಕ್ಕೆ ಅಭಿನಂದನೆಗಳು. ನಿಮ್ಮ ಗೆಲುವು ರಾಷ್ಟ್ರಕ್ಕೆ ಹೆಮ್ಮೆಯ ಕ್ಷಣ ಮತ್ತು ಕನಸು ಕಾಣುವ ಪ್ರತಿಯೊಬ್ಬ ಯುವತಿಯರಿಗೂ ಸ್ಫೂರ್ತಿ.

ಡಿಕೆ ಶಿವಕುಮಾರ್, ಉಪಮುಖ್ಯಮಂತ್ರಿ





"ಇದು ಇಡೀ ರಾಷ್ಟ್ರಕ್ಕೆ ಹೆಮ್ಮೆಯ ಕ್ಷಣ, ನಮ್ಮ ದೇಶದ ಹೆಣ್ಣುಮಕ್ಕಳ ಈ ಯಶಸ್ಸು ಲಕ್ಷಾಂತರ ಯುವತಿಯರಿಗೆ ದೊಡ್ಡ ಕನಸು ಕಾಣಲು ಸ್ಫೂರ್ತಿ ನೀಡುತ್ತದೆ, ''ನಮ್ಮ ಮಹಿಳಾ ಕ್ರಿಕೆಟ್ ತಂಡದ ಅದ್ಭುತ ಗೆಲುವಿಗೆ ನಾನು ಅಭಿನಂದಿಸಲು ಬಯಸುತ್ತೇನೆ'' ಪ್ರತಿಯೊಂದು ಕ್ಷೇತ್ರದಲ್ಲೂ ಶ್ರೇಷ್ಠತೆಯನ್ನು ಸಾಧಿಸಲು ಪ್ರೇರಣೆ ನೀಡುತ್ತದೆ ಎಂಬುದು ಖಚಿತ. ನಮಗೆ ನಿಮ್ಮ ಬಗ್ಗೆ ಹೆಮ್ಮೆಯಿದೆ, ನಾವು ಗರ್ವದಿಂದ ಬೀಗುವಂತೆ ಮಾಡಿದ್ದೀರಿ... ''ನಮ್ಮ ಮಹಿಳಾ ಕ್ರಿಕೆಟ್ ತಂಡವನ್ನು ಮಾತ್ರವಲ್ಲದೆ ಅವರ ಪೋಷಕರನ್ನೂ ನಾನು ಅಭಿನಂದಿಸಲು ಬಯಸುತ್ತೇನೆ. ಮಹಿಳೆಯರಿಗೆ ಸರಿಯಾದ ನಿರ್ದೇಶನ ಮತ್ತು ಅವಕಾಶಗಳನ್ನು ನೀಡಿದಾಗ ಮಾತ್ರ ಇಂತಹ ಅದ್ಭುತವಾದ ಫಲಿತಾಂಶಗಳನ್ನು ನೋಡಲು ಸಾಧ್ಯ. ಇಂದು, ನಮ್ಮ ಹೆಣ್ಣುಮಕ್ಕಳು ಯುದ್ಧ ವಿಮಾನಗಳನ್ನು ಹಾರಿಸುತ್ತಿದ್ದಾರೆ, ಗಡಿಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ ಮತ್ತು ನಮ್ಮ ರಾಷ್ಟ್ರವನ್ನು ರಕ್ಷಿಸುತ್ತಿದ್ದಾರೆ. ಒಂದು ಕಾಲದಲ್ಲಿ ಬೇಟಿ ಬಚಾವೋ, ಬೇಟಿ ಪಡಾವೋ ಅಭಿಯಾನವನ್ನು ಅಪಹಾಸ್ಯ ಮಾಡಿದವರು ಈಗ ಅದರ ಪರಿಣಾಮವನ್ನು ನೋಡುತ್ತಿದ್ದಾರೆ. ನಮ್ಮ ಸರ್ಕಾರ ನಾರಿ ಶಕ್ತಿಯನ್ನು ಉತ್ತೇಜಿಸಲು ನಿರಂತರವಾಗಿ ಕೆಲಸ ಮಾಡಿದೆ ಹಾಗೂ ಮಾಡುತ್ತಲೇ ಇದೆ''

-ನರೇಂದ್ರ ಮೋದಿ, ಪ್ರಧಾನಮಂತ್ರಿ



"''ಐಸಿಸಿ ಮಹಿಳಾ ಕ್ರಿಕೆಟ್ ವಿಶ್ವಕಪ್ 2025 ಗೆದ್ದ ಭಾರತೀಯ ಮಹಿಳಾ ಕ್ರಿಕೆಟ್ ತಂಡದ ಪ್ರತಿಯೊಬ್ಬ ಸದಸ್ಯರಿಗೂ ನನ್ನ ಹೃತ್ಪೂರ್ವಕ ಅಭಿನಂದನೆಗಳು! ಅವರು ಮೊದಲ ಬಾರಿಗೆ ವಿಶ್ವಕಪ್ ಗೆಲ್ಲುವ ಮೂಲಕ ಇತಿಹಾಸ ಸೃಷ್ಟಿಸಿದ್ದಾರೆ. ಅವರು ಚೆನ್ನಾಗಿ ಆಡುತ್ತಿದ್ದಾರೆ. ಇಂದು ಅವರು ತಮ್ಮ ಪ್ರತಿಭೆ ಮತ್ತು ಪ್ರದರ್ಶನಕ್ಕೆ ತಕ್ಕ ಫಲಿತಾಂಶವನ್ನು ಪಡೆದಿದ್ದಾರೆ. ಈ ಮಹತ್ವದ ಕ್ಷಣವು ಮಹಿಳಾ ಕ್ರಿಕೆಟ್ ಅನ್ನು ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯುತ್ತದೆ. ಈ ಯುವತಿಯರು ಭಾರತವನ್ನು ಹೆಮ್ಮೆಪಡುವಂತೆ ಮಾಡಿದ ರೀತಿಯನ್ನು ನಾನು ಮೆಚ್ಚುತ್ತೇನೆ''

-ದ್ರೌಪದಿ ಮುರ್ಮು, ರಾಷ್ಟ್ರಪತಿ



"ಭಾರತೀಯ ಮಹಿಳಾ ಕ್ರಿಕೆಟ್ ತಂಡ ಅದ್ಭುತ ಆಟದ ಮೂಲಕ ವಿಶ್ವಕಪ್ ಕಿರೀಟವನ್ನು ಮುಡಿಗೇರಿಸಿಕೊಂಡಿದೆ. ವಿಶ್ವವಿಜೇತ ಭಾರತೀಯ ಕ್ರಿಕೆಟ್ ಆಟಗಾರ್ತಿಯರಿಗೆ ಅಭಿನಂದನೆಗಳು. ಇಡೀ ಪಂದ್ಯಾವಳಿಯುದ್ದಕ್ಕೂ ಅತ್ಯಂತ ಸಂಘಟಿತ ಪ್ರದರ್ಶನ ನೀಡುತ್ತಾ ಬಂದಿದ್ದ ಭಾರತೀಯ ಆಟಗಾರ್ತಿಯರು ನಿಜಕ್ಕೂ ಈ ಪ್ರಶಸ್ತಿಗೆ ಅರ್ಹರು. ಕ್ರಿಕೆಟ್ ಪ್ರೇಮಿಯಾದ ನನಗಿದು ಹೆಚ್ಚು ಖುಷಿ ಕೊಟ್ಟಿದೆ. ಇತಿಹಾಸ ಸೃಷ್ಟಿಯಾದ ಈ ದಿನ ಬಹುಕಾಲ ನೆನಪಿನಲ್ಲಿ ಉಳಿಯುವಂತಹುದ್ದು.

-ಸಿದ್ದರಾಮಯ್ಯ, ಮುಖ್ಯಮಂತ್ರಿ

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966